ಸಂಪುಟ: 05 ಸಂಚಿಕೆ: 79 ಪುಟಗಳು: 08 ಸೋಮವಾರ 02 ಜೂನ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಮತ್ತೊಬ್ಬರ ಜೀವನ ಕಂಡು ಅಸೂಯೆ ಪಟ್ಟು ಹುಸಿ ನಗುವುದಕ್ಕಿಂತ ಅವರ ಆತ್ಮವನ್ನು ಅರಿತು ಆನಂದ ಪಟ್ಟರೆ ಅತ್ಯುತ್ಸಾಹ ಬರುವುದು

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮೂರು ತಿಂಗಳಲ್ಲಿ ಹೊಸಕೆರೆಹಳ್ಳಿ ಫ್ಲೈ ಓವರ್ ಸಂಚಾರಕ್ಕೆ ಮುಕ್ತ

• **ಉದಯವಾಹಿನಿ, ಬೆಂಗಳೂರು**

ಹೊರವರ್ತುಲ ರಸ್ತೆಯ ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ ಕೈಗೆತ್ತಿಕೊಂಡಿರುವ ಮೇಲ್ಸೇತುವೆ ಕಾಮಗಾರಿಯನ್ನು ಮುಂದಿನ ಮೂರು ತಿಂಗಳೊಳಗೆ ಪೂರ್ಣಗೊಳಿಸಿ, ವಾಹನ ಸಂಚಾರಕ್ಕೆ ಮುಕ್ತಗೊಳಿಸಬೇಕು, ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅಧಿಕಾರಿಗಳಿಗೆ ತಾಕೀತು ಮಾಡಿದರು. ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ನಾನಾ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು, ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ 500 ಮೀಟರ್ ಉದ್ದದ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದ್ದು, ಶೇ.75ರಷ್ಟು ಪೂರ್ಣಗೊಂಡಿದೆ. ಒಂದು ಬದಿಯಲ್ಲಿ ಡೌನ್ ರ್ಯಾಂಪ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ, ಎಂದು ತಿಳಿಸಿದರು. ಸರ್ವೀಸ್ ರಸ್ತೆಯನ್ನು ವಿಸ್ತರಿಸುವ ಸಂಬಂಧ ಪ್ರಸ್ತಾವನೆ ಸಲ್ಲಿಕೆಯಾಗಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ, ಸಂಚಾರ ಪೊಲೀಸ್ ವಿಭಾಗದೊಂದಿಗೆ ಸಮನ್ವಯ ಸಾಧಿಸಿ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಬೇಕು, ಎಂದು ಸೂಚಿಸಿದರು.

## ಕರ್ನಾಟಕದಲ್ಲಿ ಥಗ್ ಲೈಫ್‌ಗೆ ವಿರೋಧ, ಸರ್ಕಾರಕ್ಕೆ ಮನವಿ

• **ಉದಯವಾಹಿನಿ, ಬೆಂಗಳೂರು**

ಕಮಲ್ ಹಾಸನ್ ನಟಿಸಿರುವ 'ಥಗ್ ಲೈಫ್' ಸಿನಿಮಾ ಬಿಡುಗಡೆಗೆ ಇನ್ನು ಮೂರು ದಿನಗಳಷ್ಟೆ ಬಾಕಿ ಉಳಿದಿವೆ. ಕರ್ನಾಟಕದಲ್ಲಿ 'ಥಗ್ ಲೈಫ್' ಬಿಡುಗಡೆ ಆಗುವುದು ಬಹುತೇಕ ಅನುಮಾನವಾಗಿದೆ. ಸಿನಿಮಾ ವಿತರಕರು 'ಥಗ್ ಲೈಫ್' ಸಿನಿಮಾ ಬಿಡುಗಡೆ ಮಾಡದೇ ಇರಲು ನಿರ್ಧಾರ ಮಾಡಿರುವ ಸುದ್ದಿ ಹರಿದಾಡುತ್ತಿದೆ. ಕನ್ನಡಪರ ಸಂಘಟನೆಗಳಂತೂ, 'ಥಗ್ ಲೈಫ್' ಸಿನಿಮಾ ಬಿಡುಗಡೆ ಮಾಡಿದರೆ ಚಿತ್ರಮಂದಿರಗಳಿಗೆ ಬೆಂಕಿ ಹಚ್ಚುವುದಾಗಿ ಬೆದರಿಕೆ ಹಾಕಿವೆ. ಕರ್ನಾಟಕದಲ್ಲಿ ತೀವ್ರ ಹಿನ್ನೆಡೆ ಖಾತ್ರಿ ಆಗುತ್ತಿದ್ದಂತೆ ಕಮಲ್ ಹಾಸನ್ ತಮಿಳುನಾಡು ಸರ್ಕಾರದ ಬಳಿ ವಿಶೇಷ ಮನವಿಯೊಂದನ್ನು ಮಾಡಿದ್ದಾರೆ. 'ಥಗ್ ಲೈಫ್' ಸಿನಿಮಾ ಜೂನ್ 5 ರಂದು ಬಿಡುಗಡೆ ಆಗಲಿದೆ. ಇದೀಗ ತಮಿಳುನಾಡು ಸರ್ಕಾರದ ಬಳಿ ಮನವಿ ಮಾಡಿರುವ ಕಮಲ್ ಹಾಸನ್, ಸಿನಿಮಾ ಟಿಕೆಟ್ ದರಗಳನ್ನು ಕಡಿಮೆ ಮಾಡುವಂತೆ ವಿನಂತಿಸಿದ್ದಾರೆ.

## ಕೊರೋನಾ ಮಧ್ಯೆ ಸಾರಿ ಮತ್ತು ಇನ್ಫ್ಲುಯೆನ್ಜ ಕೇಸ್‌ಗಳು ಹೆಚ್ಚಳ!

• **ಉದಯವಾಹಿನಿ, ಬೆಂಗಳೂರು**

ವೈರಸ್ ಜೊತೆ ಬದುಕಲು ಕಲಿಯಬೇಕು ಎಂದು ಹೇಳುವ ವೈದ್ಯರ ಮಾತು ನಿಜವಾಗುತ್ತಿದೆ. ಐದ್ಮೂರು ವರ್ಷಗಳ ಹಿಂದೆ ದೇಶದಲ್ಲಿ ಸಂಚಲನ ಸೃಷ್ಟಿಸಿದ್ದ ಕೊರೋನಾ ವೈರಸ್ ಮತ್ತೆ ಬಂದಿದೆ. ವೈರಲ್ ಫೀವರ್ ಹಾಗೂ ಸಾಂಕ್ರಾಮಿಕ ಖಾಯಿಲೆಗಳ ನಡುವೆ ರಾಜ್ಯದಲ್ಲಿ ಕೊರೋನಾ ಆತಂಕ ಶುರುವಾಗಿದೆ. ಕೊರೋನಾ ರೂಪಾಂತರ ಓಮಿಕ್ರಾನ್‌ನ ಉಪ ತಳಿಯಾದ ಜೆಎನ್.1 ವೈರಸ್ ರಾಜ್ಯಕ್ಕೆ ವಕ್ಕರಿಸಿದೆ. ಈ ನಡುವೆ ರಾಜ್ಯದಲ್ಲಿ ಜನವರಿಯಿಂದ ಈವರೆಗೆ 4536 ಸಾರಿ ಹಾಗೂ ಇನ್ಫ್ಲುಯೆನ್ಜ ಪ್ರಕರಣಗಳು ಪತ್ತೆಯಾಗಿದ್ದು, ಆರೋಗ್ಯ ಇಲಾಖೆಯ ಅಧಿಕಾರಿಗಳ ನಿದ್ದೆ ಕೆಡಿಸಿದೆ. ಕಳೆದ ಒಂದು ವಾರದ ಹಿಂದೆ 154 ಸಾರಿ ಪ್ರಕರಣಗಳು ಪತ್ತೆಯಾಗಿದ್ದು, ಒಟ್ಟು ಸಾರಿ ಪ್ರಕರಣಗಳ ಸಂಖ್ಯೆ 3357ಕ್ಕೆ ಏರಿಕೆಯಾಗಿದೆ. ಕಳೆದ ವಾರ 12 ಇನ್ಫ್ಲುಯೆನ್ಜ ಪ್ರಕರಣಗಳು ಪತ್ತೆಯಾಗಿದ್ದವು. ದಿನದಿಂದ ದಿನಕ್ಕೆ ಸಾರಿ ಹಾಗೂ ಇನ್ಫ್ಲುಯೆನ್ಜ ಪ್ರಕರಣಗಳು ಏರಿಕೆಯಾಗುತ್ತಿರುವುದು ಆರೋಗ್ಯ ಇಲಾಖೆಯ ಆತಂಕಕ್ಕೆ ಕಾರಣವಾಗಿದೆ. ಸಾರಿ, ಇನ್ಫ್ಲುಯೆನ್ಜ ವೈರಸ್ ಕೊರೋನಾ ಬರಲು ಕಾರಣವಾಗುತ್ತಿದ್ದು, ಆರೋಗ್ಯ ಇಲಾಖೆ ಈ ರೋಗ ಗುಣಲಕ್ಷಣ ಹೊಂದಿದವರ ಮೇಲೆ ಹೆಚ್ಚು ಗಮನ ಇರಿಸಿದೆ. ಸಾರಿ ಗುಣಲಕ್ಷಣ ಹೊಂದಿರುವವರಿಗೆ ಕೋವಿಡ್ ತಪಾಸಣೆ ಮಾಡಲು ಆರೋಗ್ಯ ಇಲಾಖೆ ಮುಂದಾಗಿದೆ.

## ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಬೇಡ ಎಂದಿಲ್ಲ

• **ಉದಯವಾಹಿನಿ, ಬೆಂಗಳೂರು**

ನನಗೆ ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಬೇಡವೆಂದು ಹೇಳಿಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ನನ್ನ ವಿರುದ್ಧ ಸ್ಥಳೀಯ ಲಾಬಿ ಏನು ಇಲ್ಲ. ಕೆಲವರು ಏನೋ ಹೇಳಬಹುದು, ಮೃತನ ಮನೆಗೆ ಹೋಗಿದ್ದೆ, ಅವನು ಎಲ್ಲಾರ ಜೊತೆ ಚೆನ್ನಾಗಿದ್ದ. ಹಿಂದೂಗಳ ಜೊತೆಯು ಚೆನ್ನಾಗಿದ್ದ ಅವನನ್ನ ಸಾಯಿಸಿ ಬಿಟ್ರು ಎಂಬ ಮಾತುಗಳು ಕೇಳಿಬಂತು ಎಂದಿದ್ದಾರೆ. ಉಸ್ತುವಾರಿ ಬದಲಾವಣೆ ಕೇಳಿಲ್ಲ, ಅವೆಲ್ಲ ಸುಮ್ಮನೆ ಎಲ್ಲಿಂದ ಬಂತೋ ಗೊತ್ತಿಲ್ಲ. ಜವಬ್ದಾರಿ ಇದ್ದಾಗ ಒಂದೊಂದು ಸಂದರ್ಭದಲ್ಲಿ ಎಲ್ಲಾ ಎದುರಿಸಬೇಕಾಗುತ್ತದೆ. ನಾನು ಅಷ್ಟೇ ಉತ್ಸಾಹದಲ್ಲಿ ಇದ್ದೇನೆ. ಜವಬ್ದಾರಿ ಇದ್ದಾಗ ಕೆಲವನ್ನು ಎದುರಿಸಬೇಕಾಗುತ್ತದೆ. ಎಲ್ಲಾವನ್ನೂ ನಿರ್ವಹಿಸಬೇಕಾಗುತ್ತದೆ. ನನ್ನ ಉಸ್ತುವಾರಿ ಭೇಟಿ ಬಗ್ಗೆ ಎಲ್ಲಾರಿಗೂ ಗಮನದಲ್ಲಿ ಇದೆ. ಯಾರೋ ಒಬ್ಬರು ಇಬ್ರು ಹೇಳಿಕೆ ಕೊಟ್ಟಿರಬಹುದು. ವಿನಾಕಾರಣ ರಾಜಕಾರಣ ಮಾಡಬಹುದು. ನಿನ್ನೆ ಮೊನ್ನೆ ಅಲ್ಲೇ ಇದ್ದೆ. ಕೆಲವರು ರಾಜಕಾರಣ ಮಾಡಬಹುದು ಸ್ಥಳಿಯರು ಎಲ್ಲಾರೂ ಸಹಕಾರ ಕೊಟ್ಟಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

**ಇಪ್ಪತ್ತು ವರ್ಷಗಳಿಂದಲೂ ಕುಣಿಗಲ್ ವ್ಯಾಪ್ತಿ ಅನ್ಯಾಯ**

**ಕುಣಿಗಲ್‌ಗೆ ಅಲರ್ಟ್ ಆಗಿರುವ ಮೂರು ಸಾವಿರ ಎಂಸಿಎಫ್‌ಟಿ ನೀರನ್ನ ಕೊಡೋಕೆ ಆಗಿಲ್ಲ**

**ಕೆನಾಲ್ ವಿರುದ್ಧ ಪ್ರೊಟೆಸ್ಟ್ ಗುಬ್ಬಿಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು**



# ಹೇಮಾವತಿ ಲಿಂಕ್ ಕೆನಾಲ್ 20 ಜನರ ವಿರುದ್ಧ ಎಫ್‌ಐಆರ್

### ತುಮಕೂರು ಜನರಿಗೆ ತೊಂದರೆ ಕೊಡಬೇಡಪ್ಪಾ



ಡಿಸಿಎಂ ಡಿ.ಕೆ ಶಿವಕುಮಾರ್‌ಗೆ ಕೋಟಿ ನಮಸ್ಕಾರ. ಯಾಕ್ ಗಂಟು ಬಿದ್ದಿದ್ದಾರೋ ಗೊತ್ತಿಲ್ಲ. ತುಮಕೂರು ಜನರಿಗೆ ತೊಂದರೆ ಕೊಡಬೇಡಿ ಎಂದು ಮನವಿ ಮಾಡುತ್ತಲೇ ವಿ. ಸೋಮಣ್ಣ ಕುಟುಕಿದ್ದಾರೆ. ತಿಪ್ಪಗೊಂಡನಹಳ್ಳಿ, ಮಂಚನ ಬೆಲೆಯಿಂದ ಹೊಸ ಲೈನ್ ಹಾಕುವ. ಕನಕಪುರಕ್ಕೂ ನೀರು ಬಿಟ್ಟುಕೊಳ್ಳಲಿ. ದೊಡ್ಡ ಬೋರ್ಡ್ ಹಾಕಿಸಿಕೊಳ್ಳಲಿ ಎಂದಿರುವ ಸೋಮಣ್ಣ, ನೀನೇ ಮಹಾರಾಜ, ನೀನೇ ಉಪಮುಖ್ಯಮಂತ್ರಿ ಎಂದು ವ್ಯಂಗ್ಯವಾಡಿದ್ದಾರೆ. ಸದ್ಯ ಹೇಮಾವತಿ ಜಲ ಹೋರಾಟ ಬೂದಿ ಮುಚ್ಚಿದ ಕೆಂಡದಂತಿದೆ. ರಾಜಕೀಯ ಜಟಾಪಟಿ ಜೋರಾಗಿದೆ. ದೂರು ದಾಖಲಾಗಿರೋದು ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಹೊಸ ಯುದ್ಧಕ್ಕೆ ನಾಂದಿ ಹಾಡಿದೆ.

• **ಉದಯವಾಹಿನಿ, ತುಮಕೂರು:**

ಜನರ ತೀವ್ರ ವಿರೋಧ ಹಾಗೂ ಪ್ರತಿಭಟನೆ ಹಿನ್ನೆಲೆ, ಕರ್ನಾಟಕ ಸರ್ಕಾರ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ನಿಷೇಧಾಜ್ಞೆ ನಡುವೆಯೂ ರೈತರು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಭಾಗವಹಿಸಿದ 20 ಜನರ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ.

**ಯಾರ‍್ಯಾರ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ:** ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಹೋರಾಟದ ಹಿನ್ನೆಲೆಯಲ್ಲಿ ಹಲವು ಮುಖಂಡರು, ಸ್ವಾಮೀಜಿಗಳ ಮೇಲೆ ಎಫ್‌ಐಆರ್ ದಾಖಲಾಗಿದೆ. ಶಾಸಕರಾದ ಎಂ.ಟಿ.ಕೃಷ್ಣಪ್ಪ, ಸುರೇಶ್‌ಗೌಡ, ಜಿ.ಬಿ.ಜ್ಯೋತಿಗಣೇಶ್, ತೇವಡಿ ಹಳ್ಳಿ ಮಠದ ಗೋಸಲ ಚನ್ನ ಬಸವೇಶ್ವರ ಶಿವಾಚಾರ್ಯ ಸ್ವಾಮೀಜಿ, ದೊಡ್ಡಗುಣಿ ಮಠದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಬೆಳ್ಳಾವಿ ಕಾರದ ಮಠದ ಕಾರದ ವೀರ ಬಸವ ಸ್ವಾಮೀಜಿ, ಗೊಲ್ಲಹಳ್ಳಿ ಮಠದ ವಿಭವ ವಿದ್ಯಾಶಂಕರ ಸ್ವಾಮೀಜಿ ಅವರ ಮೇಲೂ ಎಫ್‌ಐಆರ್ ದಾಖಲಾಗಿದೆ. ಜೊತಗೆ ಮಾಜಿ ಶಾಸಕ ಮಸಾಲೆ ಜಯರಾಮ್, ಮುಖಂಡರಾದ ಎಸ್.ಡಿ.ದಿಲೀಪ್‌ಕುಮಾರ್, ಜಿ.ಎನ್.ಬೆಟ್ಟಸ್ವಾಮಿ, ಎ.ಗೋವಿಂದರಾಜು, ಎಚ್.ಎಸ್.ರವಿಶಂಕರ್, ಪ್ರಭಾಕರ್, ಚಂದ್ರಶೇಖರ್ ಬಾಬು, ಶಾಂತಕುಮಾರ್, ಹೊನ್ನಗಿರಿಗೌಡ, ಬಿ.ಎಸ್.ನಾಗರಾಜು, ಬ್ಯಾಟರಂಗೇಗೌಡ, ವೆಂಕಟೇಗೌಡ, ಕಳ್ಳಿಪಾಳ್ಯ ಲೋಕೇಶ್, ಭೈರಪ್ಪ, ಕಾಡಶೆಟ್ಟಿಹಳ್ಳಿ ಸತೀಶ್ ಸೇರಿದಂತೆ 20 ಜನರ ಮೇಲೆ ತುಮಕೂರಿನ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಜನರ ಅಭಿಪ್ರಾಯ ಏನಿದೆ ಅದೇ ನನ್ನ ಅಭಿಪ್ರಾಯ:** ಗುಬ್ಬಿ ಕ್ಷೇತ್ರದ ಶಾಸಕ ಶ್ರೀನಿವಾಸ್ ಈ ಬಗ್ಗೆ ಮಾತನಾಡಿದ್ದಾರೆ. ಜನರ ಅಭಿಪ್ರಾಯ ಏನಿದೆ ಅದೇ ನನ್ನ ಅಭಿಪ್ರಾಯ. ಡಿಸಿಎಂ ಅವರನ್ನು ಭೇಟಿಯಾಗಲು ಕಾದಿದ್ದೆ, ಆದರೆ ಆರೋಗ್ಯ ಸರಿಯಿಲ್ಲದ ಕಾರಣ ಹೆಚ್ಚು ಹೊತ್ತು ಕಾಯಲು ಆಗಲಿಲ್ಲ. ಮತ್ತೆ ಡಿಸಿಎಂ ಅವರನ್ನು ಭೇಟಿಯಾಗುತ್ತೇನೆ. ಯೋಜನೆಯಿಂದ ಆಗುವ ತೊಂದರೆಗಳ ಬಗ್ಗೆ ಟೆಕ್ನಿಕಲ್ ಕಮಿಟಿ ಮುಂದೆ ಮಾತನಾಡಿದ್ದೇನೆ. ಇದು ಸರಿಯಾದ ಕ್ರಮ ಅಲ್ಲ. ಇದನ್ನು ಮನವರಿಕೆ ಮಾಡಿಕೊಟ್ಟಿದ್ದೇನೆ. ಹತಕ್ಕೆ ಬಿದ್ದು ಅಲ್ಲಿಂದಲೇ ನೀರು ತೆಗೆದುಕೊಂಡು ಹೋಗುವ ಉದ್ದೇಶ ಇದೆ. ಈಗ ಬುಗಡನಹಳ್ಳಿವರೆಗೂ ನೀರು ಸರಾಗವಾಗಿ ಬರುತ್ತಿದೆ. ಅದರ ಮುಖಾಂತರ ಮುಂದಕ್ಕೂ ತೆಗೆದುಕೊಂಡು ಹೋಗಬಹುದು. ಈ ಯೋಜನೆಗೆ ಹಾಕುತ್ತಿರುವ ಅರ್ಧ ದುಡ್ಡನ್ನು ಅಗಲಿಕರಣಕ್ಕೆ ಖರ್ಚು ಮಾಡಿದರೆ ಸಾಕು. ಎಲ್ಲಾರಿಗೂ ತೊಂದರೆ ಕೊಡುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ. ಹೇಮಾವತಿ ಕಾಮಗಾರಿ ಮುಂದುವರಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಇದರಲ್ಲಿ ರಾಜಕೀಯ ವಿಚಾರ ನಾನು ಪ್ರಸ್ತಾಪ ಮಾಡುವುದಿಲ್ಲ. ಇಂತಹ ಯೋಜನೆಗಳನ್ನು ಮಾಡಿದಾಗ ಎಂತವರಿದ್ದರೂ ರಾಜಕೀಯ ಬೆನಿಫಿಟ್ ತಗೊಳ್ತಾರೆ. ಈ ಯೋಜನೆಯಿಂದ ಎಲ್ಲೆಲ್ಲಿ ಹೇಮಾವತಿ ನೀರು ಹರಿಯುತ್ತದೆಯೋ ಆ ತಾಲ್ಲೂಕುಗಳಿಗೆ ತೊಂದರೆಯಾಗುತ್ತದೆ. ಅದೇ ಕಾರಣಕ್ಕೆ ನಾನು ಯೋಜನೆ ವಿರುದ್ಧ ಇದ್ದೇನೆ. ನಾನು ಇದೇ ವಿಚಾರವನ್ನು ಸ್ಪಷ್ಟವಾಗಿ ತಿಳಿಸಬೇಕು ಎಂದು ನಿರ್ಧರಿಸಿದ್ದೇನೆ ಎಂದು ಅವರು ಹೇಳಿದರು.

### ಈ ನೀರು ಖಂಡಿತ ಕುಣಿಗಲ್‌ಗೆ ಮಾತ್ರ ಸೀಮಿತ

ಕುಣಿಗಲ್ ತಾಲ್ಲೂಕಿಗೆ ಅಲರ್ಟ್ ಆಗಿರುವ ಮೂರು ಸಾವಿರ ಎಂಸಿಎಫ್‌ಟಿ ನೀರನ್ನು ಕೊಡೋಕೆ ಆಗಿಲ್ಲ. ಕೇವಲ ಮುನ್ನೂರು-ನಾಲ್ಕುನೂರು ಎಂಸಿಎಫ್‌ಟಿ ನೀರು ಬಂದಿರುವುದಕ್ಕೆ ದಾಖಲೆ ಸಮೇತ ಉದಾಹರಣೆ ಕೊಡುತ್ತೇನೆ. ಬಹಳಷ್ಟು ಜನ ಈ ನೀರನ್ನು ಮಾಗಡಿ ಮತ್ತು ರಾಮನಗರಕ್ಕೆ ಕೊಂಡೊಯ್ಯುತ್ತಾರೆ ಅಂತ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ. ನಾನು ಮತ್ತೊಮ್ಮೆ ಸ್ಪಷ್ಟಪಡಿಸುತ್ತೇನೆ ಯಾವುದೇ ಕಾರಣಕ್ಕೂ ಈ ನೀರು ಮಾಗಡಿ ಅಥವಾ ರಾಮನಗರಕ್ಕೆ ಹೋಗಲ್ಲ. ಈ ನೀರು ಖಂಡಿತ ಕುಣಿಗಲ್ ಗೆ ಮಾತ್ರ ಸೀಮಿತ ಎಂದು ರಂಗನಾಥ್ ಸ್ಪಷ್ಟಪಡಿಸಿದ್ದಾರೆ.

### ಇಪ್ಪತ್ತು ವರ್ಷಗಳಿಂದಲೂ ಅನ್ಯಾಯ



ಕುಣಿಗಲ್ ಶಾಸಕ ಡಾ.ರಂಗನಾಥ್ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಲಿಂಕ್ ಕೆನಾಲ್ ವಿಚಾರದಲ್ಲಿ ಕೆಲವು ರಾಜಕೀಯ ಹಿತಾಸಕ್ತಿಗಳು ರೈತರ ದಾರಿ ತಪ್ಪಿಸಿದ್ದಾರೆ. ಲಿಂಕ್ ಕೆನಾಲ್ ಕಾಮಗಾರಿಯನ್ನು ವಿರೋಧಿಸಿ ನಿನ್ನೆ ಪ್ರತಿಭಟನೆ ಮಾಡಿದ್ದಾರೆ. ಇದು ಕುಣಿಗಲ್ ತಾಲ್ಲೂಕಿಗೆ ಮಾಡುತ್ತಿರುವ ಅನ್ಯಾಯ. ವೈ. ಕೆ ರಾಮಯ್ಯ ಮತ್ತು ಹುಚ್ಚ ಮಾಸ್ತಿಗೌಡರು ಹೋರಾಟ ನಡೆಸಿದ್ದಕ್ಕೆ ತುಮಕೂರು ಜಿಲ್ಲೆಗೆ ಹೇಮಾವತಿ ತಂದಿರುವಂತದ್ದು. ಇಪ್ಪತ್ತು ವರ್ಷಗಳಿಂದಲೂ ಅನ್ಯಾಯ ಆಗುತ್ತಿದೆ ಎಂದು ಅಸಾಮಾಧಾನ ವ್ಯಕ್ತಪಡಿಸಿದರು.




ಸಿಎಂ ಅವರನ್ನು ಭೇಟಿ ಮಾಡಿ ಮಾತನಾಡುತ್ತೇನೆ. ಅವರೇನು ಹೇಳುತ್ತಾರೋ ಕೇಳಿ ನಂತರ ನಾನು ಏನು ಮಾಡಬೇಕು ಅಂತ ಡಿಸೈಡ್ ಮಾಡುತ್ತೇನೆ. ಹೋರಾಟ ಮಾಡಿ ಯೋಜನೆ ನಿಲ್ಲಿಸುತ್ತೇನೆ ಅನ್ನೋದು ಅಷ್ಟು ಸರಿ ಅನಿಸಲ್ಲ. ಸರ್ಕಾರವನ್ನು ಗಮನ ಸೆಳೆಯುವ ಕೆಲಸವನ್ನು ನಿನ್ನೆ ಮಾಡಿದ್ದಾರೆ. ನಿನ್ನೆ ಹೋರಾಟದ ವಿಚಾರ ಸರ್ಕಾರದ ಗಮನಕ್ಕೆ ಹೋಗಿದೆ. ಸರ್ಕಾರ ಏನಾದರೂ ಒಂದು ನಿರ್ಧಾರ ಮಾಡಬೇಕು

-ಶ್ರೀನಿವಾಸ್, ಶಾಸಕ

### ಹೋರಾಟ ಮಾಡಿ ಯೋಜನೆ ನಿಲ್ಲಿಸುತ್ತೇನೆ ಅನ್ನೋದು ಅಷ್ಟು ಸರಿ ಅಲ್ಲ

ಪ್ರತಿಭಟನೆ ಮಾಡಿದವರು ಯಾರು ಎಂದು ನನಗೆ ಗೊತ್ತಿದೆ. ಅವರು ನನ್ನ ವಿರುದ್ಧ ಗೇಮ್ ಮಾಡಬೇಕು ಅಂತ ಇರೋರು. ನನ್ನ ಪರ ಎಲ್ಲಿ ಮಾತನಾಡುತ್ತಾರೆ. ನನ್ನ ವಿರುದ್ಧ ಹೇಳಿಕೆ ಕೊಟ್ಟಿದ್ದಾರೆ. ಧಿಕ್ಕಾರ ಕೂಗಿರುತ್ತಾರೆ. ನೂರಕ್ಕೆ ನೂರು ಪರ್ಸೆಂಟ್ ನನ್ನ ವಿರುದ್ಧವಾದವರೇ ಅಲ್ಲಿ ಸೇರಿಕೊಂಡಿದ್ದರು. ನಾನು ಪ್ರತಿಭಟನೆ ವಿರೋಧ ಮಾಡೊ ಮಾತೇ ಇಲ್ಲ. ಪ್ರತಿಭಟನೆಗೆ ನನ್ನ ಸಹಮತ ಇದೆ. ಸರ್ಕಾರ ಇದರಲ್ಲಿ ಕ್ರಮ ಕೈಗೊಳ್ಳಬೇಕು. ಸರ್ಕಾರದ ಲೆವೆಲ್‌ನಲ್ಲಿ ಮಾಡಬೇಕು. ಉಸ್ತುವಾರಿ ಸಚಿವರ ಕ್ಷೇತ್ರಕ್ಕೂ ಕುಡಿಯುವ ನೀರು ಹೋಗುತ್ತೆ. ನಮ್ಮ ಕ್ಷೇತ್ರಕ್ಕೆ ಇದು ಮೇಜರ್ ಸಮಸ್ಯೆ ಆಗುತ್ತೆ. ಜಿಲ್ಲೆಯ ಇಬ್ಬರು ಸಚಿವರಿಗೂ ಮನವರಿಕೆ ಮಾಡಿಕೊಡುತ್ತೇನೆ. ನೀರಾವರಿ ಸಚಿವರನ್ನು ಭೇಟಿ ಮಾಡುತ್ತೇನೆ ಎಂದು ಶ್ರೀನಿವಾಸ್ ತಿಳಿಸಿದರು.




### ನಮ್ಮ ರೈತರು ಇದಕ್ಕೆಲ್ಲಾ ಹೆದರಬಾರದು

ರೈತರ ಮೇಲೆ 100 ಎಫ್‌ಐಆರ್ ಮಾಡಲಿ, ಅದಕ್ಕೆಲ್ಲಾ ಜಗ್ಗಲ್ಲ. ತೊಡೆ ತಟ್ಟಿಕೊಂಡು ಹೇಳ್ತಿನಿ ಸರ್ಕಾರಕ್ಕೆ ಯಾವ ರೈತನು ಹೆದರಲ್ಲ ಅಂತ ಶಾಸಕ ಸುರೇಶ್ ಗೌಡ ಕಿಡಿಕಾರಿದ್ದಾರೆ. ಏನ್ ಮಾಡ್ತಿರಾ ಜೈಲಿಗೆ ಹಾಕ್ತಿರಾ ಹೆಚ್ಚು ಕಮ್ಮಿಯಾದರೇ ಗೋಲಿ ಬಾರ್ ಮಾಡಿ ಸಾಯಿಸಬಹುದು, ಗೋಲಿ ಬಾರ್ ಮಾಡಿದ್ರೆ ನಾನೇ ಫಸ್ಟ್ ನಿಂತುಕೊಳ್ತಿನಿ, ಫಸ್ಟ್ ನನಗೆ ಗೋಲಿಬಾರ್ ಮಾಡು ಅಂತ ಹೇಳ್ತೀನಿ ಅಂತ ಸವಾಲು ಹಾಕಿದ್ದಾರೆ. ನಮ್ಮ ಜೀವನವೇ ಹೋಗಬೇಕಾದರೆ ಯಾವ ಎಫ್‌ಐಆರ್ ರೀ ನಮ್ಮ ಸ್ವಾಮೀಜಿಗಳು ಹೆದರಲ್ಲ, 100 ಎಫ್‌ಐಆರ್ ಆಗಲಿ, ನಾನೇ ನಿಂತು 100 ಕೇಸ್ ನಡೆಸ್ತೀನಿ, ನಮ್ಮ ರೈತರು ಇದಕ್ಕೆಲ್ಲಾ ಹೆದರಬಾರದು ಅಂತ ಸುರೇಶ್ ಗೌಡ ಹೇಳಿದ್ದಾರೆ. ಬೆದರಿಕೆ ಹೆದರಿಕೆಗಳನ್ನ ಯಾವ್ಯಾವ ಸರ್ಕಾರಗಳು ಇವೆ ಮಾಡ್ತಾವೆ, ಈ ಸರ್ಕಾರಕ್ಕೆಲ್ಲಾ ಜನ ಪಾಠ ಕಲಿಸ್ತಾರೆ ಅಂತ ಅವರು ಹೇಳಿದ್ದಾರೆ.

## ವಿ ಸೋಮಣ್ಣಗೆ 2 ಐಡಿಯಾ ಕೊಟ್ಟ ಎಂಬಿ ಪಾಟೀಲ್

• **ಉದಯವಾಹಿನಿ ಬೆಂಗಳೂರು**





ಕರ್ನಾಟಕ ರಾಜಧಾನಿ ಬೆಂಗಳೂರಿನಿಂದ ವಿಜಯಪುರ ಮತ್ತು ಬಾಗಲಕೋಟೆಗೆ ಸದ್ಯದ ರೈಲು ಪ್ರಯಾಣದ 15 ಗಂಟೆಗಳ ಅವಧಿಯನ್ನು 10 ಗಂಟೆಗಳಿಗೆ ಇಳಿಸುವ ಸಂಬಂಧ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂಬಿ ಪಾಟೀಲ್ ಅವರು ರೈಲ್ವೆ ಖಾತೆ ಸಹಾಯಕ ಸಚಿವ ವಿ. ಸೋಮಣ್ಣ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಸದ್ಯ ವಿಜಯಪುರ, ಬಾಗಲಕೋಟೆಗೆ ಹೋಗುವ ರೈಲುಗಳು ಹುಬ್ಬಳ್ಳಿ ಮತ್ತು ಗದಗನಲ್ಲಿ ಎಂಜಿನ್ ಬದಲಿಸಿಕೊಳ್ಳಲು ಗಂಟೆಗಟ್ಟಲೆ ನಿಲ್ಲಬೇಕಾಗಿದೆ. ಇದರಿಂದ ಸಾಕಷ್ಟು ಸಮಯ ವ್ಯರ್ಥವಾಗುತ್ತಿದೆ ಎಂದು ಎಂಬಿ ಪಾಟೀಲ್ ಅವರು ಹೇಳಿದರು.

**ಎಂಬಿ ಪಾಟೀಲ್ ಕೊಟ್ಟ 2 ಐಡಿಯಾ**

- ಗದಗ ಹಾಗೂ ಹುಬ್ಬಳ್ಳಿ ಎರಡೂ ನಗರದಲ್ಲಿ ಬೈಪಾಸ್ ಮೂಲಕ ರೈಲುಗಳು ಸಾಗಿಹೋಗುವ ವ್ಯವಸ್ಥೆ ಆಗಬೇಕು. ಇದರಿಂದ ಗದಗ ಭಾಗದ ಜನತೆಗೂ ಅನುಕೂಲವಾಗುತ್ತದೆ.
- ಒಂದು ವೇಳೆ, ಈಗಾಗಲೇ ಓಡಾಡುತ್ತಿರುವ ರೈಲುಗಳನ್ನು ಬೈಪಾಸ್ ಮೂಲಕ ಓಡಿಸುವುದು ಅಸಾಧ್ಯವಾದರೆ ಹೊಸ ರೈಲುಗಳ ಸೇವೆಯನ್ನಾದರೂ ಆರಂಭಿಸಬೇಕು.

**ವಿ ಸೋಮಣ್ಣ ಸ್ಪಂದನೆ**

ತಮ್ಮ ಬೇಡಿಕೆಗೆ ಸೋಮಣ್ಣ ಸ್ಪಂದಿಸಿದ್ದಾರೆ. ಸದ್ಯದಲ್ಲೇ ತಾವು ದಿಲ್ಲಿಗೆ ತೆರಳುತ್ತಿದ್ದು, ಕೇಂದ್ರ ಸಚಿವರು ಹಾಗೂ ರೈಲ್ವೆ ಅಧಿಕಾರಿಗಳನ್ನು ಭೇಟಿ ಮಾಡಿ ಮತ್ತೊಮ್ಮೆ ಸುದೀರ್ಘ ಚರ್ಚೆ ನಡೆಸುತ್ತೇನೆ, ಎಂದು ಪಾಟೀಲ್ ತಿಳಿಸಿದ್ದಾರೆ

# ಇನ್ಮುಂದೆ ಪೊಲೀಸರು ಅಡ್ಡ ಬಂದು ವಾಹನ ನಿಲ್ಲಿವಂತಿಲ್ಲ!

● ತಂತ್ರಜ್ಞಾನ ಆಧಾರಿತ ನಿಯಮ ಪಾಲನೆ ● ಸುರಕ್ಷತಾ ಸಲಕರಣೆಗಳ ಅಳವಡಿಕೆ ● ರಾತ್ರಿ ವೇಳೆ ಸಿಗ್ನಲ್ ಬಳಿ ಮಾತ್ರ ತಪಾಸಣೆ

• **ಉದಯವಾಹಿನಿ ಬೆಂಗಳೂರು**

ರಾಜ್ಯದ ಎಲ್ಲಾ ಘಟಕಗಳಲ್ಲಿನ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪೊಲೀಸ್ ಸಿಬ್ಬಂದಿ ಸಾರ್ವಜನಿಕರ ವಾಹನಗಳನ್ನು ತಪಾಸಣೆ ನಡೆಸುವಾಗ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಕುರಿತು ಕರ್ನಾಟಕ ಪೊಲೀಸ್ ಮಹಾನಿರ್ದೇಶಕ ಹಾಗೂ ಪೊಲೀಸ್ ಮಹಾ ನಿರೀಕ್ಷಕ ಡಾ. ಎಂ.ಎ. ಸಲೀಂ ಸುತ್ತೋಲೆ ಹೊರಡಿಸಿದ್ದಾರೆ. ಮೇ 26ರಂದು ಮಂಡ್ಯ ಜಿಲ್ಲೆಯಲ್ಲಿ ಪೊಲೀಸರು ಸಂಚಾರ ನಿಯಮ ಉಲ್ಲಂಘಿಸುವ ವಾಹನಗಳನ್ನು ತಪಾಸಣೆ ಮಾಡುವಾಗ ಸರಿಯಾದ ರಸ್ತೆ ಸುರಕ್ಷತಾ ಕ್ರಮಗಳನ್ನು ವಹಿಸದೇ, ಹೆದ್ದಾರಿಯಲ್ಲಿ ವಾಹನ ಸಂಚಾರ ದಟ್ಟಣೆಯನ್ನು ಗಮನಿಸದೇ ವಾಹನಗಳನ್ನು ತಡೆದು ಪ್ರಕರಣ ದಾಖಲಿಸುವಾಗ ರಸ್ತೆ ಅಪಘಾತವುಂಟಾಗಿ ಮಗು ಮೃತಪಟ್ಟಿತ್ತು. ಮೇ 13ರಂದು ದಾವಣಗೆರೆಯಲ್ಲಿ ಪೊಲೀಸರು ವಾಹನ ತಪಾಸಣೆ ನಡೆಸುತ್ತಿದ್ದಾಗ ಕ್ಯಾಂಟರ್ ಚಾಲಕ ವೇಗವಾಗಿ ಬಂದ ಪರಿಣಾಮ ಪೊಲೀಸ್ ಸಿಬ್ಬಂದಿ ಮೃತಪಟ್ಟಿದ್ದರು.

ಈ ಪ್ರಕರಣಗಳನ್ನು ಗಮನಿಸಿದಲ್ಲಿರಿಸಿಕೊಂಡು ಪೊಲೀಸರು ಸಂಚಾರ ನಿಯಮ ಉಲ್ಲಂಘನಾ ಪ್ರಕರಣಗಳನ್ನು ದಾಖಲಿಸುವಾಗ ಯಾವುದೇ ಮುಂಜಾಗ್ರತಾ ಕ್ರಮಗಳನ್ನು ಪಾಲಿಸದೆ ಇರುವುದು ಕಂಡು ಬಂದಿದೆ. ಸಾರ್ವಜನಿಕರ ಜೀವಕ್ಕೆ ಹಾಗೂ ಪೊಲೀಸರೇ ತಮ್ಮ ಜೀವಕ್ಕೂ ಕುತ್ತು ತಂದುಕೊಳ್ಳುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಬೇಕಾದ ಅಂಶವಾಗಿರುತ್ತದೆ ಎಂದು ಆದೇಶದಲ್ಲಿ ಉಲ್ಲೇಖಿಸಿದ್ದಾರೆ.



**ಕಾರಣವಿಲ್ಲದೆ ವಾಹನ ತಪಾಸಣೆ ಮಾಡಬೇಡಿ:** ಪೊಲೀಸರು ವಾಹನ ಸವಾರರ ವಾಹನಗಳಿಗೆ ಸಂಬಂಧಪಟ್ಟ ದಾಖಲೆಗಳನ್ನು ಪರೀಕ್ಷಿಸಲು ಸಕಾರಣವಿಲ್ಲದೇ ವಾಹನಗಳನ್ನು ತಡೆದು ತಪಾಸಣೆ ನಡೆಸಬಾರದು.

**ವಾಹನ ಸವಾರರನ್ನು ಹಿಡಿಯಲು ಬೆನ್ನಟ್ಟಬೇಡಿ**

ವೇಗವಾಗಿ ಚಲಾಯಿಸಿಕೊಂಡು ಬರುವ ವಾಹನ ಸವಾರರನ್ನು ಹಿಡಿಯಲು ಅವರನ್ನು ಬೆನ್ನಟ್ಟದೇ ಆ ವಾಹನಗಳ ನೋಂದಣಿ ಸಂಖ್ಯೆಯನ್ನು ಗುರುತು ಮಾಡಿಕೊಂಡು ಜಿಲ್ಲಾ ಪೊಲೀಸ್ ಠಾಣಾ ನಿಯಂತ್ರಣ ಕೋಣೆಗಳಿಗೆ ಮಾಹಿತಿ ರವಾನಿಸಿ. ಸದರಿ ವಾಹನ ಸವಾರರನ್ನು ಪತ್ತೆಹಚ್ಚಿ ಪ್ರಕರಣ ದಾಖಲಿಸುವುದು. ಸುರಕ್ಷತೆಗಾಗಿ Reflective Jacket ಧಾರಣೆ ಹಾಗೂ LED Batoಗಳನ್ನು ಉಪಯೋಗಿಸಿ. ಸಂಚಾರ ನಿಯಮ ಉಲ್ಲಂಘನೆದಾರರ ವಿರುದ್ಧ ಪ್ರಕರಣ ದಾಖಲಿಸುವಾಗ ಅಥವಾ ವಾಹನಗಳ ತಪಾಸಣೆ ಮಾಡುವ ಸಂದರ್ಭದಲ್ಲಿ ಪೊಲೀಸರು ತಮ್ಮ ಸುರಕ್ಷತೆಗಾಗಿ Reflective Jacket ಗಳನ್ನು ಧರಿಸಬೇಕು. ಸಂಜೆ ವೇಳೆಯಲ್ಲಿ ಕಡ್ಡಾಯವಾಗಿ LED Batonಗಳನ್ನು ಉಪಯೋಗಿಸಬೇಕು ಹಾಗೂ ವಾಹನಗಳನ್ನು ತಪಾಸಣೆ ಮಾಡುವ ಸಂದರ್ಭದಲ್ಲಿ ಕಡ್ಡಾಯವಾಗಿ Body worn cameraಗಳನ್ನು ಧರಿಸಬೇಕು ಎಂದು ಸೂಚನೆ ನೀಡಿದ್ದಾರೆ.

**ಬ್ಯಾರಿಕೇಡ್ ಬ್ಯಾನ್:** ಕಣ್ಣಿಗೆ ಕಾಣುವ ಸಂಚಾರ ನಿಯಮ ಉಲ್ಲಂಘನೆಗಳು ಕಂಡುಬಂದಲ್ಲಿ ಮಾತ್ರವೇ ಅಂತಹ ವಾಹನಗಳನ್ನು ನಿಲ್ಲಿಸಿ ಪ್ರಕರಣಗಳನ್ನು ದಾಖಲಿಸುವುದು, ಪ್ರಕರಣಗಳನ್ನು ದಾಖಲಿಸುವಾಗ ಹೆದ್ದಾರಿಗಳಲ್ಲಿ ಜಿಗ್ ಜಾಗ್ ಮಾದರಿಯಲ್ಲಿ ಬ್ಯಾರಿಕೇಡ್ ಹಾಕಿ ವಾಹನಗಳನ್ನು ತಡೆಯಬಾರದು.

**ಅಡ್ಡ ಬಂದು ವಾಹನ ನಿಲ್ಲಿಸುವಂತೆ ಹೇಳಬಾರದು;** ರಸ್ತೆಯಲ್ಲಿ ದಿಢೀರನೆ ಅಡ್ಡ ಬಂದು ವಾಹನ ನಿಲ್ಲಿಸುವಂತೆ ಹೇಳಬಾರದು ಹಾಗೂ ಬೈಕ್‌ನ ಹಿಂಬದಿ ಸವಾರನನ್ನು ಹಿಡಿದು ಎಳೆಯುವುದು ಹಾಗೂ ವಾಹನಗಳ ಕೀಲಿಕೈ ಅನ್ನು ತೆಗೆದುಕೊಳ್ಳುವುದನ್ನು ಮಾಡಬಾರದು. ಈ ಎಲ್ಲಾ ಅಂಶಗಳನ್ನು ಎಲ್ಲಾ ಪೊಲೀಸ್ ಅಧಿಕಾರಿಗಳು / ಸಿಬ್ಬಂದಿಗಳು ಗಮನದಲ್ಲಿಟ್ಟುಕೊಂಡು ಕಡ್ಡಾಯವಾಗಿ ಪಾಲಿಸುವುದು. ಎಲ್ಲಾ ಪೊಲೀಸ್ ಆಯುಕ್ತರುಗಳು ಹಾಗೂ ಪೊಲೀಸ್ ಅಧೀಕ್ಷಕರುಗಳು ಈ ವಿಷಯದ ಕುರಿತು ವೈಯಕ್ತಿಕ ಗಮನಹರಿಸಿ, ತಮ್ಮ ಅಧೀನಕ್ಕೊಳಪಡುವ ಅಧಿಕಾರಿ / ಸಿಬ್ಬಂದಿ ಈ ಸುತ್ತೋಲೆಯನ್ನು ಕಡ್ಡಾಯವಾಗಿ ಪಾಲನೆ ಮಾಡುವಂತೆ ಕಟ್ಟುನಿಟ್ಟಾಗಿ ನಿರ್ದೇಶನಗಳನ್ನು ನೀಡುವಂತೆ ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,731/Gram24ct ₹8,920/Gram22ct ಬೆಳ್ಳಿ: ₹99.90/Gram

# ಅತಿಯಾದ ರಸಾಯನಿಕದಿಂದ ಮಣ್ಣಿನ ಫಲವತ್ತತೆ ಕುಸಿತ: ಸಿಎಂ ಸಿದ್ದರಾಮಯ್ಯ ಕಳವಳ

• ಉದಯವಾಹಿನಿ, ಬೆಂಗಳೂರು

ರೈತರ ಅತಿಯಾದ ರಸಾಯನಿಕ ಬಳಕೆಯಿಂದಾಗಿ ಮಣ್ಣಿನ ಫಲವತ್ತತೆ ಕುಸಿಯುತ್ತಿದ್ದು, ಶೇ.43ಕ್ಕಿಂತಲೂ ಹೆಚ್ಚು ಭೂಮಿ ನೈಸರ್ಗಿಕ ಇಂಗಾಲವನ್ನು ಕಳೆದುಕೊಂಡು ಬಂಜರು ಭೂಮಿಯಾಗಿ ಪರಿವರ್ತನೆಗೊಳ್ಳುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಕಳವಳ ವ್ಯಕ್ತಪಡಿಸಿದರು.

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ಡಿಸಿಗಳು), ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಸಿಇಒಗಳೊಂದಿಗೆ ಎರಡು ದಿನಗಳ ಪರಿಶೀಲನಾ ಸಭೆಯ ನಂತರ ಮುಖ್ಯಮಂತ್ರಿಗಳು ಈ ವಿಷಯ ತಿಳಿಸಿದರು. ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಾಗೂ ಪರಿಸ್ಥಿತಿ ನಿಭಾಯಿಸಲು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲುವಂತೆ ಹಾಗೂ ಈ ನಿಟ್ಟಿನಲ್ಲಿ ರೈತರಿಗೆ


ಉದಯವಾಹಿನಿ ಚಿತ್ರ

ಶಿಕ್ಷಣ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹಿಂದಿನ ವರ್ಷಗಳಿಗೆ ಹೋಲಿಸಿದರೆ, ರೈತರ ಆತ್ಮಹತ್ಯೆ ಸಂಖ್ಯೆಗಳು ಕಡಿಮೆಯಾಗಿವೆ. ಮುಂದೆಯೂ ರೈತರು ಆತ್ಮಹತ್ಯೆಗೆ ಶರಣಾಗದಂತೆ ನೋಡಿಕೊಳ್ಳುವ ಗುರಿಯನ್ನು ಹೊಂದಲಾಗಿದೆ.

ಇದಕ್ಕಾಗಿ, ಗ್ರಾಮ ಮಟ್ಟದಲ್ಲಿ ಈಗಾಗಲೇ ತಂಡಗಳನ್ನು ರಚಿಸಲಾಗಿದ್ದು, ಈ ತಂಡಗಳನ್ನು ಮತ್ತಷ್ಟು ಸಕ್ರಿಯಗೊಳಿಸಬೇಕು. ಖಾಸಗಿ ಲೇವಾದೇವಿಗಾರರು ಮತ್ತು ಮೈಕ್ರೋ ಫೈನಾನ್ಸ್ ಸಂಸ್ಥೆಗಳನ್ನು ನಿಯಂತ್ರಿಸಲು ಜಿಲ್ಲಾ ಮಟ್ಟದಲ್ಲಿ ಕಠಿಣ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಹೇಳಿದರು. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯು ಪರೀಕ್ಷೆಗಳಲ್ಲಿ ಶೇ. 60 ಕ್ಕಿಂತ ಕಡಿಮೆ ಉತ್ತೀರ್ಣತೆ ಇರುವ ಸ್ಥಳಗಳಲ್ಲಿ ಡಿಡಿಪಿಐ ಮತ್ತು ಬಿಇಒಗಳಿಗೆ ನೋಟಿಸ್ ನೀಡುವಂತೆ ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ ಎಂದು ಸಿಎಂ ಹೇಳಿದರು.

**ಸರ್ಕಾರಿ ಶಾಲೆಗಳಿಗೆ ಸೇರುವ ಮಕ್ಕಳ ಸಂಖ್ಯೆ ಪ್ರತಿ ವರ್ಷ ಸುಮಾರು ಒಂದೂವರೆ ಲಕ್ಷದಿಂದ ಎರಡು ಲಕ್ಷದಷ್ಟು ಕಡಿಮೆಯಾಗುತ್ತಿದೆ, ಇದನ್ನು ತಡೆಗಟ್ಟಲು ಪೋಷಕರೊಂದಿಗೆ ನಿಯಮಿತವಾಗಿ ಸಭೆಗಳನ್ನು ನಡೆಸಬೇಕು ಮತ್ತು ಬಿಇಒಗಳು ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಬೇಕು ಎಂದು ಮುಖ್ಯಮಂತ್ರಿ ಹೇಳಿದರು. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು.**

## ಪ್ಲಾಸ್ಟಿಕ್ ತ್ಯಜಿಸಿ: ಡಾ.ಕೆ.ಎಂ.ರಾಜು ಸಲಹೆ

• ಉದಯವಾಹಿನಿ, ಕೆ.ಆರ್.ಪುರ

ಪರಿಸರಕ್ಕೆ ಮಾರಕವಾಗಿರುವ ಪ್ಲಾಸ್ಟಿಕ್ ಅನ್ನು ಬಳಸದಂತೆ ನಾವೆಲ್ಲ ಸಂಕಲ್ಪ ಮಾಡೋಣ ಎಂದು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮಹದೇವಪುರ ವಿಭಾಗದ ಪರಿಸರ ಅಧಿಕಾರಿ ಡಾ.ಕೆ.ಎಂ.ರಾಜು ತಿಳಿಸಿದರು. ಗರುಡಾಚಾರ್ ಪಾಳ್ಯದಲ್ಲಿ ಆಯೋಜಿಸಿದ್ದ ಪ್ಲಾಸ್ಟಿಕ್ ಮುಕ್ತ ಪರಿಸರಕ್ಕಾಗಿ ಸೈಕ್ಲೋಥಾನ್ ಹಾಗೂ ಓಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಿಡಿತ ಫೌಂಡೇಶನ್ ಅಧ್ಯಕ್ಷ ಪರಿಸರ ಮಂಜು ಮಾತನಾಡಿ, 'ನಾವು ಪರಿಸರವನ್ನು ಎಷ್ಟು ಸ್ವಚ್ಛವಾಗಿಟ್ಟು ಕೊಳ್ಳುತ್ತೇವೋ, ಅದು ಮುಂದಿನ ಪೀಳಿಗೆಗೆ ಸಹಕಾರಿಯಾಗುತ್ತದೆ' ಎಂದು ಹೇಳಿದರು. ಕಾಲ್ನಡಿಗೆ ಜಾಥಾದಲ್ಲಿ ದೊರೆತ ಪ್ಲಾಸ್ಟಿಕ್ ಬಾಟಲಿಗಳು ಹಾಗೂ ಪ್ಲಾಸ್ಟಿಕ್ ವಸ್ತುಗಳನ್ನು ಸಂಗ್ರಹಿಸಲಾಯಿತು. ಮಹದೇವಪುರ ಡೆಕಥ್ಲಾನ್‌ನಿಂದ ಕಾಡುಗೋಡಿ ಟೀ ಪಾರ್ಕ್‌ವರೆಗೂ ಸ್ವಯಂಪ್ರೇರಿತರಾಗಿ ಸುಮಾರು 200ಕ್ಕೂ ಹೆಚ್ಚು ಪರಿಸರ ಪ್ರೇಮಿಗಳು ಸೈಕಲ್ ಜಾಥಾದಲ್ಲಿ ಭಾಗಿಯಾಗಿದ್ದರು.

## ಬಿಡಿಎ ಆಯುಕ್ತರಾಗಿ ಮಣಿವಣ್ಣನ್ ಪಿ ಅಧಿಕಾರ ಸ್ವೀಕಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮೇಜರ್ ಪಿ. ಮಣಿವಣ್ಣನ್‌ಗೆ ಬಿಡಿಎ ಆಯುಕ್ತ ಹುದ್ದೆಯನ್ನು ಸಮಪ್ರಭಾರ ಜವಾಬ್ದಾರಿವಹಿಸಿ ಸರ್ಕಾರ ಆದೇಶಿಸಿದ್ದು, ಇದರಂತೆ ಬಿಡಿಎ ಆಯುಕ್ತರಾಗಿ ಅವರು ಅಧಿಕಾರ ಸ್ವೀಕಾರ ಮಾಡಿದರು. ಸದಾಶಿವನಗರದಲ್ಲಿ ಉಪಮುಖ್ಯಮಂತ್ರಿ ಡಿಕೆಶಿ ಅವರನ್ನು ಭೇಟಿ ಮಾಡಿದ ಮಣಿವಣ್ಣನ್ ಅವರಿಗೆ ಡಿಸಿಎಂ ಶುಭ ಹಾರೈಸಿದರು. ನಾವು ಒಟ್ಟಾಗಿ ನಾವೀನ್ಯತೆ, ಸುಸ್ಥಿರತೆ ಮತ್ತು ಸ್ಮಾರ್ಟ್ ಸಿಟಿ ಬೆಳವಣಿಗೆಯ ನಗರವಾದ ಬ್ರ್ಯಾಂಡ್ ಬೆಂಗಳೂರನ್ನು ನಿರ್ಮಿಸಲು ಬದ್ಧರಾಗಿದ್ದೇವೆ ಎಂದು ಹೇಳಿದರು. ಬಿಡಿಎ ಆಯುಕ್ತ ಎನ್.ಜಯರಾಮ್ ಅವರು (ಮೇ 31) ವಯೋನಿವೃತ್ತಿಗೊಂಡಿದ್ದು, 1998 ರ ಬ್ಯಾಚ್ ಅಧಿಕಾರಿಯಾಗಿದ್ದ ಮಣಿವಣ್ಣನ್ ಬಿಡಿಎ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

## ಚಪ್ಪಲಿಯಿಂದ ಆಟೋ ಚಾಲಕನಿಗೆ ಹೊಡೆದ ಹಿಂದಿ ಭಾಷಿಕ ಯುವತಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಮತ್ತೊಂದು ರೋಡ್ ರೇಜ್ ಪ್ರಕರಣ ಬೆಳಕಿಗೆ ಬಂದಿದ್ದು, ಗಾಡಿಗೆ ಟಚ್ ಆಯ್ತು ಎಂದು ಯುವತಿಯೊಬ್ಬಳು ಆಟೋ ಚಾಲಕನಿಗೆ ಚಪ್ಪಲಿಯಲ್ಲಿ ಹೊಡಿ ಯುತ್ತಿರುವ ವಿಡಿಯೋ ವೈರಲ್ ಆಗುತ್ತಿದೆ.

ಇತ್ತೀಚಿನ ದಿನಗಳಲ್ಲಿ ಬೆಂಗಳೂರಿನಲ್ಲಿ ರೋಡ್ ರೇಜ್ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಇತ್ತೀಚೆಗೆ ಇಬ್ಬರು ಯುವತಿಯರು, ಓರ್ವ ಯುವಕ ಕಾರಿನ ಸನ್ ರೂಫ್ ಟಾಪ್ ತೆಗೆದು ಯುವತಿಯರೊಂದಿಗೆ ರೋಮ್ಯಾನ್ಸ್ ಮಾಡುತ್ತಿದ್ದ ವಿಡಿಯೋ ವೈರಲ್ ಆಗಿತ್ತು. ಇದಕ್ಕೂ ಮೊದಲು ಹಿಂದಿ ಭಾಷಿಕ ವ್ಯಕ್ತಿಯೋರ್ವ ಆಟೋ ಚಾಲಕನ ಮೇಲೆ ಹಲ್ಲೆ ಮಾಡಿದ್ದ ವಿಡಿಯೋ ವೈರಲ್ ಆಗಿತ್ತು. ಬಳಿಕ ಕನ್ನಡ ಪರ ಹೋರಾಟಗಾರರ ಪ್ರತಿಭಟನೆ ಬಳಿಕ ಆತ ರಕ್ಷಣೆ ಕೋರಿದ್ದ. ಇದೀಗ ಮತ್ತೆ ಅಂತಹುದೇ ವಿಡಿಯೋ ವೈರಲ್ ಆಗುತ್ತಿದೆ. @CheKrishnaCk ಎಕ್ಸ್ ಖಾತೆಯಲ್ಲಿ ಈ ವಿಡಿಯೋ ಅಪ್ಲೋಡ್ ಮಾಡಲಾಗಿದ್ದು, ವಿಡಿಯೋದಲ್ಲಿ ಯುವತಿ ಆಟೋ ಚಾಲಕನಿಗೆ ನಿಂದಿಸುತ್ತಿದ್ದಾರೆ. ಈ ವೇಳೆ ಚಾಲಕ ಯುವತಿಯ ವಿಡಿಯೋ ಮಾಡುತ್ತಿದ್ದು ವಿಡಿಯೋ ಮಾಡದಂತೆ ಯುವತಿ ಆಟೋ ಚಾಲಕನ ಮೇಲೆ ಹಲ್ಲೆ ನಡೆಸಿದ್ದಾರೆ. ವಿಡಿಯೋದಲ್ಲಿರುವಂತೆ ಯುವತಿ ತನ್ನ ಗಾಡಿಯಲ್ಲಿ ಹೋಗುತ್ತಿದ್ದಾಗ ನಡುರಸ್ತೆಯಲ್ಲಿ ಆಟೋ ಯುವತಿಯ ಗಾಡಿ ಹತ್ತಿರಕ್ಕೆ ಬಂದಿದ್ದು

ಈ ವೇಳೆ ಯುವತಿ ಆಟೋ ತನ್ನ ಗಾಡಿಗೆ ಟಚ್ ಆಯಿತು ಎಂದು ಜಗಳ ತೆಗೆದಿದ್ದಾಳೆ. ಈ ವೇಳೆ ಆಟೋ ಚಾಲಕ ತಾನು ಟಚ್ ಮಾಡಿಲ್ಲ ವಾದಿಸಿದರೂ ಕೇಳದ ಯುವತಿ ನೋಡ ನೋಡುತ್ತಲೇ ತನ್ನ ಚಪ್ಪಲಿ ತೆಗೆದು ಆಟೋ ಚಾಲಕನ ಮೇಲೆ ಹಲ್ಲೆ ನಡೆಸಿದ್ದಾರೆ.

# ಆನ್‌ಲೈನ್ ಬೆಟ್ಟಿಂಗ್ ವಿರುದ್ಧ ಶೀಘ್ರದಲ್ಲೇ ಕಠಿಣ ಕಾನೂನು: ಸಿಎಂ

## ದ್ವೇಷ ಭಾಷಣ ಮಾಡುವವರು ಎಷ್ಟೇ ಪ್ರಭಾವಿಗಳಾಗಿದ್ದರೂ ಅವರ ವಿರುದ್ಧ ನಿರ್ದಯ ಕ್ರಮ

• ಉದಯವಾಹಿನಿ, ಬೆಂಗಳೂರು

ದ್ವೇಷ ಭಾಷಣ-ಪ್ರಚೋದನಾಕಾರಿ ಪೋಸ್ಟ್, ಆನ್‌ಲೈನ್ ಬೆಟ್ಟಿಂಗ್ ವಿರುದ್ಧ ಶೀಘ್ರದಲ್ಲೇ ಕಠಿಣ ಕಾನೂನು ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ಡಿಸಿಗಳು) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಸಿಇಒಗಳೊಂದಿಗೆ ಎರಡು ದಿನಗಳ ಪರಿಶೀಲನಾ ಸಭೆಯ ನಂತರ ಮುಖ್ಯಮಂತ್ರಿಗಳು ಈ ವಿಷಯ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರಾದರೂ ದ್ವೇಷ ಭಾಷಣ ಮಾಡಿದರೆ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದ್ದೇನೆ. ಈ ನಿಟ್ಟಿನಲ್ಲಿ ಶೀಘ್ರದಲ್ಲೇ ಕಠಿಣ ಕಾನೂನು ಜಾರಿಗೆ ತರಲಾಗುವುದು. ಈ ಬೆಳವಣಿಗೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿದೆ ಎಂದು ಹೇಳಿದರು. ದ್ವೇಷ ಭಾಷಣ ಮಾಡುವವರು ಎಷ್ಟೇ ಪ್ರಭಾವಿಗಳಾಗಿದ್ದರೂ ಅವರ ವಿರುದ್ಧ ನಿರ್ದಯ ಕ್ರಮ ಕೈಗೊಳ್ಳಬೇಕು. ಅವರ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆಂದು ತಿಳಿಸಿದರು.

ಕಾನೂನು-ಸುವ್ಯವಸ್ಥೆ, ಅಭಿವೃದ್ಧಿಯ ನಡುವೆ ನೇರ ಸಂಬಂಧವಿದೆ. ರಾಜ್ಯಾದ್ಯಂತ ಅವುಗಳನ್ನು ಖಚಿತ ಪಡಿಸಿ


ಉದಯವಾಹಿನಿ ಚಿತ್ರ

ಕೊಳ್ಳಬೇಕು. ಸಂವಿಧಾನದ ಉದ್ದೇಶಗಳನ್ನು ಅಡ್ಡಿಪಡಿಸುವ ಶಕ್ತಿಗಳನ್ನು ಮೊಳಕೆಯಲ್ಲೇ ಕಿತ್ತುಹಾಕುವಂತೆ ಜಿಲ್ಲಾಧಿಕಾರಿಗಳು ಮತ್ತು ಎಸ್‌ಪಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆಂದು ಹೇಳಿದರು.

ಆನ್‌ಲೈನ್ ಬೆಟ್ಟಿಂಗ್‌ಗೆ ಸಂಬಂಧಿಸಿದಂತೆ, ಕಾನೂನು ಸಚಿವ ಎಚ್‌ಕೆ ಪಾಟೀಲ್ ಮತ್ತು ಐಟಿ/ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಈ ನಿಟ್ಟಿನಲ್ಲಿ ತೆಗೆದುಕೊಳ್ಳಬೇಕಾದ ಕ್ರಮದ ಬಗ್ಗೆ, ಕಾನೂನು ರಚನೆಯ ಅಗತ್ಯವಿದ್ದರೆ ಅದರ ಬಗ್ಗೆ ಚರ್ಚಿಸುತ್ತಿದ್ದಾರೆ. ಚರ್ಚೆಯ ನಂತರ ಅವರು ಸೂಚಿಸುವ ಆಧಾರದ ಮೇಲೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಯುವಕರು ಕ್ರಿಕೆಟ್ ಬೆಟ್ಟಿಂಗ್‌ಗೆ ಬಲಿಯಾಗುತ್ತಿದ್ದಾರೆ. ಜಿಲ್ಲೆಗಳಲ್ಲಿ ಜೂಜಾಟ, ಮಟ್ಕಾದಂತಹ ಚಟುವಟಿಕೆಗಳನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಬೇಕು, ಈ ಪಿಡುಗನ್ನು ಯಾವುದೇ ಒತ್ತಡಕ್ಕೆ ಮಣಿಯದೆ ನಿರ್ದಯವಾಗಿ ನಿಗ್ರಹಿಸಬೇಕು. ಅಲ್ಲದೆ, ಮೈಕ್ರೋಫೈನಾನ್ಸ್ ಸಂಸ್ಥೆಗಳಿಂದ ಕಿರುಕುಳದಿಂದ ಸಾಲಗಾರರನ್ನು ರಕ್ಷಿಸುವ ಉದ್ದೇಶದಿಂದ ಜಾರಿಗೆ ತರಲಾದ ಕಾನೂನನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ಹೇಳಿದರು.

**ಕಳೆದ ವರ್ಷ (2024-25) ರಾಜ್ಯದಲ್ಲಿ ಸುಮಾರು 700 ಬಾಲ್ಯ ವಿವಾಹಗಳು ನಡೆದಿವೆ, ಯಾವುದೇ ಪರಿಸ್ಥಿತಿ ಎದುರಾದರೂ ಬಾಲ್ಯ ವಿವಾಹಗಳು ನಡೆಯದಂತೆ ನೋಡಿಕೊಳ್ಳಲು ಸೂಚನೆ ನೀಡಿದ್ದೇನೆ. ಬಾಲ್ಯ ವಿವಾಹದ ವಿರುದ್ಧ ಕಾನೂನುಗಳಿವೆ. ಅವುಗಳನ್ನು ತಡೆಯುವುದು ಒಂದು ಭಾಗ. ಯಾವುದೇ ಪರಿಸ್ಥಿತಿಯಲ್ಲಿಯೂ ಅವು ಸಂಭವಿಸದಂತೆ ನೋಡಿಕೊಳ್ಳಬೇಕು. ಬಾಲ್ಯ ಗರ್ಭಧಾರಣೆಯ ಪ್ರಕರಣಗಳನ್ನು ಸಹ ತಡೆಯಬೇಕು, ನಗರ, ಗ್ರಾಮೀಣ ಪ್ರದೇಶಗಳಲ್ಲಿ ಅವುಗಳನ್ನು ನಿಲ್ಲಿಸುವುದನ್ನು ಖಚಿತಪಡಿಸಿಕೊಳ್ಳಲು ತಳಮಟ್ಟದ ಅಧಿಕಾರಿಗಳನ್ನು ಬಳಸಬೇಕು ಎಂದು ತಿಳಿಸಿದರು. ಇದಲ್ಲದೆ, ರಾಜ್ಯದಲ್ಲಿ ಶಿಶು ಮರಣ ಪ್ರಮಾಣ ಮತ್ತು ತಾಯಂದಿರ ಮರಣ ಪ್ರಮಾಣವನ್ನು ಕಡಿಮೆ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.**

### ಅಹಂ ಬಿಟ್ಟು ಕೆಲಸ ಮಾಡಿ

ಇನ್ನು ಸಭೆ ವೇಳೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಖಡಕ್ ಸೂಚನೆಯನ್ನೂ ನೀಡಿದರು. ಅಹಂ ಬಿಟ್ಟು, ಸಮನ್ವಯದೊಂದಿಗೆ ಕೆಲಸ ಮಾಡುವಂತೆ ತಾಕೀತು ಮಾಡಿದರು. ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನ, ಜಿಲ್ಲೆಯ ಅಭಿವೃದ್ಧಿ ಕಾರ್ಯ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಜವಾಬ್ದಾರಿ. ಈ ಮೂವರೂ ಅಧಿಕಾರಿಗಳು ಯಾವುದೇ ಅಹಂ ಬಿಟ್ಟು, ಜಿಲ್ಲಾ ಉಸ್ತುವಾರಿ ಮಂತಿ, ಕಾರ್ಯದರ್ಶಿಗಳ ಜೊತೆಗೆ ಸಮನ್ವಯದೊಂದಿಗೆ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದರು.

## ಸಿವಿಲ್ ಪ್ರಕ್ರಿಯಾ ಸಂಹಿತೆ ಮಸೂದೆಗೆ ರಾಷ್ಟ್ರಪತಿ ಅಂಕಿತ

• ಉದಯವಾಹಿನಿ, ಬೆಂಗಳೂರು

ಪ್ರಕರಣಗಳ ತ್ವರಿತ ವಿಲೇವಾರಿಗಾಗಿ ಮತ್ತು ಶೀಘ್ರವಾಗಿ ನ್ಯಾಯ ಒದಗಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯಕ್ಕೆ ಅನುಕೂಲವಾಗುವಂತೆ ಉಪಬಂಧ ಕಲ್ಪಿಸಲು ಸಿವಿಲ್ ಪ್ರಕ್ರಿಯಾ ಸಂಹಿತೆ 1908ಕ್ಕೆ ತಿದ್ದುಪಡಿ ಮಾಡುವ ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ಅಧಿನಿಯಮ, 2024ಕ್ಕೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದಾರೆ. ತಿದ್ದುಪಡಿ ಮಸೂದೆಯನ್ನು ಬೆಳಗಾವಿ ಅಧಿವೇಶನದಲ್ಲಿ ಅನುಮೋದಿಸಲಾಗಿತ್ತು. ರಾಜ್ಯಪಾಲರು ಇದನ್ನು ಸಂವಿಧಾನದ ಅನುಚ್ಛೇದ 200 ಮತ್ತು 254ರ ಅಡಿ ರಾಷ್ಟ್ರಪತಿಗಳ ಅಂಕಿತಕ್ಕಾಗಿ ಕಾಯ್ದಿರಿಸಿದ್ದರು. ಇದೀಗ ಅಧಿನಿಯಮಕ್ಕೆ ರಾಷ್ಟ್ರಪತಿಗಳು ಒಪ್ಪಿಗೆ ಸೂಚಿಸಿದ್ದು, ರಾಜ್ಯ ಗೆಜೆಟ್‌ನಲ್ಲಿ ಪ್ರಕಟವಾಗಿದೆ.

ಕೋರ್ಟ್‌ಗಳಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಸಿವಿಲ್ ವ್ಯಾಜ್ಯಗಳು ವಿಲೇವಾರಿಗೆ ಬಾಕಿ ಇವೆ. ಹಾಗಾಗಿ ಅವುಗಳ ತ್ವರಿತ ವಿಲೇವಾರಿಗಾಗಿ ರಾಜ್ಯ ಸರಕಾರ ಸಿವಿಲ್ ಪ್ರಕ್ರಿಯಾ ಸಂಹಿತೆ ಮಸೂದೆಗೆ


ಉದಯವಾಹಿನಿ ಚಿತ್ರ

ತಿದ್ದುಪಡಿ ಮಾಡಿತ್ತು.

ತಿದ್ದುಪಡಿ ಮಸೂದೆಯಿಂದ ಇನ್ನು ಮುಂದೆ ಸಿವಿಲ್ ಪ್ರಕರಣಗಳಲ್ಲಿ ನ್ಯಾಯದಾನ ತ್ವರಿಗತಿಯಲ್ಲಿ ಸಿಗಲಿದೆ. ಮಧ್ಯಸ್ಥಿಕೆದಾರರು ಸಿವಿಲ್ ದಾವೆಗಳ ರಾಜಿ-ಸಂಧಾನಕ್ಕೆ ಪ್ರಯತ್ನಿಸಲು ಅವಕಾಶ ಇದ್ದು, 2 ತಿಂಗಳುಗಳಲ್ಲಿ ರಾಜಿ-ಸಂಧಾನ ಮಾಡ ಬಹುದು. ಅದು ಮುರಿದು ಬಿದ್ದರೆ ತತ್‌ಕ್ಷಣವೇ ನ್ಯಾಯಾಲಯವು ವಿಚಾರಣೆಗೆ ಕೈಗೆತ್ತಿಕೊಳ್ಳಬಹುದು. ಅರ್ಜಿದಾರರು, ಪ್ರತಿವಾದಿ ಇಬ್ಬರೂ ಒಪ್ಪಿದರೆ ಇನ್ನೂ ಒಂದು ತಿಂಗಳ ರಾಜಿ-ಸಂಧಾನ ನಡೆಸಲು ಅವಕಾಶ ಇದೆ. ಅಲ್ಲೂ ಪ್ರಯೋಜನ ಆಗದಿದ್ದರೆ ನ್ಯಾಯಾಲಯ ವಿಚಾರಣೆ ನಡೆಸಲಿದೆ. ಈ ಪ್ರಕಾರ ಆದ್ಯತೆ ಮೇರೆಗೆ ಪ್ರಕರಣ ನಿರ್ವಹಿಸಲು ತಿದ್ದುಪಡಿಯಲ್ಲಿ ತಿಳಿಸಿದ್ದು, ಯಾವುದೇ ಹಂತದಲ್ಲಿ ಒಂದು ತಿಂಗಳಲ್ಲಿ ಕೇವಲ 3 ಮುಂದೂಡಿಕೆ ಅಥವಾ 3 ದಿನಾಂಕಗಳ ಅವಕಾಶ ಮಾತ್ರ ಇದೆ. ಯಾವುದೇ ಹಂತದಲ್ಲಿ ಅರ್ಜಿದಾರ-ಪ್ರತಿವಾದಿ ಈ ಅವಕಾಶದಲ್ಲಿ ಸಲ್ಲಿಸದಿದ್ದರೆ, ಅಂಥವರ ಹೇಳಿಕೆಗಳನ್ನು ಶೂನ್ಯವೆಂದು ಪರಿಗಣಿಸಲು ಅವಕಾಶ ಇದೆ.

**ಪ್ರಕರಣವನ್ನು ನ್ಯಾಯಾಲಯ ವಿಚಾರಣೆಗೆ ಕೈಗೆತ್ತಿಕೊಂಡ ದಿನವೇ ತೀರ್ಪಿನ ದಿನಾಂಕ ನಿಗದಿಪಡಿಸಲಿದೆ. ಅಲ್ಲದೆ, ಲಿಖಿತ ಹೇಳಿಕೆ, ಸಾಕ್ಷ್ಯ ಸಂಗ್ರಹ, ಪ್ರಮಾಣ ಪತ್ರ ಸಲ್ಲಿಕೆ, ಸಾಕ್ಷ್ಯ ದಾಖಲಿಸುವಿಕೆ, ಲಿಖಿತ ವಾದ ಮಂಡನೆ, ಮೌಖಿಕ ವಾದ ಮಂಡನೆ ಆಲಿಸುವಿಕೆ, ಮೌಖಿಕ ವಾದದ ಚರ್ಚೆಗೂ ವೇಳಾಪಟ್ಟಿಯನ್ನು ಸೂಚಿಸಲಿದೆ.**

## ಸಾಲ ಹಿಂತಿರುಗಿಸದೇ ವಂಚನೆ ಆರೋಪ: ನಿರ್ಮಾಪಕ ಸೂರಪ್ಪ ಬಾಬು ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು

ಸಿನಿಮಾ ನಿರ್ಮಾಣಕ್ಕೆಂದು ಪಡೆದ ಸಾಲ ಹಿಂತಿರುಗಿಸದೇ ವಂಚಿಸಿದ ಆರೋಪದಡಿ ನಿರ್ಮಾಪಕ ಸೂರಪ್ಪ ಬಾಬು ವಿರುದ್ಧ ಅಮೃತಹಳ್ಳಿ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ನಗರದ ತಲಕಾವೇರಿ ಲೇಔಟ್ ನಿವಾಸಿ ಎಚ್.ಜಿ. ಲಕ್ಷ್ಮೀ ಅವರ ದೂರು ಆಧರಿಸಿ ಪ್ರಕರಣ ದಾಖಲಿಸಿಕೊಂಡು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ನಟರಾದ ಶಿವರಾಜಕುಮಾರ್ ಹಾಗೂ ಗಣೇಶ್ ಅವರನ್ನು ಹಾಕಿಕೊಂಡು ಪ್ರೊಡಕ್ಷನ್ ನಂಬರ್ 06 ಚಿತ್ರ ನಿರ್ಮಿಸುತ್ತಿರುವುದಾಗಿ ನಂಬಿಸಿ ರೂ.92.50 ಲಕ್ಷ ಪಡೆದುಕೊಂಡಿದ್ದರು. ಈ ಪೈಕಿ ರೂ.25 ಲಕ್ಷ ಮಾತ್ರ ಹಿಂದಿರುಗಿಸಿ, ಉಳಿದ ಮೊತ್ತವನ್ನು ವಾಪಸ್ ನೀಡದೆ ವಂಚಿಸಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

2023ರ ಅಕ್ಟೋಬರ್‌ನಲ್ಲಿ ಸೂರಪ್ಪ


ಉದಯವಾಹಿನಿ ಚಿತ್ರ

ಬಾಬು ಭೇಟಿಯಾಗಿ, ಚಿತ್ರ ನಿರ್ಮಾಣಕ್ಕೆ ಹಣಕಾಸು ನೆರವು ಕೋರಿದ್ದರು.

ಹಂತ ಹಂತವಾಗಿ ಅವರಿಗೆ ಸಾಲದ ರೂಪದಲ್ಲಿ ಹಣ ನೀಡಿದ್ದೇನೆ. ಈ ಸಂಬಂಧ ಒಪ್ಪಂದ ಮಾಡಿಕೊಳ್ಳಲಾಗಿತ್ತು. ನಂತರ ಪರಿಶೀಲಿಸಿದಾಗ ಶಿವರಾಜ್ ಕುಮಾರ್ ಮತ್ತು ಗಣೇಶ್ ಅವರ ಹಾಕಿಕೊಂಡು ಯಾವುದೇ ಚಿತ್ರ ನಿರ್ಮಿಸುತ್ತಿಲ್ಲ ಎಂಬುದು ಗೊತ್ತಾಯಿತು' ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## ಜೀವಿಶಾಸ್ತ್ರ, ಪರಿಸರ ಈಶ್ವರ್ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ, ಕೊಡಗು ಮೊದಲಾದ ಭಾಗದಲ್ಲಿ ಮುಂಗಾರು ಪೂರ್ವ ಮಳೆಗೆ ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ.

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡಿರುವ ಅವರು, ಪಶ್ಚಿಮ ಘಟ್ಟದಲ್ಲಿ ಹಲವು ರಸ್ತೆ, ಮತ್ತಿತರ ಯೋಜನೆಗಳು ಕಾರ್ಯಗತವಾಗುತ್ತಿದ್ದು, ಇದರಿಂದ ಘಟ್ಟ ಅಪಾಯಕ್ಕೆ ಸಿಲುಕಿದೆ.

ಆಸ್ತಿಹಾನಿ, ಬೆಳೆ ಹಾನಿ, ಜೀವಿಹಾನಿಯ ಜೊತೆಗೆ ವನ್ಯ ಜೀವಿಗಳೂ ಸಂಕಷ್ಟ ಎದುರಿಸುವಂತಾಗಿದೆ ಎಂದು ತಜ್ಞರು ಆತಂಕ ವ್ಯಕ್ತಪಡಿಸಿರುವುದಾಗಿ ತಿಳಿಸಿದ್ದಾರೆ. ಪಶ್ಚಿಮಘಟ್ಟ ಕ್ಷೀಣಿಸಿದರೆ ಮುಂಬರುವ ದಿನಮಾನಗಳಲ್ಲಿ ತೀವ್ರ ಜಲಕ್ಷಾಮ ಎದುರಾಗುವ ಭೀತಿ ಇದೆ ಎಂಬ ತಜ್ಞರ ಅಭಿಪ್ರಾಯ ಉಲ್ಲೇಖಿಸಿರುವ ಅವರು, ಈ ನಿಟ್ಟಿನಲ್ಲಿ ಅಧ್ಯಯನ ಮಾಡಿ 3 ತಿಂಗಳೊಳಗೆ ಪಶ್ಚಿಮಘಟ್ಟ ತಾಳಿಕೊಳ್ಳುವ ಸಾಮರ್ಥ್ಯದ ಬಗ್ಗೆ ವರದಿ ಸಲ್ಲಿಸಲು ಜೀವವೈವಿಧ್ಯ ಮಂಡಳಿಯ ಸದಸ್ಯ


ಉದಯವಾಹಿನಿ ಚಿತ್ರ

ಕಾರ್ಯದರ್ಶಿ, ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ ಹಾಗೂ ಅರಣ್ಯ ಸಂರಕ್ಷಣೆ ವಿಭಾಗದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೂ ಸೂಚಿಸಿದ್ದಾರೆ. ಜೀವವೈವಿಧ್ಯತೆಯ ತಾಣವಾದ ಪಶ್ಚಿಮಘಟ್ಟದಲ್ಲಿ ಕರ್ನಾಟಕದ ಅರಣ್ಯಗಳ ಪೈಕಿ 60%ರಷ್ಟು ಅರಣ್ಯ ಪ್ರದೇಶ ಇದ್ದು, ಇದು ಸಸ್ಯಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲಗಳ ನೆಲೆವೀಡಾಗಿದೆ. ಪಶ್ಚಿಮಘಟ್ಟಗಳು ಮಳೆಯ ಮಾರುತ ತಡೆದು ಮಳೆ ಸುರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿರುವ ಈಶ್ವರ ಖಂಡ್ರೆ, ಪಶ್ಚಿಮ ಘಟ್ಟದ ಪ್ರಾಮುಖ್ಯತೆ, ಸಂರಕ್ಷಣೆಯ ಮನವರಿಕೆ ಮಾಡಿಸಿದ್ದಾರೆ.

## ವಿಮಾನ ತರಬೇತಿ ಸಂಸ್ಥೆ ಸ್ಥಾಪನೆಗೆ ರಾಜ್ಯ ಸರ್ಕಾರ ಮುಂದು!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವೈಮಾನಿಕ ಸೌಲಭ್ಯ ವಿಸ್ತರಿಸುವುದು ಗುರಿ ಹೊಂದಿರುವ ರಾಜ್ಯ ಸರ್ಕಾರವು, ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ವಿಮಾನ ತರಬೇತಿ ಸಂಸ್ಥೆ ಸ್ಥಾಪಿಸಲು ಮುಂದಾಗಿದೆ.

ಶಿವಮೊಗ್ಗ ವಿಮಾನ ನಿಲ್ದಾಣವನ್ನು ರಾಜ್ಯ ಸರ್ಕಾರದ ಅಧೀನದ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ (ಕೆಎಸ್‌ಐಐಡಿಸಿ) ನಿರ್ವಹಣೆ ಮಾಡುತ್ತಿದೆ. ಇದೇ ಸಂಸ್ಥೆ ಈಗ ವೈಮಾನಿಕ ತರಬೇತಿ ಸಂಸ್ಥೆ ಆರಂಭಿಸಲು ಟೆಂಡರ್ ಆಹ್ವಾನಿಸಿದೆ.

ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ಎಫ್‌ಟಿಒ ಸ್ಥಾಪನೆಗಾಗಿ 3,500 ಚದರ ಮೀ. ವಿಸ್ತೀರ್ಣದ ಜಾಗ ನೀಡಲಾಗುತ್ತಿದ್ದು, ಅದರಲ್ಲಿ 1,500 ಚದರ ಮೀ. ಅನ್ನು ವಿಮಾನಗಳ ಹ್ಯಾಂಗರ್‌ಗಳಿಗೆ, 2 ಸಾವಿರ ಚದರ ಮೀ. ತರಗತಿ ಕೊಠಡಿ, ಕಚೇರಿಗಳಿಗೆ


ಉದಯವಾಹಿನಿ ಚಿತ್ರ

ಬಳಸಿಕೊಳ್ಳಲಾಗುತ್ತದೆ.

2000 ಚದರ ಮೀಟರ್ ಜಾಗವನ್ನು ಟರ್ಮಿನಲ್‌ನ ಹೊರ ಭಾಗದಲ್ಲಿ ನೀಡಲಾಗುತ್ತಿದೆ. ಇಲ್ಲಿ ಕ್ಲಾಸ್‌ರೂಂ, ಸಿಮುಲೇಟರ್ ವಿಭಾಗ, ಗ್ರಂಥಾಲಯ, ರೇಡಿಯೋ ಟೆಲಿಫೋನಿ ತರಬೇತಿ, ಟೆಸ್ಟಿಂಗ್ ರೂಮ್, ಕಚೇರಿಗಳು ಸೇರಿದ ವಿವಿಧ ಕೊಠಡಿಗಳನ್ನು ನಿರ್ಮಿಸಲಾಗುತ್ತದೆ. ಕೆಎಸ್‌ಐಐಡಿಸಿ ಸಂಸ್ಥೆಯು ಫೈರ್ ಸೇಫ್ಟಿ, ಆಂಬುಲೆನ್ಸ್ ಸೌಲಭ್ಯ, ಏರ್ ಟ್ರಾಫಿಕ್ ಕಂಟ್ರೋಲ್, ರನ್‌ವೇ ನಿರ್ವಹಣೆ ಮಾಡಲಿದೆ. ತರಬೇತಿ ಸಂಸ್ಥೆ ಆರಂಭಿಸುವ ಏಜೆನ್ಸಿಯು ತನ್ನ ವ್ಯಾಪ್ತಿಯ ವಿದ್ಯುತ್ ಬಿಲ್, ಸೆಕ್ಯೂರಿಟಿ ಸೇರಿದಂತೆ ವಿವಿಧ ನಿರ್ವಹಣೆಗಳನ್ನು ತಾನೆ ಮಾಡಿಕೊಳ್ಳಬೇಕು. ಅಲ್ಲದೆ, ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ), ನಾಗರಿಕ ವಿಮಾನಯಾನ ಇಲಾಖೆ ಸೂಚಿಸಿರುವ ನಿಯಮಗಳ ಪ್ರಕಾರ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಲಾಗಿದೆ.

ಪ್ರತಿ ವರ್ಷ 100 ಮಂದಿಗೆ ತರಬೇತಿ ನೀಡುವ ಗುರಿ ಇದೆ. ತರಬೇತಿ ಸಂಸ್ಥೆ ಆರಂಭವಾದ ಮೊದಲ ವರ್ಷ 50 ಅಭ್ಯರ್ಥಿಗಳನ್ನು ದಾಖಲು ಮಾಡಲಾಗುತ್ತದೆ. ಮೂರನೇ ವರ್ಷದ ಹೊತ್ತಿಗೆ 100 ಅಭ್ಯರ್ಥಿಗಳನ್ನು ದಾಖಲು ಮಾಡಿಕೊಳ್ಳಬೇಕು.

ಶೇ.25 ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳು ಮತ್ತು ಮಹಿಳೆಯರಿಗೆ ಕಾಯ್ದಿರಿಸಬೇಕು. ಅವರಿಗೆ ಶುಲ್ಕ ವಿನಾಯಿತಿ ಸಹ ನೀಡಬೇಕು.

# ಮೆಟ್ರೋ 3ನೇ ಹಂತಕ್ಕೆ 25 ಸಾವಿರ ಚ.ಮೀ ಭೂಸ್ವಾಧೀನ

## ಯಾವುದೇ ರೀತಿಯ ಹಾನಿಯಾಗದಂತೆ ಮೆಟ್ರೊ ಮಾರ್ಗವನ್ನು ನಿರ್ಮಿಸಲಾಗುವುದು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ಹೇಳಿಕೆ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ 3ನೇ ಹಂತದ ಯೋಜನೆಯಡಿ ಜೆ.ಪಿ.ನಗರ 4ನೇ ಹಂತದಿಂದ ಹೆಬ್ಬಾಳದ ಕೆಂಪಾಪುರದವರೆಗೆ 32.15 ಕಿಮೀ ಉದ್ದದ ಮಾರ್ಗ ನಿರ್ಮಾಣಕ್ಕೆ ಬಿಎಂಆರ್‌ಸಿಎಲ್ ಸಿದ್ಧತೆ ನಡೆಸಿದೆ. ಈ ಸಂಬಂಧ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಿದೆ. ಮೊದಲಿಗೆ ಜೆ.ಪಿ.ನಗರದ 4ನೇ ಹಂತದಿಂದ ಮೈಸೂರು ರಸ್ತೆಯ ಮೆಟ್ರೊ ನಿಲ್ದಾಣದವರೆಗೆ 25,180.61 ಚ.ಮೀ ಜಾಗವನ್ನು ಸ್ವಾಧೀನ ಪಡಿಸಿಕೊಳ್ಳುತ್ತಿದೆ.

ನೈನಪ್ಪಶೆಟ್ಟಿಪಾಳ್ಯಯಿಂದ ನಾಯಂಡಹಳ್ಳಿವರೆಗಿನ 10 ಗ್ರಾಮಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಕೈಗೊಂಡಿದೆ. ಮೆಟ್ರೊ 3ನೇ ಹಂತದಡಿ ಜೆ.ಪಿ.ನಗರ 4 ನೇ ಹಂತದಿಂದ ಕೆಂಪಾಪುರ (32.15 ಕಿಮೀ), ಹೊಸಹಳ್ಳಿಯಿಂದ ಕಡಬಗೆರೆವರೆಗೆ (12.5 ಕಿಮೀ) ಎರಡು ಕಾರಿಡಾರ್‌ಗಳಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ಕಾರಿಡಾರ್-1ಕ್ಕೆ 1,29,743 ಚ.ಮೀ ವಿಸ್ತೀರ್ಣದ ಜಾಗವನ್ನು ಸ್ವಾಧೀನ ಪಡಿಸಿಕೊಳ್ಳಲಾಗುತ್ತಿದೆ. ಒಟ್ಟು 777 ಖಾಸಗಿ ಸ್ವತ್ತುಗಳನ್ನು ಗುರುತಿಸಿದ್ದು, ಭೂಸ್ವಾಧೀನಕ್ಕೆ 1900 ಕೋಟಿ ರೂ. ವೆಚ್ಚ ಅಂದಾಜಿಸಲಾಗಿದೆ.

**100 ಕಟ್ಟಡಗಳು ನೆಲಸಮ:** ಜೆ.ಪಿ.ನಗರ 4ನೇ ಹಂತದಿಂದ ಮೈಸೂರು ರಸ್ತೆಯ ಮೆಟ್ರೊ ನಿಲ್ದಾಣದವರೆಗಿನ 10.93 ಕಿ.ಮೀ ಉದ್ದದ ಮಾರ್ಗದಲ್ಲಿ 8 ನಿಲ್ದಾಣಗಳು ನಿರ್ಮಾಣಗೊಳ್ಳಲಿವೆ. ಜೆ.ಪಿ.ನಗರ 4ನೇ ಹಂತ, 5ನೇ ಹಂತ, ಜೆ.ಪಿ.ನಗರ, ಕದಿರೇನಹಳ್ಳಿ, ಕಾಮಾಕ್ಯ ಬಸ್ ನಿಲ್ದಾಣ, ಹೊಸಕೆರೆಹಳ್ಳಿ, ದ್ವಾರಕಾನಗರ ಹಾಗೂ ಮೈಸೂರು ರಸ್ತೆಯಲ್ಲಿ ನಿಲ್ದಾಣ ನಿರ್ಮಿಸಲು ಉದ್ದೇಶಿಸಿದ್ದು, ಇದಕ್ಕಾಗಿ 100 ಕಟ್ಟಡಗಳು ನೆಲಸಮಗೊಳ್ಳಲಿವೆ. ಹೊಸಕೆರೆಹಳ್ಳಿ ಭಾಗದಲ್ಲಿ ಸ್ವಾಧೀನಕ್ಕೆ ಒಳಪಡುವ ಕಟ್ಟಡಗಳ ಸಂಖ್ಯೆ ಕಡಿಮೆ ಇವೆ. ಕಟ್ಟಡಗಳ ಕಾಂಪೌಂಡ್ ಹಾಗೂ ಮರಗಳಷ್ಟೇ ತೆರವಾಗಲಿವೆ. ಈ ಮಾರ್ಗದಲ್ಲಿ ಸರಕಾರಿ ಜಮೀನು ಕಡಿಮೆ ಇದ್ದು, ಖಾಸಗಿ ಸ್ವತ್ತುಗಳನ್ನೇ ಹೆಚ್ಚಿನ ಸಂಖ್ಯೆಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ.

**ಡಿಪಿಆರ್‌ನಂತೆ ಭೂಸ್ವಾಧೀನ:** ನಮ್ಮ ಮೆಟ್ರೊ 3ನೇ ಹಂತದಲ್ಲಿ ಡಬಲ್ ಡೆಕ್ಕರ್ ಮಾರ್ಗ ನಿರ್ಮಾಣ ಮಾಡಲಾಗುತ್ತದೆ. ಸದ್ಯ ವಿಸ್ತೃತ ಯೋಜನಾ ವರದಿಯಂತೆ (ಡಿಪಿಆರ್) ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಈ ಮಾರ್ಗದಲ್ಲಿರುವ ಮೇಲ್ಸೇತುವೆ, ಕೆಳಸೇತುವೆಗಳಿಗೆ ಯಾವುದೇ ರೀತಿಯ ಹಾನಿಯಾಗದಂತೆ ಮೆಟ್ರೊ ಮಾರ್ಗವನ್ನು ನಿರ್ಮಿಸಲಾಗುವುದು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದರು.



ಉದಯವಾಹಿನಿ ಚಿತ್ರ

**ಇಂಟರ್‌ಚೇಂಜ್ ನಿಲ್ದಾಣಗಳು:** ತುಮಕೂರು ರಸ್ತೆಯ ಹಸಿರು ಮಾರ್ಗದ ಪೀಣ್ಯ ನಿಲ್ದಾಣ ಮತ್ತು ಜೆ.ಪಿ.ನಗರ ನಿಲ್ದಾಣ, ನೇರಳೆ ಮಾರ್ಗದ ಮೈಸೂರು ರಸ್ತೆ ನಿಲ್ದಾಣ ಹಾಗೂ ಹೊಸಹಳ್ಳಿ- ಕಡಬಗೆರೆ ಮಾರ್ಗದ ಸುಮನಹಳ್ಳಿಯಲ್ಲಿ ಇಂಟರ್‌ಚೇಂಜ್ ನಿಲ್ದಾಣಗಳು ನಿರ್ಮಾಣವಾಗಲಿವೆ. ಅಲ್ಲದೆ, ಇದು ಹೆಬ್ಬಾಳದಲ್ಲಿ ನೀಲಿ ಮಾರ್ಗ (ಅಂತಾರಾಷ್ಟ್ರೀಯ ವಿಮಾಣ ನಿಲ್ದಾಣ ಮಾರ್ಗ) ಮತ್ತು ಕೆಂಪು ಮಾರ್ಗವನ್ನು (ಹೆಬ್ಬಾಳ-ಸರ್ಜಾಪುರ ಮಾರ್ಗ) ಬೆಸೆಯುತ್ತದೆ.

### 3ನೇ ಹಂತದ ಯೋಜನೆಯ ಸಂಕ್ಷಿಪ್ತ ಮಾಹಿತಿ

- ಕಾರಿಡಾರ್-1 ಜೆ.ಪಿ.ನಗರ 4ನೇ ಹಂತದಿಂದ ಕೆಂಪಾಪುರ 32.15 ಕಿ.ಮೀ, 23 ನಿಲ್ದಾಣ
- ಕಾರಿಡಾರ್- 2 ಹೊಸಹಳ್ಳಿಯಿಂದ ಕಡಬಗೆರೆ 12.5 ಕಿ.ಮೀ, 9 ನಿಲ್ದಾಣ
- 15,611 ಕೋಟಿ ರೂ. ಯೋಜನಾ ವೆಚ್ಚ
- 7,577 ಕೋಟಿ ರೂ. ಸಾಲ
- ಜಾಹೀರಾತು, ಇನ್ನಿತರೆ ಮೂಲಗಳಿಂದ 450 ಕೋಟಿ ಆದಾಯ ನಿರೀಕ್ಷೆ
- ಅಗತ್ಯವಿರುವ ಕೋಚ್‌ಗಳು 252
- 2028ಕ್ಕೆ ನಿತ್ಯ 7.28 ಲಕ್ಷ ಮಂದಿ ಪ್ರಯಾಣಿಸುವ ನಿರೀಕ್ಷೆ

| ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿರುವ ಜಾಗ |
|---|
| ಪ್ರದೇಶ -ವಿಸ್ತೀರ್ಣ (ಚ.ಮೀ) |
| ನೈನಪ್ಪಶೆಟ್ಟಿಪಾಳ್ಯ 1116.38 |
| ಬಿಳೇಕಹಳ್ಳಿ 1499.32 |
| ಸಾರಕ್ಕಿ 4993.33 |
| ಜರಗನಹಳ್ಳಿ 4556.46 |
| ಕದಿರೇನಹಳ್ಳಿ 82.38 |
| ಕರೀಸಂದ್ರ 787.04 |
| ಕತ್ರಿಗುಪ್ಪೆ 1549.82 |
| ಹೊಸಕೆರೆಹಳ್ಳಿ 3452.19 |
| ಪಂತರಪಾಳ್ಯ 1872.31 |
| ನಾಯಂಡಹಳ್ಳಿ 5271.38 |

# ವಿದ್ಯಾರ್ಥಿಗಳ ಮೇಲೆ ಚಲನಚಿತ್ರ ನಟರು, ಕ್ರಿಕೆಟಿಗರ ಪ್ರಭಾವ


## ತಂಬಾಕು ಸೇವನೆಯ ದೃಶ್ಯಗಳಿಂದ ಹದಿಹರೆಯದವರ ಮೇಲೆ ದುಷ್ಪರಿಣಾಮ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಶಾಲಾ-ಕಾಲೇಜು ವಿದ್ಯಾರ್ಥಿಗಳು ಎಲ್ಲವನ್ನೂ ನೋಡುವ, ತಿಳಿಯುವ, ಅನುಭವಿಸುವ ಮನೋಭಾವ ಹೊಂದಿದ್ದು, ಅವರ ಮೇಲೆ ಚಲನಚಿತ್ರ, ನಟರು, ಕ್ರಿಕೆಟಿಗರು, ಸ್ಟಾರ್‌ಗಳ ಪ್ರಭಾವ ಬೀರುತ್ತಿದ್ದು, ತಂಬಾಕು ಸೇವನೆಯ ದೃಶ್ಯಗಳು ಹದಿಹರೆಯದವರ ಮೇಲೆ ದುಷ್ಪರಿಣಾಮ ಬೀರುತ್ತಿವೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿ ಬಿ. ಶಿಲ್ಪಾ ಆತಂಕ ವ್ಯಕ್ತಪಡಿಸಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಪಂ, ಪೊಲೀಸ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿ ಕಚೇರಿ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಚಿತ್ರ ನಟರು ಮತ್ತು ಕಲಾವಿದರು ಅಭಿನಯಿಸುವ ತಂಬಾಕು ಸೇವನೆಯ ದೃಶ್ಯಾವಳಿಗಳನ್ನು ನೋಡಿ ಕುತೂಹಲಕ್ಕೆ ಒಳಗಾಗಿ ಯುವಜನತೆ ತಂಬಾಕು ಉತ್ಪನ್ನಗಳ ಸೇವನೆಯ ದಾಸರಾಗುತ್ತಿರುವುದು ಹೆಚ್ಚಾಗುತ್ತಿದೆ. ತಂಬಾಕು ಉತ್ಪನ್ನಗಳ ಬಳಕೆಯ ಚಿತ್ರಣಗಳನ್ನು ಅಲ್ಪ ಅವಧಿಯಲ್ಲಿ ತೋರಿಸಿ ಅದರಿಂದ ಆಗುವ ದುಷ್ಪರಿಣಾಮಗಳನ್ನು ಹಾಗೂ ಆರೋಗ್ಯದ ಮೇಲಾಗುವ ಪರಿಣಾಮಗಳನ್ನು ದೀರ್ಘ ಅವಧಿಯಲ್ಲಿ ತೋರಿಸಿ ಜಾಗೃತಿ ಮೂಡಿಸುವ ಸಾಮಾಜಿಕ ಜವಾಬ್ದಾರಿ ತೋರಬೇಕು ಎಂದರು. ವಿಶ್ವ 'ತಂಬಾಕು ರಹಿತ ದಿನ'ದಂದು ತಂಬಾಕು ಸೇವನೆಯಿಂದ ಮನುಷ್ಯನ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ಯುವ ಸಮುದಾಯಕ್ಕೆ ಮನ ಮುಟ್ಟುವಂತೆ ನಾವೆಲ್ಲರೂ ತಿಳಿಸಿ ಹೇಳಬೇಕಾಗಿರುವುದು ಇಂದಿನ ಅಗತ್ಯ. ತಂಬಾಕು ಸೇವನೆಯಿಂದ ಯುವಪೀಳಿಗೆ ರಕ್ಷಿಸುವುದು ಹೇಗೆ ಎಂಬ ಬಗ್ಗೆ ಯೋಜನೆಗಳನ್ನು ರೂಪಿಸುವ ಜತೆಗೆ, ಅವರಲ್ಲಿ ಈ ಬಗ್ಗೆ ಅರಿವು ಮೂಡಿಸಿ, ತಂಬಾಕು ನಿಯಂತ್ರಣದ ವಿಚಾರದಲ್ಲಿ ನೂತನ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಸಮಾಜ ಒಟ್ಟಾಗಿ ಪಣ ತೊಡಬೇಕಾಗಿದೆ ಎಂದರು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಶಿಕ್ಷಣ ಸಂಸ್ಥೆಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಮೊಬೈಲ್ ಮೂಲಕ ಕಾನೂನುಬಾಹಿರ ತಂಬಾಕು ಉತ್ಪನ್ನಗಳ ಮಾರಾಟದ ಮೇಲೆ ಪ್ರಕರಣ ದಾಖಲಿಸಲು ಆಂಡ್ರಾಯ್ಡ್ ಆಪ್ಲಿಕೇಷನ್ ಪರಿಚಯಿಸಲಾಗಿದೆ. ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ವಿಶ್ವ ತಂಬಾಕು ನಿಷೇಧ ದಿನ ಅಥವಾ ವಿಶ್ವ ತಂಬಾಕು ರಹಿತ ದಿನ ಆಚರಿಸಲಾಗುತ್ತದೆ ಎಂದರು. ಈ ವೇಳೆ ನಂದಿ ವೈದ್ಯಕಿಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಿಂದ ತಂಬಾಕು ನಿಯಂತ್ರಣದ ಕಿರು ನಾಟಕ ಪ್ರದರ್ಶಿಸಲಾಯಿತು.



**ಯುವ ಸಮೂಹ ವ್ಯಸನಗಳಿಗೆ ಬಲಿ**

**ಸೇವನೆಯ ದಾಸರಾಗುತ್ತಿರುವುದು**

**ಶಾಲಾ-ಕಾಲೇಜು ವಿದ್ಯಾರ್ಥಿಗಳು ಎಲ್ಲವನ್ನೂ ನೋಡುವ, ತಿಳಿಯುವ, ಅನುಭವಿಸುವ ಮನೋಭಾವ ಹೊಂದಿದ್ದು, ಅವರ ಮೇಲೆ ಚಲನಚಿತ್ರ, ನಟರು, ಕ್ರಿಕೆಟಿಗರು, ಸ್ಟಾರ್‌ಗಳ ಪ್ರಭಾವ ಬೀರುತ್ತಿದ್ದು, ತಂಬಾಕು ಸೇವನೆಯ ದೃಶ್ಯಗಳು ಹದಿಹರೆಯದವರ ಮೇಲೆ ದುಷ್ಪರಿಣಾಮ ಬೀರುತ್ತಿವೆ, ಚಿತ್ರ, ನಟರು ಮತ್ತು ಕಲಾವಿದರು ಅಭಿನಯಿಸುವ ತಂಬಾಕು ಸೇವನೆಯ ದೃಶ್ಯಾವಳಿಗಳನ್ನು ನೋಡಿ ಕುತೂಹಲಕ್ಕೆ ಒಳಗಾಗಿ ಯುವಜನತೆ ತಂಬಾಕು ಉತ್ಪನ್ನಗಳ ಸೇವನೆಯ ದಾಸರಾಗುತ್ತಿರುವುದು ಹೆಚ್ಚಾಗುತ್ತಿದೆ ಎಂದರು.**

**ತಂಬಾಕು ಸೇವನೆಯಿಂದ ಪ್ರತಿ ವರ್ಷ 8 ದಶಲಕ್ಷಕ್ಕೂ ಹೆಚ್ಚು ಜನರು ಸಾವನ್ನಪ್ಪುತ್ತಿದ್ದಾರೆ. ಈ ಪೈಕಿ 7 ದಶಲಕ್ಷಕ್ಕಿಂತಲೂ ಹೆಚ್ಚು ಸಾವುಗಳು ನೇರ ತಂಬಾಕು ಸೇವನೆಯಿಂದ ಉಂಟಾಗುತ್ತವೆ, ಅರ್ಧಕ್ಕೂ ಹೆಚ್ಚು ಮಂದಿ ಪರೋಕ್ಷವಾಗಿ ತೊಂದರೆ ಅನುಭವಿಸುವಂತಾಗಿದೆ. ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಧ್ವನಿಪೆಟ್ಟಿಗೆ ಕ್ಯಾನ್ಸರ್ ಹಾಗೂ ಅನ್ನನಾಳ ಕ್ಯಾನ್ಸರ್‌ನಂತಹ ಕಾಯಿಲೆಗಳಿಗೆ ಹೆಚ್ಚಾಗಿ ತುತ್ತಾಗುತ್ತಿದ್ದಾರೆ**

**- ಕುಶಾಲ್ ಚೌಕ್ಸೆ, ಎಸ್‌ಪಿ**

# ರಾಜಕೀಯ ದ್ವೇಷಕ್ಕೆ ಜನೌಷಧ ಕೇಂದ್ರ ಬಲಿಯಾಗದಿರಲಿ

• **ಉದಯವಾಹಿನಿ, ಮೈಸೂರು**



ಕಾಂಗ್ರೆಸ್‌ನ ರಾಜಕೀಯ ದ್ವೇಷಕ್ಕೆ ಪ್ರಧಾನಮಂತ್ರಿ ಭಾರತೀಯ ಜನೌಷಧ ಕೇಂದ್ರಗಳು ಬಲಿಯಾಗದಿರಲಿ ಎಂದು ಬಿಜೆಪಿ ಮುಖಂಡ ಸಂದೇಶ್ ಸ್ವಾಮಿ ಮನವಿ ಮಾಡಿದ್ದಾರೆ. ರಾಜ್ಯದ ವಿವಿಧೆಡೆ ಇರುವ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿನ ಸುಮಾರು 140ಕ್ಕೂ ಹೆಚ್ಚು ಜನೌಷಧ ಮಳಿಗೆ ಮುಚ್ಚುವಂತೆ ಸರ್ಕಾರ ಆದೇಶಿಸಿರುವುದು ಜನ ವಿರೋಧಿ ಕ್ರಮವಾಗಿದೆ ಎಂದು ದೂರಿದ್ದಾರೆ. ರೋಗಿಗಳಿಗೆ ಕಡಿಮೆ ದರದಲ್ಲಿ ಔಷಧ ಮಾರಾಟ ಮಾಡುತ್ತಿದ್ದ ಜನೌಷಧ ಕೇಂದ್ರ ಮುಚ್ಚಿಸುತ್ತಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ.

ಬಡರೋಗಿಗಳ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕಾದ ರಾಜ್ಯ ಸರ್ಕಾರ, ಪ್ರಧಾನಿ ಹೆಸರಿನಲ್ಲಿ ಔಷಧ ಮಳಿಗೆ ಇರುವುದು ಸಹಿಸದೆ, ಸೇಡಿನ ಕ್ರಮ ಅನುಸರಿಸುತ್ತಿರುವುದು ನಾಚಿಗೇಡಿನ ಸಂಗತಿ ಎಂದು ಕಿಡಿಕಾರಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಅಗತ್ಯವಾಗಿರುವ ಔಷಧಗಳನ್ನು ಸರಬರಾಜು ಮಾಡುತ್ತಿದ್ದೇವೆಯೇ ಎಂಬುದರ ಬಗ್ಗೆ ಆರೋಗ್ಯ ಸಚಿವರು ಆತ್ಮಾವಲೋಕನ ಮಾಡಿಕೊಳ್ಳಬೇಕು. ಸಿಎಂ ಸಿದ್ದರಾಮಯ್ಯ ಅವರು ಜನರ ಆರೋಗ್ಯದ ಬಗ್ಗೆಯೂ ಕಾಳಜಿವಹಿಸಬೇಕು. ಭಾರತೀಯ ಜನೌಷಧ ಮಳಿಗೆ ಮುಚ್ಚಿಸುವ ಆದೇಶ ಪುನರ್ ಪರಿಶೀಲಿಸಬೇಕು ಎಂದು ಪತ್ರಿಕಾ ಹೇಳಿಕೆಯಲ್ಲಿ ಕೋರಿದ್ದಾರೆ.

**ಕಡಿಮೆ ದರಕ್ಕೆ ಬಡರೋಗಿಗಳಿಗೆ ಔಷಧಗಳು ಲಭ್ಯವಾಗಲೆಂದು ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನೌಷಧ ಮಳಿಗೆ ತೆರೆಯಲಾಗಿತ್ತು. ಆದರೆ ರೋಗಿಗಳ ಪಾಲಿಗೆ ವರದಾನವಾಗಿದ್ದ ಮಳಿಗೆ ಏಕಾಏಕಿ ಮುಚ್ಚಿಸುತ್ತಿರುವುದು ಅನ್ಯಾಯ. ಜನರ ತೆರಿಗೆ ಹಣದ ಕಾಳಜಿ ಇದ್ದರೆ ಜನೌಷಧ ಕಂಪನಿಗಳಿಂದ ಔಷಧ ಖರೀದಿಸಿ ಸರ್ಕಾರಿ ಆಸ್ಪತ್ರೆಗಳಲ್ಲಿ ವಿತರಿಸಿದರೆ, ಕಮಿಷನ್ ದಂಧೆಗೂ ಕಡಿವಾಣ ಬೀಳಲಿದೆ. ಸರ್ಕಾರಕ್ಕೂ ಕೋಟ್ಯಂತರ ಉಳಿತಾಯವಾಗಲಿದೆ ಎಂದಿದ್ದಾರೆ.**

# ವಿಶ್ವವೇ ಒಪ್ಪಿದ ಜ್ಞಾನದ ಸಂಕೇತ ಅಂಬೇಡ್ಕರ್: ಇನ್‌ಸ್ಪೆಕ್ಟರ್

• **ಉದಯವಾಹಿನಿ, ಭಾರತೀನಗರ**



ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಕೇವಲ ಒಂದು ವರ್ಗಕ್ಕೆ, ಒಂದು ವಿಚಾರಕ್ಕೆ ಒತ್ತುಕೊಡದೆ ಎಲ್ಲದರಲ್ಲೂ ಜ್ಞಾನ ಸಂಪಾದಿಸಿ, ಅವರು ರಚಿಸಿರುವ ಸಂವಿಧಾನವನ್ನು ವಿಶ್ವವೇ ಒಪ್ಪಿಕೊಂಡಿದೆ ಎಂದು ಪೊಲೀಸ್ ಇನ್‌ಸ್ಪೆಕ್ಟರ್ ಆನಂದ್ ಸ್ಮರಿಸಿದರು. ಸಮೀಪದ ಚಿಕ್ಕಅರಸಿನಕೆರೆ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸೇವಾ ಟ್ರಸ್ಟ್ ವತಿಯಿಂದ ಭಾನುವಾರ ನಡೆದ ಬುದ್ದ, ಬಸವ, ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಅಂಬೇಡ್ಕರ್ ರಚಿಸಿದ ಸಂವಿಧಾನದ ಎಲ್ಲಾ ವಿಧಿಗಳನ್ನು ವಿಶ್ವಸಂಸ್ಥೆಯೇ ಒಪ್ಪಿಕೊಂಡಿದ್ದು, ಇಡೀ ಏಷ್ಯಾ ಖಂಡಕ್ಕೆ ಬೆಳಕು ಚೆಲ್ಲಿದ ಮಹಾಪುರುಷರಾಗಿದ್ದಾರೆ. ದೇಶದಲ್ಲಿ ಎರಡೇ ಪಕ್ಷಗಳು ಸ್ಥಾಪಿತವಾಗಬೇಕೆಂದು ಹೇಳಿದಾಗ ಬಹುಪಕ್ಷಗಳು ಜಾರಿಯಲ್ಲಿದ್ದರೆ ಒಳ್ಳೆಯದು ಎಂದು ಅರ್ಥೈಸಿಸಿ ಬಹುಪಕ್ಷ ಪದ್ಧತಿ ಜಾರಿಗೆ ತಂದರು. ಇದರ ಪ್ರತಿಫಲವೇ ದಕ್ಷಿಣ ಭಾರತದಲ್ಲಿ ಪ್ರಾದೇಶಿಕ ಪಕ್ಷಗಳು ಅಧಿಕಾರದಲ್ಲಿವೆ ಎಂದು ಹೇಳಿದರು.

ಶಿಕ್ಷಣ, ಅಧಿಕಾರ ಹೊಂದಿದಲ್ಲಿ ಅಸ್ಪೃಷ್ಯತೆ ಹತ್ತಿರವೂ ಸುಳಿಯುವುದಿಲ್ಲ ಎಂದು ಹೇಳಿದರಲ್ಲದೆ, ಶಿಕ್ಷಣವೆಂದರೆ ತನ್ನನ್ನು ತಾನು ಬದಲಾವಣೆ ಮಾಡುವಂತಿರಬೇಕು. ಜೀವನ ಮಾರ್ಗದರ್ಶನದಂತಿರಬೇಕು, ಸಾಮಾಜಿಕ ಜ್ಞಾನ ಇರಬೇಕು ಎಂದು ಸಾರಿದ ಮಹಾಪುರುಷ ಅಂಬೇಡ್ಕರ್ ಎಂದು ಸ್ಮರಿಸಿದರು.

# ಅನಧಿಕೃತ ಮಾರಾಟ: ಕೈದಾರ, ರುದ್ರಾಕ್ಷಿ ಮಾಲೆ ವಶ

• **ಉದಯವಾಹಿನಿ, ಮಹದೇಶ್ವರ ಬೆಟ್ಟ**



ಮಲೆ ಮಹದೇಶ್ವರ ಬೆಟ್ಟದ ಅಂತರಗಂಗೆಯಲ್ಲಿ ಅನಧಿಕೃತವಾಗಿ ಕೈ ದಾರ ರುದ್ರಾಕ್ಷಿ ಮಣಿ ಮಾರಾಟ ಮಾಡುತ್ತಿರುವ ಮಾಹಿತಿ ಪಡೆದ ಪ್ರಾಧಿಕಾರದ ಸಿಬ್ಬಂದಿ ಅವುಗಳನ್ನು ವಶಕ್ಕೆ ಪಡೆದಿದ್ದಾರೆ. ಮಲೆ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ಸೇರಿದ ಪುಣ್ಯ ಸ್ಥಳವಾದ ಅಂತರ ಗಂಗೆಯ ಬಳಿ ಇರುವ ಗಣಪತಿ ದೇವಸ್ಥಾನ, ಶೇಷಣ್ಣನ ಗುಡಿಯಲ್ಲಿ ಪೂಜೆ ಸಲ್ಲಿಸಲು, ಅಂತರ ಗಂಗೆಯಲ್ಲಿ ಅಯ್ಯಪ್ಪ ಮಾಲಾಧಾರಿಗಳು ಕಳಚುವ ಮಾಲೆಗಳನ್ನು ತೆಗೆದುಕೊಳ್ಳುವ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಅನಧಿಕೃತವಾಗಿ ರುದ್ರಾಕ್ಷಿ ಮಾಲೆ ಮಾರಾಟ ಮಾಡುತ್ತಿದ್ದರು, ಈ ಬಗ್ಗೆ ಅವರಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಪ್ರಾಧಿಕಾರದ ಸಿಬ್ಬಂದಿ ತಿಳಿಸಿದ್ದಾರೆ.

ಮಣಿಗಳನ್ನು ಮಾರಾಟವನ್ನು ಮಾಡುತಿದ್ದ ವಸ್ತುಗಳನ್ನು ದಸ್ತಗಿರಿ ಮಾಡಿದ ಪ್ರಾಧಿಕಾರದ ಅಧಿಕಾರಿಗಳು. ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳವಾದ ಮಲೆ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ಸೇರಿದ ಪುಣ್ಯ ಸ್ಥಳವಾದ ಅಂತರ ಗಂಗೆಯ ಬಳಿ ಇರುವ ಗಣಪತಿ ದೇವಸ್ಥಾನ, ಶೇಷಣ್ಣನ ಗುಡಿಯಲ್ಲಿ ಪೂಜೆ ಸಲ್ಲಿಸಲು, ಅಂತರಗಂಗೆಯಲ್ಲಿ ಅಯ್ಯಪ್ಪ ಮಾಲಾಧಾರಿಗಳು ಕಳಚುವ ಮಾಲೆಗಳನ್ನು ತೆಗೆದುಕೊಳ್ಳುವ ಹಕ್ಕು ಬಾಧ್ಯತೆಯನ್ನು ಮಾತ್ರ ಗುತ್ತಿಗೆಯನ್ನು ಪಡೆದಿದ್ದ ಗುತ್ತಿಗೆ ದಾರರು ಅನಧಿಕೃತವಾಗಿ ಅಂತರಗಂಗೆಗೆ ಬರುವಂತಹ ಭಕ್ತರಿಗೆ ಕೈಗೆ ಕಟ್ಟುವ ದಾರ. ರುದ್ರಾಕ್ಷಿ ಇನ್ನಿತರ ಮಾಲೆಗಳನ್ನು ಭಕ್ತರಿಗೆ ದುಬಾರಿ ಬೆಲೆಗೆ ಮಾರಾಟವನ್ನು ಮಾಡಿ ಇದೇ ವೃತ್ತಿಯನ್ನಾಸಿಕೊಂಡು ಮುಂದುವರೆಯುತಿದ್ದರು. ಈ ವಿಷಯವನ್ನು ತಿಳಿದ ಪ್ರಾಧಿಕಾರದ ಕಾರ್ಯದರ್ಶಿ ರಘು ಮಾರ್ಗ ದರ್ಶನದಲ್ಲಿ ಪ್ರಾಧಿಕಾರದ ಸಿಬ್ಬಂದಿಗಳು ಅಲ್ಲಿ ಮಾರಾಟವನ್ನು ಮಾಡುತಿದ್ದ ವಸ್ತುಗಳನ್ನು ಪ್ರಾಧಿಕಾರದ ವಶಕ್ಕೆ ಪಡೆದು ಇನ್ನು ಮುಂದೆ ಮಾರಾಟವನ್ನು ಮಾಡಿದರೆ ಗುತ್ತಿಗೆಯನ್ನು ರದ್ದು ಪಡಿಸುವುದಾಗಿ ಗುತ್ತಿದಾರರಿಗೆ ಸೂಚಿಸಿದ್ದಾರೆ.

# ಶಸ್ತ್ರ ಚಿಕಿತ್ಸೆಗೆ ದಾಖಲಾಗದ್ದ ಬಾಲಕಿ ಸಾವು: ಮಿಮ್ಸ್ ಆಸ್ಪತ್ರೆ ಎದುರು ಪ್ರತಿಭಟನೆ

• **ಉದಯವಾಹಿನಿ, ಮಂಡ್ಯ**



ಶಸ್ತ್ರ ಚಿಕಿತ್ಸೆಗೆ ದಾಖಲಾಗಿದ್ದ ಬಾಲಕಿ ಸಾವಿಗೆ ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿ ಮಿಮ್ಸ್ ಆಸ್ಪತ್ರೆ ಎದುರು ವಿವಿಧ ಸಂಘಟನೆಗಳ ಕಾರ್ಯಕರ್ತರು ಭಾನುವಾರ ಪ್ರತಿಭಟನೆ ನಡೆಸಿದರು. ಸಿಐಟಿಯು, ಡಿಎಸ್‌ಎಸ್, ಪ್ರಾಂತ ಕೃಷಿ ಕೂಲಿಕಾರರ ಸಂಘ, ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ, ಪ್ರಾಂತ ರೈತ ಸಂಘ, ಸಿಪಿಐ(ಎಂ), ನಾವು ದ್ರಾವಿಡ ಕನ್ನಡಿಗ ಸಂಘ, ಕನ್ನಡ ಸೇನೆ ಸಂಘಟನೆ ಮುಖಂಡರು, ಕಾರ್ಯಕರ್ತರು ಬಾಲಕಿಯ ಕುಟುಂಬದವರೊಡನೆ ಮಿಮ್ಸ್ ವೈದ್ಯಕೀಯ ಅಧೀಕ್ಷಕರ ಕಚೇರಿ ಎದುರು ಜಮಾವಣೆಗೊಂಡು ವೈದ್ಯರು ಹಾಗೂ ಮಿಮ್ಸ್ ಸ್ಥಾನಿಕ ವೈದ್ಯಾಧಿಕಾರಿ ದರ್ಶನ್ ವಿರುದ್ಧವು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

**ಘಟನೆ ವಿವರ:** ಮಳವಳ್ಳಿ ತಾಲ್ಲೂಕಿನ ನೆಲ್ಲೂರು ಗ್ರಾಮದ ಬಾಲಕಿ ಸಾನ್ವಿ (7)ಗೆ ಟೈಲ್ಸ್ ಬಿದ್ದು ಸಾನ್ವಿಯ ಪಾದದ ಮೂಳೆ ಮುರಿದಿತ್ತು. ತಂದೆ ನಿಂಗರಾಜು ಮೇ 29ರಂದು ಮಿಮ್ಸ್ ಆಸ್ಪತ್ರೆಗೆ ಕರೆತಂದಿದ್ದರು. ಎಲ್ಲಾ ಪರೀಕ್ಷೆಯನ್ನು ನಡೆಸಿದ ವೈದ್ಯರು ಅಂದು ರಾತ್ರಿಯೇ ಸಾನ್ವಿಗೆ ಶಸ್ತ್ರಚಿಕಿತ್ಸೆ ಮಾಡಿ ನಂತರ ವಾರ್ಡ್‌ಗೆ ಸ್ಥಳಾಂತರಿಸಿದ್ದರು. ಮೇ 30ರಂದು ಬೆಳಿಗ್ಗೆ ಬಾಲಕಿಯ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಂಡಿದ್ದರಿಂದ ಆಕೆಯನ್ನು ತೀವ್ರ ನಿಗಾ ಘಟಕದಲ್ಲಿರಿಸಿ ಚಿಕಿತ್ಸೆ ಮುಂದುವರೆಸಲಾಗಿತ್ತು. ಮೇ 31ರಂದು ಬೆಳಿಗ್ಗೆ ಡ್ರಿಪ್ ಮೂಲಕ ಬಾಲಕಿಗೆ ಔಷಧ ನೀಡುತ್ತಿದ್ದಂತೆ ಬಾಲಕಿ ಸಾನ್ವಿ ಪ್ರಜ್ಞಾಹೀನ ಸ್ಥಿತಿ ತಲುಪಿದಳು. ರಾತ್ರಿ 10.30ರ ವೇಳೆಗೆ ಬಾಲಕಿಯ ಸಾವಿನ ಬಗ್ಗೆ ವೈದ್ಯರು ಪೋಷಕರಿಗೆ ಮಾಹಿತಿ ನೀಡಿದರು. ಮೆಡಿಕಲ್ ವಿದ್ಯಾರ್ಥಿಗಳಿಂದ ಚಿಕಿತ್ಸೆ ಕೊಡಿಸಿದ್ದೇ ಬಾಲಕಿ ಸಾವಿಗೆ ಕಾರಣ, ವೈದ್ಯರ ನಿರ್ಲಕ್ಷ್ಯದಿಂದ ಸಾನ್ವಿ ಸಾವನ್ನಪ್ಪಿದ್ದಾಳೆ. ಇವರಿಗೆ ತಕ್ಕ ಶಿಕ್ಷೆ ಆಗಬೇಕು. ನಮಗೆ ಮಾಹಿತಿ ನೀಡುವ ಮುನ್ನ ಪೊಲೀಸರಿಗೆ ಮಾಹಿತಿ ನೀಡಿ ಕರೆಸಿಕೊಂಡಿರುವುದನ್ನು ನೋಡಿದರೆ ವೈದ್ಯರು ತಮ್ಮ ತಪ್ಪನ್ನು ಮುಚ್ಚಿಹಾಕಿಕೊಳ್ಳುತ್ತಿದ್ದಾರೆ' ಎಂದು ಆರೋಪಿಸಿ ಪ್ರತಿಭಟನೆ ನಡೆಸಲಾಯಿತು.

**ಸ್ಥಳಕ್ಕೆ ಎಸ್ಪಿ ದೌಡು, ಎಫ್‌ಐಆರ್ ದಾಖಲು:** ವಿಷಯ ಗಂಭೀರತೆ ಪಡೆಯುತ್ತಿದ್ದಂತೆ ಎಚ್ಚೆತ್ತ ಪೊಲೀಸರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಮಾಹಿತಿ ನೀಡಿದರು. ಸ್ಥಳಕ್ಕೆ ದೌಡಾಯಿಸಿದ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಅವರು ಪ್ರತಿಭಟನಾಕಾರರ ಮನವೊಲಿಸಿದರು. ಬಾಲಕಿಯ ಶವವನ್ನು ಪರೀಕ್ಷೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕಳುಹಿಸಲಾಯಿತು. ವೈದ್ಯರ ವಿರುದ್ಧ ಎಫ್‌ಐಆರ್ ದಾಖಲಾದ ಬಳಿಕ ಪ್ರತಿಭಟನೆ ವಾಪಸ್ ಪಡೆಯಲಾಯಿತು.

ಸಿಐಟಿಯು ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ ಮಾತನಾಡಿ, ಮಿಮ್ಸ್‌ನ ಬಹುತೇಕ ವೈದ್ಯರು ಖಾಸಗಿ ಕ್ಲಿನಿಕ್ ಇಟ್ಟುಕೊಂಡು ಕೆಲಸ ಮಾಡುತ್ತಿರುವುದರಿಂದ ಮಿಮ್ಸ್‌ನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿಲ್ಲ. ಮಗುವ ಸಾವಿಗೆ ಮಿಮ್ಸ್ ವೈದ್ಯರ ನಿರ್ಲಕ್ಷ್ಯವೇ ಕಾರಣವಾಗಿದೆ. ಮಗು ಕುಟುಂಬಕ್ಕೆ ಪರಿಹಾರ ನೀಡಬೇಕು. ಜೊತೆಗೆ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿದರು.

# ವಿಶ್ವಮಾನವತೆಯೆಡೆಗೆ ಸಾಗಿದ ಕುವೆಂಪು: ನಿರ್ಮಲಾನಂದನಾಥ ಸ್ವಾಮೀಜಿ

• **ಉದಯವಾಹಿನಿ, ನಾಗಮಂಗಲ**



ಕುವೆಂಪು ಅವರು ಬಹಿರಂಗದ ವ್ಯವಹಾರಗಳಲ್ಲಿ, ಅರ್ಜಿ ನಮೂನೆಗಳ ಕಾಲಂನಲ್ಲಿ ಯಾವುದೇ ಅಳುಕು ಹಿಂಜರಿಕೆ ಇಲ್ಲದೇ ತಮ್ಮ ಜಾತಿಯನ್ನು ನಮೂದಿಸುತ್ತಿದ್ದರೂ ಅಂತರ್ಯದಲ್ಲಿ ಜಾತೀಯ ಮನಃಸ್ಥಿತಿಯಿಂದ ವಿಮೋಚನೆಗೊಂಡು ವಿಶ್ವಮಾನವತೆಯತ್ತ ಸಾಗಿದ್ದರು ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು. ತಾಲ್ಲೂಕಿನ ಬಿ.ಜಿ.ನಗರದ ಆದಿಚುಂಚನಗಿರಿ ವಿವಿಯಲ್ಲಿ ಕುವೆಂಪು ಭಾಷಾ ಭಾರತೀ ಪ್ರಾಧಿಕಾರದ ಸಹಯೋಗದೊಂದಿಗೆ ಈಚೆಗೆ ಆಯೋಜಿಸಿದ್ದ ಕುವೆಂಪು ಓದು ಕಮ್ಮಟದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕುವೆಂಪು ಅವರನ್ನು ಸಮಗ್ರವಾಗಿ ಅರ್ಥ ಮಾಡಿಕೊಳ್ಳದ ಹೊರತು ಅವರ ಸಾಹಿತ್ಯ ಪದೇ ಪದೇ ಅನರ್ಥ, ಅಪಾರ್ಥ, ವಿಪರೀತಾರ್ಥಗಳಾಗಿ ಅರ್ಥವಾಗುತ್ತದೆ. ಕುವೆಂಪು ಬಗ್ಗೆ ನಾವು ತಳೆದಿರುವ ಕಲ್ಪಿತಗಳನ್ನು, ಪೂರ್ವಾಗ್ರಹಗಳನ್ನು ಬದಿಗೆ ಸರಿಸಿ ಅವರ ಸಾಹಿತ್ಯದ ಹಿಂದಿರುವ ವೈಜ್ಞಾನಿಕ ಮನೋಧರ್ಮವನ್ನು, ಸಮಗ್ರ ದರ್ಶನವನ್ನು ಅರ್ಥ ಮಾಡಿಕೊಳ್ಳುವುದು ಇಂದಿನ ವಿಜ್ಞಾನ ಯುಗದ ಅಗತ್ಯವಾಗಿದೆ ಎಂದರು.

ಕುವೆಂಪು ಸಾಹಿತ್ಯದ ಕುರಿತು ಸಂಪನ್ಮೂಲ ವ್ಯಕ್ತಿಗಳು ಸಂವಾದ ನಡೆಸಿದರು. ಕುವೆಂಪು ಸಾಹಿತ್ಯದ ಕುರಿತು ಮಾಹಿತಿ ನೀಡಲಾಯಿತು.

**ಕುವೆಂಪು ಜಾತಿ, ಧರ್ಮ, ಕಂದಾಚಾರಗಳನ್ನು ತೀಕ್ಷವಾಗಿ ಟೀಕಿಸುತ್ತಿದ್ದರು. ಜೊತೆಗೆ ಆಧ್ಯಾತ್ಮಿಕ ಸತ್ವವಿಲ್ಲದ ಸಾಮಾಜಿಕ ಸುಧಾರಣೆಯ ಮಾತು, ಹೋರಾಟಗಳು ಅಂತಿಮವಾಗಿ ಗದ್ದಲವಾಗಿ ಪರಿಣಮಿಸುತ್ತದೆ ಎಂದು ಹೇಳುತ್ತಿದ್ದರು ಎಂದರು.**

# 1 ಸಾವಿರ ಕೋಟಿ ಅನುದಾನ ತಂದ ಶಾಸಕ ಕೆ.ಎಂ.ಉದಯ್

• **ಉದಯವಾಹಿನಿ, ಮದ್ದೂರು:**



ಶಾಸಕ ಕೆ.ಎಂ.ಉದಯ್ ಅವರು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ನಿರಂತರ ಹೋರಾಟ ಮಾಡಿ ಎರಡೇ ವರ್ಷಗಳಲ್ಲಿ 1000 ಕೋಟಿಗೂ ಅಧಿಕ ಅನುದಾನ ತಂದು ಅಭಿವೃದ್ಧಿಯ ಹರಿಕಾರ ಎಂದು ಪಾತ್ರರಾಗಿದ್ದಾರೆ ಎಂದು ಬ್ಲಾಕ್ ಕಾಂಗ್ರೆಸ್ ತಾಲ್ಲೂಕು ಅಧ್ಯಕ್ಷ ಚಲುವರಾಜು ತಿಳಿಸಿದರು. ಶಾಸಕ ಕೆ.ಎಂ. ಉದಯ್ ಅವರ ಜನ್ಮದಿನದ ಅಂಗವಾಗಿ ಪಟ್ಟಣದ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ವಿತರಿಸಿ ಅವರು ಮಾತನಾಡಿದರು.

ಮದ್ದೂರು ಪಟ್ಟಣವನ್ನು ನಗರಸಭೆಯನ್ನಾಗಿ ಮಾಡಲು ಸಚಿವ ಸಂಪುಟದಲ್ಲಿ ಒಪ್ಪಿಗೆ ಪಡೆದುಕೊಂಡಿದ್ದಾರೆ. 93 ಕೋಟಿ ವೆಚ್ಚದಲ್ಲಿ ಕೆಮ್ಮಣ್ಣು ನಾಲೆಯನ್ನು ಆಧುನಿಕರಣ ಮಾಡಲು ಭೂಮಿ ಪೂಜೆ ಮಾಡಿದ್ದಾರೆ. ಪಟ್ಟಣದ ಪೇಟೆ ಬೀದಿ ವಿಸ್ತರಣೆ ಸೇರಿದಂತೆ ಹತ್ತು ಹಲವು ಅಭಿವೃದ್ಧಿ ಕೆಲಸಗಳಿಗೆ ನಾಂದಿ ಹಾಡಿದ್ದಾರೆ. ತಾಲ್ಲೂಕಿನ ನೀರಾವರಿ ಯೋಜನೆಗಳಿಗೆ ವಿಶೇಷ ಅನುದಾನ ತಂದಿದ್ದಾರೆ.

ಜತೆಗ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ತಾಲ್ಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕೆ. ಎಂ.ಉದಯ್ ಚಾರಿಟಬಲ್ ಟ್ರಸ್ಟ್ ಮೂಲಕ ಹಲವು ಸಮಾಜಮುಖಿ ಕಾರ್ಯಕ್ರಮ ಹಮ್ಮಿಕೊಂಡು ನೊಂದವರಿಗೆ ಆಸರೆಯಾಗಿದ್ದಾರೆ. ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಟ್ರಸ್ಟ್ ವತಿಯಿಂದ ಸ್ವಂತ ಹಣದಲ್ಲಿ ಶುಲ್ಕ ಕಟ್ಟುವುದು, ಶಾಲಾ ಬ್ಯಾಗ್, ನೋಟ್ ಬುಕ್, ಜಾಮಿಟ್ರಿ ಬಾಕ್ಸ್‌ಗಳನ್ನು ಉಚಿತವಾಗಿ ನೀಡುವ ಮೂಲಕ ವಿದ್ಯಾರ್ಥಿಮಿತ್ರ ಎನಿಸಿದ್ದಾರೆ ಎಂದು ಪ್ರಶಂಸಿಸಿದರು.

# ಚರಂಡಿ ಸ್ವಚ್ಛತೆ, ದುರಸ್ತಿಗೆ ಗ್ರಾಮಸ್ಥರಿಂದ ಆಗ್ರಹ



• **ಉದಯವಾಹಿನಿ, ಬೆಳಕವಾಡಿ**

ಸಮೀಪದ ಬೊಪ್ಪೇಗೌಡನಪುರ ಗ್ರಾಮದ ದೊಡ್ಡಮ್ಮ ತಾಯಿ ದೇವಸ್ಥಾನದ ಆವರಣದ ಮೂಲಕ ಹಾದುಹೋಗಿರುವ ಚರಂಡಿಯಲ್ಲಿ ಹೂಳು ತುಂಬಿಕೊಂಡು ದುರ್ವಾಸನೆ ಬೀರುತ್ತಿದೆ. ಸ್ವಚ್ಛಗೊಳಿಸುವಂತೆ ಮನವಿ ಮಾಡಿದರೂ ಗ್ರಾಮ ಪಂಚಾಯಿತಿ ಗಮನ ಹರಿಸುತ್ತಿಲ್ಲ' ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಆರು ವರ್ಷಗಳಿಂದ ಗ್ರಾಮದ ಬೀದಿಗಳಿಂದ ಬರುವ ಕೊಳಚೆ ನೀರನ್ನು ಈ ಚರಂಡಿ ಮೂಲಕ ಚಿಕ್ಕ ಕೆರೆಗೆ ಬಿಡುತ್ತಿದ್ದು, ಚರಂಡಿಯಲ್ಲಿ ಹೂಳು ತುಂಬಿಕೊಂಡು ತ್ಯಾಜ್ಯ ಸಂಗ್ರಹದಿಂದ ಇಡೀ ಪ್ರದೇಶ ದುರ್ವಾಸನೆಯಿಂದ ಕೂಡಿದೆ.

ಚರಂಡಿ ಪಕ್ಕದಲ್ಲಿರುವ ತೊಂಬೆ ನಲ್ಲಿಗೆ ನೀರಿಗೆ ಬರುವ ಸಾರ್ವಜನಿಕರು, ಅಕ್ಕಪಕ್ಕದ ನಿವಾಸಿಗಳು, ದೇವಸ್ಥಾನಕ್ಕೆ ಬರುವ ಭಕ್ತರು ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಬೊಪ್ಪಗೌಡನಪುರ (ಬಿಜಿಪುರ) ಗ್ರಾಮವು ಹೋಬಳಿ ಕೇಂದ್ರವಾಗಿದೆ. ಆದರೂ ಗ್ರಾಮ ಪಂಚಾಯಿತಿ ಬಳಿಯಿರುವ ಚರಂಡಿ ಕೊಳಚೆ ಪ್ಲಾಸ್ಟಿಕ್ ತ್ಯಾಜ್ಯಗಳಿಂದ ಹೂಳು ತುಂಬಿಕೊಂಡಿರುವುದು ಕಂಡು ಬಂದರು ಕಾಣದಂತೆ ಇರುವ ಗ್ರಾ.ಪಂ.ಪಿಡಿಒ ಆಡಳಿತದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ.

**ಹಾಗಾಗಿ ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿಗಳು ಇತ್ತ ಗಮನ ಹರಿಸಿ ಚರಂಡಿ ಅಭಿವೃದ್ಧಿ ಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು**

**-ರಾಜಣ್ಣ, ಪ್ರಭುಸ್ವಾಮಿ, ಗ್ರಾಮದ ನಿವಾಸಿಗಳು**

# ಮಳೆಯಿಂದಾಗುವ ವಿಪತ್ತು ಎದುರಿಸಲು ಮೈಸೂರು ಪಾಲಿಕೆ ಸಜ್ಜು

## ದಿನವಿಡೀ ಕಾರ್ಯನಿರ್ವಹಿಸಲು ಕಂಟ್ರೋಲ್ ರೂಂ ಸ್ಥಾಪನೆ

• **ಉದಯವಾಹಿನಿ, ಮೈಸೂರು**

ನಗರದಲ್ಲಿ ಮಳೆಗಾಲದಲ್ಲಿ ಎದುರಾಗುವ ವಿಪತ್ತುಗಳನ್ನು ಎದುರಿಸಲು ಮೈಸೂರು ಮಹಾನಗರ ಪಾಲಿಕೆ ಸಿದ್ಧವಾಗಿದೆ. ಈಗಾಗಲೇ ಕಳೆದ ಒಂದು ವಾರದಿಂದ ಸುರಿದ ಮಳೆಯಿಂದಾಗಿ ನಗರದ ಜನತೆ ಸಾಕಷ್ಟು ಸಮಸ್ಯೆ ಎದುರಿಸಿದ ಬೆನ್ನಲ್ಲೇ ಪಾಲಿಕೆ ಹಲವು ಕ್ರಮಗಳನ್ನು ಕೈಗೊಂಡಿದೆ. ಮಳೆಯಿಂದ ಮೈಸೂರಿನ ಎಲ್ಲಾ ವಲಯ ಕಚೇರಿಗಳ ವ್ಯಾಪ್ತಿಯಲ್ಲಿ ಉಂಟಾಗುವ ತೊಂದರೆ ನಿವಾರಿಸಲು ಕ್ರಮ ಕೈಗೊಳ್ಳಲಾಗಿದ್ದು, ಜತೆಗೆ ರಾಜಕಾಲುವೆಗಳಲ್ಲಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಕ್ರಮ ಕೈಗೊಳ್ಳಲಾಗಿದೆ, ಎಂದು ಪಾಲಿಕೆ ಆಯುಕ್ತ ಶೇಖ್‌ತನ್ವೀರ್ ಆಸೀಫ್ ಮಾಹಿತಿ ನೀಡಿದರು.

**ಕಂಟ್ರೋಲ್ ರೂಂ ಆರಂಭ:** ಒಂದು ತಿಂಗಳು ಮುಂಚಿತವಾಗಿ ಮಳೆ ಪ್ರಾರಂಭವಾಗಿರುವುದರಿಂದ ಕೆಲವೆಡೆ ಸಮಸ್ಯೆ ಉದ್ಭವಿಸಿದೆ. ಈಗಾಗಲೇ ಮಳೆಗಾಲ ಆರಂಭವಾಗಿರುವುದರಿಂದ ಮುನ್ನೆಚ್ಚರಿಕೆ ವಹಿಸಲಾಗಿದೆ. ಮಹಾನಗರ ಪಾಲಿಕೆಯ ಕಂಟ್ರೋಲ್ ರೂಂ ದಿನವಿಡೀ ಕಾರ್ಯ ನಿರ್ವಹಿಸುತ್ತಿದೆ ಎಂದರು.

**ರೆಂಬೆ ತೆರವು:** ಜೂನ್ ತಿಂಗಳಲ್ಲಿ ಮರಗಳು ಬೀಳುತ್ತಿದ್ದವು. ಆದರೆ ಈ ಬಾರಿ ಮೇ ತಿಂಗಳಲ್ಲೇ ಬಹಳಷ್ಟು ಮರಗಳು ಬಿದ್ದಿವೆ. ರಸ್ತೆ ಬದಿಯಲ್ಲಿ ಒಣಗಿರುವ ಮರದ ರೆಂಬೆಗಳನ್ನು ತೆರವುಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ. ಎಂದರು.

**ಯುಜಿಡಿ ಸಮಸ್ಯೆ:** ಯುಜಿಡಿ ಸಮಸ್ಯೆ ಕಂಡುಬಂದ ಸ್ಥಳಗಳಿಗೆ ಪಾಲಿಕೆ ಅಧಿಕಾರಿಗಳ ತಂಡವನ್ನು ಕಳುಹಿಸಿ ಯುಜಿಡಿ ಸಮಸ್ಯೆ ಸರಿಪಡಿಸುತ್ತಿದ್ದೇವೆ. ಕೆಲವು ಕಡೆಗಳಲ್ಲಿ ಶಾಶ್ವತ ಕಾಮಗಾರಿಯನ್ನು ಮಾಡಲಾಗುತ್ತಿದ್ದು, ಸಮಸ್ಯೆಗಳು ಹೆಚ್ಚಾದಾಗ ರಾತ್ರಿ ಪಾಳಿಯಲ್ಲೂ ಕೆಲಸ ನಿರ್ವಹಣೆಗೆ ತಂಡವನ್ನು ರಚನೆ ಮಾಡಿದ್ದೇವೆ.

ಈಗಾಗಲೇ ರಾಜಕಾಲುವೆಗಳಲ್ಲಿ ಹೂಳು ತೆಗೆಯುವ ಕಾರ್ಯ ಕಳೆದ ಮೂರು ತಿಂಗಳಿಂದ ನಡೆಯುತ್ತಿದೆ, ಎಂದು ಶೇಖ್ ತನ್ವೀರ್ ಆಸೀಫ್ ಹೇಳಿದರು. ನಗರದ ಹಲವೆಡೆ ನಡೆಯುತ್ತಿರುವ ಒಳಚರಂಡಿ ಕಾಮಗಾರಿಗಳಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಪಾಲಿಕೆ ಸಹಜವಾಗಿ ಮೇ ತಿಂಗಳಿನಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸುತ್ತದೆ. ಮಳೆಗಾಲದ ಸಮಸ್ಯೆಗಳನ್ನು ಅರಿತು ಮುಂಚಿತವಾಗಿಯೇ ಕಾಮಗಾರಿಗಳನ್ನು ಮಾಡುತ್ತೇವೆ.

ಈ ಬಾರಿ ಪೂರ್ವ ಮುಂಗಾರು ಮಳೆ ಹೆಚ್ಚಿನ ಪ್ರಮಾಣದಲ್ಲಿ ಸುರಿದಿದೆ. ಪರಿಣಾಮ ಕಾಮಗಾರಿಗಳು ನಡೆಯುವ ಕೆಲವು ಸ್ಥಳಗಳಲ್ಲಿ ಸಮಸ್ಯೆ ಎದುರಾಗಿವೆ. ಮಳೆಗಾಲದಲ್ಲಿ ನೀರಿನ ರಭಸಕ್ಕೆ ಕೆಲವೆಡೆ ಯುಜಿಡಿ ತೆರೆದುಕೊಳ್ಳುತ್ತದೆ. ಆದಾಯಸ್ಥಳಗಳ ಜನಸಂಖ್ಯೆಗೆ ಅನುಗುಣವಾಗಿ ಅಗತ್ಯಕ್ಕೆ ತಕ್ಕಂತೆ ಅಳವಡಿಸಿರುತ್ತೇವೆ, ಎಂದರು.

**ಕಸಕ್ಕೆ ಪರಿಹಾರ:** ಕಸದ ಸಮಸ್ಯೆ ಎದುರಿಸಲು ಪಾಲಿಕೆ ತಂಡ ಸಜ್ಜಾಗಿದ್ದು, ಕಸ ಕಂಡಲ್ಲಿ ಒಂದೇ ಒಂದು ಫೋಟೊ ಕಳುಹಿಸಿ ಅಥವಾ ಕಾಲ್ ಮಾಡಿ ಮಾಹಿತಿ ನೀಡಿದರೆ, ಕೇವಲ ಗಂಟೆಯಲ್ಲೇ ಸಮಸ್ಯೆ ಬಗೆಹರಿಸುತ್ತೇವೆ. ಎಲ್ಲೆಂದರಲ್ಲಿ ಕಸ ಬಿಸಾಡುವವರಿಗೆ ದಂಡ ಹಾಕುತ್ತಿದ್ದೇವೆ. ಕೆಲವು ಗಂಭೀರ ಪ್ರಕರಣವಿದ್ದರೆ ಎಫ್‌ಐಆರ್ ಕೂಡ ದಾಖಲಿಸುತ್ತೇವೆ, ಎಂದು ತಿಳಿಸಿದರು.

ನಗರದಲ್ಲಿ ಮಳೆಯಿಂದ ಆಗುತ್ತಿರುವ ಅನಾಹುತದ ಬಗ್ಗೆ ಕಳೆದ ಒಂದು ವಾರದಿಂದ ಮುಂಗಾರು ಮುಂಜಾಗ್ರತೆ ಸರಣಿ ವರದಿ ಪ್ರಕಟವಾಗಿತ್ತು. ನಗರದ ನಾಲ್ಕು ವಿಧಾನಸಭಾ ಕ್ಷೇತ್ರ, ವ್ಯಾಪ್ತಿಯ ರಸ್ತೆ, ಯುಜಿಡಿ, ಮಳೆಗಾಲುವೆಗಳ ಬಗ್ಗೆ ವರದಿ ಮಾಡಿ ಗಮನ ಸೆಳೆದಿತ್ತು. ಈ ಹಿನ್ನೆಲೆಯಲ್ಲಿ ಪಾಲಿಕೆ ಅಧಿಕಾರಿಗಳು ಸುಧಾರಣಾ ಕ್ರಮ ವಹಿಸಿದ್ದಾರೆ.



**ಏನೆಲ್ಲ ಭರಪೂರ ಸಿದ್ಧತೆ ಮಾಡಿ ಕೊಂಡಿದೆ?**

### ಸಾಂಕ್ರಾಮಿಕ ರೋಗ ತಡೆಗೆ ಮುಂಜಾಗ್ರತೆ

**ಮಳೆಯ ನೀರಿನಿಂದ ಸೊಳ್ಳೆಗಳು ಹೆಚ್ಚಾಗುವ ಸಾಧ್ಯತೆ ಇದೆ. ಜೂನ್ ತಿಂಗಳಲ್ಲಿ ಮಾರಣಾಂತಿಕ ಕಾಯಿಲೆಗಳು ಕಂಡು ಬರುವ ಸಾಧ್ಯತೆಗಳಿವೆ. ಈ ಹಿನ್ನೆಲೆ ನಾಗರಿಕರು ಸೊಳ್ಳೆ ಬಾರದಂತೆ ಎಚ್ಚರಿಕೆ ವಹಿಸಿ, ಸ್ವಚ್ಛತೆ ಕಾಪಾಡಿಕೊಳ್ಳಬೇಕು, ರಾತ್ರಿ ವೇಳೆ ಬೀದಿ ಬದಿ ವ್ಯಾಪಾರಸ್ಥರು ಹೆಚ್ಚಾಗಿ ಕಸ ಹಾಕುತ್ತಿದ್ದಾರೆ. ಬಿಸಾಡಿದ ಕಸ ಮಳೆ ನೀರಿನೊಂದಿಗೆ ಚರಂಡಿಗೆ ಸೇರಿಕೊಳ್ಳುತ್ತದೆ. ಇದರಿಂದ ಮಳೆಗಾಲದಲ್ಲಿ ಚರಂಡಿ ನೀರು ಸರಾಗವಾಗಿ ಸಾಗಲು ಸಾಧ್ಯವಾಗುವುದಿಲ್ಲ. ನಮ್ಮೊಂದಿಗೆ ಮೈಸೂರು ನಗರದ ಜನರು ಸಹಕರಿಸಬೇಕು**

**-ಡಾ.ಎನ್.ಪಿ.ವೆಂಕಟೇಶ್**
**ಪಾಲಿಕೆ ಆರೋಗ್ಯಾಧಿಕಾರಿ**

# ಮಿನಿ ನ್ಯೂಸ್

## ನಕಲಿ ಹಾಲು ತಯಾರಿಕಾ ಅಡ್ಡೆಯ ಮೇಲೆ ಪೊಲೀಸರು ದಾಳಿ

• **ಉದಯವಾಹಿನಿ, ಮುಳಬಾಗಿಲು**

ಅಕ್ರಮವಾಗಿ ನೀರಿನಲ್ಲಿ ಹಾಲು ಪುಡಿ ಮಿಶ್ರಣ ಮಾಡಿ ನಕಲಿ ಹಾಲು ತಯಾರಿಸಿ ತಿರುಮಲ ಡೇರಿಗೆ ಸರಬರಾಜು ಮಾಡುತ್ತಿದ್ದ ಅಡ್ಡೆ ಮೇಲೆ ಡಿವೈಎಸ್ಪಿ ಡಿ.ಸಿ.ನಂದಕುಮಾರ್ ನೇತೃತ್ವದಲ್ಲಿ ಪೊಲೀಸರು ದಾಳಿ ಮಾಡಿ ಅಕ್ರಮಕ್ಕೆ ಬಳಕೆ ಮಾಡುತ್ತಿದ್ದ ವಸ್ತು, ಅಕ್ರಮದಲ್ಲಿ ಭಾಗಿಯಾಗಿದ್ದ ವ್ಯಕ್ತಿಯನ್ನು ಬಂಧಿಸಿರುವ ಘಟನೆ ನಡೆದಿದೆ. ಮುಳಬಾಗಿಲು ತಾಲ್ಲೂಕಿನ ಸವಟೂರು ಗ್ರಾಮದ ನರೇಶ್ ರೆಡ್ಡಿ ಎಂಬುವವರು ನಕಲಿ ಹಾಲು ತಯಾರು ಮಾಡಿ ಆಂಧ್ರಪ್ರದೇಶದ ಡೇರಿಗೆ ಸರಬರಾಜು ಮಾಡುತ್ತಿದ್ದ. ಬಂಧಿತ ನರೇಶ್ ರೆಡ್ಡಿ ತಮ್ಮ ಮನೆ ಮುಂದಿನ ದೊಡ್ಡ ಶೆಡ್‌ನಲ್ಲಿ ಹಾಲು ಸಂಗ್ರಹಿಸಿ ಅಲ್ಲಿಂದ ತಿರುಮಲ ಮುಖ್ಯ ಡೇರಿಗೆ ಸಾಗಾಟ ಮಾಡುತ್ತಿದ್ದ ಎಂದು ಆಹಾರ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಒಂದು ಕ್ಯಾನ್‌ಗೆ 40 ಲೀಟರ್‌ನಂತೆ ಪ್ರತಿನಿತ್ಯ 150-160 ಲೀಟರ್ ನಕಲಿ ಹಾಲು 6 ತಿಂಗಳಿಂದ ತಯಾರು ಮಾಡುತ್ತಿದ್ದ ಎನ್ನಲಾಗಿದೆ. ಬಂಧಿತನಿಂದ 25 ಕೆಜಿ ತೂಕದ 4 ನಕಲಿ ಹಾಲಿನ ಚೀಲ, 40 ಲೀಟರ್ ತೂಕದ ನಾಲ್ಕು ಕ್ಯಾನ್,ವಾಹನ ವಶಕ್ಕೆ ಪಡೆಯಲಾಗಿದೆ. ನಂತರ ಜಿಲ್ಲಾ ಆಹಾರ ಇಲಾಖೆ ಆಹಾರ ಸುರಕ್ಷತಾ ಅಧಿಕಾರಿ ಪ್ರತೀಶ್ ಮಾತನಾಡಿ, ನಕಲಿ ಹಾಲು ಸೇವನೆಯಿಂದ ಯಾರಿಗಾದರೂ ತೊಂದರೆ ಆಗಿದ್ದರೆ ಕಂಡು ಹಿಡಿಯಲಾಗುವುದು ಎಂದರು. ಡಿವೈಎಸ್‌ಪಿ ಡಿ.ಸಿ. ನಂದಕುಮಾರ್, ನಕಲಿ ಹಾಲು ತಯಾರಿಕೆಯಲ್ಲಿ ಭಾಗಿಯಾಗಿದ್ದ ವ್ಯಕ್ತಿ ಹಾಗೂ ಸಲಕರಣೆಗಳನ್ನು ವಶಕ್ಕೆ ಪಡೆಯಲಾಗಿದೆ. ಹಾಲನ್ನು ರಾಜ್ಯ ಆಹಾರ ಪರೀಕ್ಷೆಗೆ ಅಧಿಕಾರಿಗಳು ಕಳುಹಿಸಿದ್ದು, ವರದಿ ಬಂದ ನಂತರ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು.

## ನಾಲ್ವರು ಅಂತರರಾಜ್ಯ ಕಳ್ಳರ ಬಂಧನ

• **ಉದಯವಾಹಿನಿ, ಬಂಗಾರಪೇಟೆ**

ತಾಲ್ಲೂಕಿನ ಕಾಮಸಮುದ್ರ ಪೊಲೀಸರು ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ್ದ ಕಳವು ಪ್ರಕರಣಗಳಲ್ಲಿ ನಾಲ್ವರು ಅಂತರರಾಜ್ಯ ಕಳ್ಳರನ್ನು ಬಂಧಿಸಲಾಗಿದೆ. ತಾಲ್ಲೂಕಿನ ಕಾಮಸಮುದ್ರ ವ್ಯಾಪ್ತಿ ದೊಡ್ಡ ಪನ್ನಾಂಡಹಳ್ಳಿಯಲ್ಲಿ ನಡೆದಿದ್ದ ಎರಡು ಸೀಮೆ ಹಸು ಮತ್ತು ನಾಲ್ಕು ಕುರಿ ಕಳವು ಪಕರಣವನ್ನು ಡಿವೈಎಸ್‌ಪಿ ಎಸ್.ಪಾಂಡುರಂಗ ಮತ್ತು ಕಾಮಸಮುದ್ರ ಸಿಪಿಐ ಜಿ.ಸಿ.ನಾರಾಯಣಸ್ವಾಮಿ ಮಾರ್ಗದರ್ಶನದಲ್ಲಿ ಪಿಎಸ್‌ಐ ಕಿರಣ್‌ಕುಮಾರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿತ್ತು.

ಆಂದ್ರಪ್ರದೇಶ ಚಿತ್ತೂರು ಜಿಲ್ಲೆಯ ಸುರೇಶ್ (34), ತಮಿಳುನಾಡು ಕೃಷ್ಣಗಿರಿ ಜಿಲ್ಲೆಯ ಸತೀಶ್ (34), ರೂಪೇಶ್ (28), ವೆಂಕಟರಮಣಪ್ಪ (34) ಎಂಬುವವರನ್ನು ಕಳವು ಪ್ರಕರಣದಲ್ಲಿ ಬಂಧಿಸಲಾಗಿದೆ. ಬಂಧಿತರಿಂದ ಮೂರು ಸೀಮೆ ಹಸು, ನಾಲ್ಕು ಕುರಿ, 23 ಹಂದಿ, ಕೃತ್ಯಕ್ಕೆ ಬಳಸಿದ್ದ ವಾಹನ ವಶಪಡಿಸಿಕೊಳ್ಳಲಾಗಿದೆ.

## ಬಕ್ರೀದ್ ಆಚರಣೆ ವೇಳೆ ಶಾಂತಿ, ಸೌಹಾರ್ದತೆ ಕಾಪಾಡಲು ಸಲಹೆ

• **ಉದಯವಾಹಿನಿ, ಯಳಂದೂರು**

ಬಕ್ರೀದ್ ಆಚರಣೆ ಅಂಗವಾಗಿ ಪಟ್ಟಣ ಪೊಲೀಸ್ ಠಾಣೆಯಲ್ಲಿ ಭಾನುವಾರ ಮುಸ್ಲಿಂ ಮುಖಂಡರೊಂದಿಗೆ ಸರ್ಕಲ್ ಇನ್‌ಸ್ಪೆಕ್ಟರ್ ಆರ್.ಶ್ರೀಕಾಂತ್ ಅಧ್ಯಕ್ಷತೆಯಲ್ಲಿ ಶಾಂತಿ ಸಭೆ ನಡೆಯಿತು. ಶ್ರೀಕಾಂತ್ ಮಾತನಾಡಿ, ಇದೇ 7ರಂದು ಪಟ್ಟಣ, ತಾಲ್ಲೂಕಿನ ಗ್ರಾಮಗಳಲ್ಲಿ ನಡೆಯಲಿರುವ ಬಕ್ರೀದ್ ಆಚರಣೆ ನಡೆಯಲಿದ್ದು, ಮುಸ್ಲಿಂ ಮುಖಂಡರು ಶಾಂತಿ, ಸೌಹಾರ್ದತೆ ಕಾಪಾಡಬೇಕು.

ಯಾವುದೇರೀತಿಯ ಕಾನೂನು ಬಾಹಿರ ಚಟುವಟಿಕೆಗಳು ಕಂಡು ಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದರು. ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಹಿಂದಿನಿಂದಲೂ ಸೌಹಾರ್ದತೆಯಿಂದ ಹಬ್ಬ ಆಚರಿಸಿಕೊಂಡು ಬರಲಾಗಿದೆ. ಮುಂದಿನ ದಿನಗಳಲ್ಲೂ ಇದೇ ಸಂಸ್ಕೃತಿ ಮುಂದುವರಿಸಿಕೊಂಡು ಹೋಗಬೇಕು. ಸಾಮೂಹಿಕ ಪ್ರಾರ್ಥನೆಗೆ ತೆರಳುವಾಗ ಸಾರ್ವಜನಿಕರಿಗೆ ತೊಂದರೆಯಾಗದಂತೆ, ವಾಹನಗಳ ಸಂಚಾರಕ್ಕೆ ಅಡ್ಡಿಯಾಗದಂತೆ ಸಮುದಾಯದ ಮುಖಂಡರು ನಿರ್ವಹಣೆ ಮಾಡಬೇಕು. ಹೆಚ್ಚಿನ ಗದ್ದಲ ಗಲಾಟೆಯಾಗದಂತೆ ನಿಗಾ ವಹಿಸಬೇಕು ಎಂದರು.

## ಸಾರ್ವಜನಿಕರಿಗೆ ಕಾನೂನು ಅರಿವು ಮುಖ್ಯ : ಎಎಸ್‌ಐ ಗಿರೀಶ್

• **ಉದಯವಾಹಿನಿ, ಸಂತೇಮರಹಳ್ಳಿ**

ಇಲ್ಲಿನ ಬಸ್ ನಿಲ್ದಾಣದಲ್ಲಿ ಪೊಲೀಸ್ ಠಾಣೆ ವತಿಯಿಂದ ಸಾರ್ವಜನಿಕರಿಗೆ ಕಾನೂನು ಅರಿವು, ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮ ನಡೆಯಿತು. ಎಎಸ್‌ಐ ಗಿರೀಶ್ ಮಾತನಾಡಿ, ಸಾರ್ವಜನಿಕರಲ್ಲಿ ಕಾನೂನಿನ ಅರಿವು ಕೊರತೆ ಇರುವ ಕಾರಣ ಅಪರಾಧಗಳ ಪ್ರಮಾಣ ಹೆಚ್ಚಾಗುತ್ತಿದೆ. ಈ ದಿಸೆಯಲ್ಲಿ ಪ್ರತಿಯೊಬ್ಬರಿಗೂ ಕಾನೂನಿನ ತಿಳಿವಳಿಕೆ ಅಗತ್ಯವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಅಪರಾಧಗಳ ಪ್ರಮಾಣ ಹೆಚ್ಚಾಗುತ್ತಿದ್ದು, ಇದನ್ನು ತಡೆಯಲು ಪೊಲೀಸ್ ಇಲಾಖೆ ಸಾಕಷ್ಟು ಜಾಗೃತಿ ಮೂಡಿಸುತ್ತಿದೆ.

ಈಗಾಗಲೇ ಗ್ರಾಮೀಣ ಪ್ರದೇಶಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಇದರಿಂದ ಸ್ವಲ್ಪ ಮಟ್ಟಿನ ಅರಿವು ಉಂಟಾಗಿದೆ ಎಂದು ಹೇಳಿದರು. ಸಾರ್ವಜನಿಕರು ಪೊಲೀಸ್ ಇಲಾಖೆಗೆ ಸಹಕರಿಸುವ ಮೂಲಕ ಅಪರಾಧ ಪ್ರಕರಣಗಳನ್ನು ಕಡಿಮೆ ಮಾಡಬೇಕಾಗಿದೆ ಎಂದರು.

## ಭೂ ಕುಸಿತ ಸ್ಥಳಕ್ಕೆ ಶಾಸಕ ಮಂತರ್ ಗೌಡ ಭೇಟಿ

• **ಉದಯವಾಹಿನಿ, ಸೋಮವಾರಪೇಟೆ**

ತಾಲ್ಲೂಕಿನ ತೋಳುರುಶೆಟ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂತಿ ಗ್ರಾಮದಲ್ಲಿ ರಾತ್ರಿ ಭೂ ಕುಸಿತವಾದ ಸ್ಥಳಕ್ಕೆ ಶಾಸಕ ಡಾ.ಮಂತರ್ ಗೌಡ ಭೇಟಿ ನೀಡಿ ಮಾಹಿತಿ ಪಡೆದರು. ಭೂಕುಸಿತ ಸಂಭವಿಸಿರುವ ಜಾಗದಲ್ಲಿ ತಡೆಗೋಡೆಯನ್ನು ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಲೋಕೋಪಯೋಗಿ ಇಲಾಖೆಯ ಎಂಜಿನಿಯರ್ ಅರ್ಬಾಝ್ ಅವರಿಗೆ ಸೂಚಿಸಿದರು.

ಭೂ ಕುಸಿತದಿಂದ ಕಾಫಿ ತೋಟಕ್ಕೆ ಹಾನಿಯಾಗಿದ್ದು, ತೋಟದ ಮಾಲೀಕರಿಗೆ ಸೂಕ್ತ ಪರಿಹಾರ ನೀಡುವಂತೆ ತಹಶೀಲ್ದಾರ್ ಕೃಷ್ಣಮೂರ್ತಿ ಅವರಿಗೆ ತಾಕೀತು ಮಾಡಿದರು. ಗ್ರಾಮದ ದೇವಾಲಯಕ್ಕೆ ಹೋಗುವ ರಸ್ತೆ ಅಭಿವೃದ್ಧಿಗೆ ಅನುದಾನ ಕಲ್ಪಿಸುವಂತೆ ಕೂತಿ ಗ್ರಾಮದ ಅಧ್ಯಕ್ಷ ಎಚ್.ಎಂ.ಜಯರಾಮ್ ಮನವಿ ಮಾಡಿದರು. ಈ ಬಗ್ಗೆ ಶಾಸಕರು ಸೂಕ್ತ ಅನುದಾನ ಕಲ್ಪಿಸುವ ಭರವಸೆ ನೀಡಿದರು.

## ಅಂತರಾಳದಿಂದ.. EDITORIAL

# ಕೇಂದ್ರ-ರಾಜ್ಯಗಳ ಸಂಬಂಧ ಅಪನಂಬಿಕೆ ನಿವಾರಿಸಿ ವಿಶ್ವಾಸ ಮೂಡಿಸಬೇಕಿದೆ



ಕೇಂದ್ರ ಮತ್ತು ರಾಜ್ಯಗಳ ನಡುವಣ ಸಂಬಂಧವು ಸುದೀರ್ಘ ಕಾಲದಿಂದ ಹದಗೆಟ್ಟಿರುವ ಈ ಸಂದರ್ಭದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಂದು ತಂಡವಾಗಿ ಕೆಲಸ ಮಾಡಬೇಕು' ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿರುವುದು ಸ್ವಾಗತಾರ್ಹ. ಬಿಜೆಪಿಯ ಪ್ರತಿಸ್ಪರ್ಧಿ ಪಕ್ಷಗಳ ನೇತೃತ್ವದ ಸರ್ಕಾರ ಇರುವ ರಾಜ್ಯಗಳ ಜೊತೆಗೆ ಈ ಬಿಕ್ಕಟ್ಟು ಎದ್ದು ಕಾಣುವಂತಿದೆ. ಇಂತಹ ಸಂದರ್ಭದಲ್ಲಿ, ನೀತಿ ಆಯೋಗದ ಆಡಳಿತ ಮಂಡಳಿಯ 10ನೇ ಸಭೆಯಲ್ಲಿ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಪ್ರಧಾನಿಯವರು ಆಡಿದ ಮಾತು ಸಮಂಜಸವಾಗಿದೆ. ಕರ್ನಾಟಕ, ಪಶ್ಚಿಮ ಬಂಗಾಳ ಮತ್ತು ಕೇರಳದ ಮುಖ್ಯಮಂತ್ರಿಗಳು ಈ ಸಭೆಗೆ ಹಾಜರಾಗಿಲ್ಲ ಎನ್ನುವುದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಣ ವಿಷಮ ಸಂಬಂಧವನ್ನು ಸೂಚಿಸುತ್ತದೆ. ಭಾರತದ ಅಭಿವೃದ್ಧಿಗೆ ವೇಗ ತುಂಬಲು ಕೇಂದ್ರ ಮತ್ತು ರಾಜ್ಯಗಳು ಜೊತೆಯಾಗಿ ಪ್ರಯತ್ನಿಸಬೇಕು ಎಂದು ಪ್ರಧಾನಿ ಹೇಳಿದ್ದಾರೆ. 2047ರಲ್ಲಿ ಭಾರತವು ನೂರನೇ ಸ್ವಾತಂತ್ರ್ಯ ದಿನ ಆಚರಿಸುವ ಸಂದರ್ಭಕ್ಕೆ 'ವಿಕಸಿತ ಭಾರತ'ದ ಗುರಿಯನ್ನು ದೇಶವು ಹಾಕಿಕೊಂಡಿದೆ. ಈ ಗುರಿ ಸಾಧನೆಗೆ ಕೇಂದ್ರ ಮತ್ತು ರಾಜ್ಯಗಳ ಕೊಡುಗೆ ಬೇಕೇ ಬೇಕು.

**ರಾಜ್ಯಗಳು ಪರಸ್ಪರ ಮತ್ತು ಕೇಂದ್ರದ ಜೊತೆ ಮುಖಾಮುಖಿ ಆಗಬಹುದಾದ ವೇದಿಕೆಗಳ ಸಂಖ್ಯೆ ಹೆಚ್ಚಿಲ್ಲ. ಅಂತಹ ಅವಕಾಶಗಳನ್ನು ಸೃಷ್ಟಿಸಿಕೊಳ್ಳಬೇಕಾದ ಅಗತ್ಯ ಇದೆ. ಅಭಿವೃದ್ಧಿಗಾಗಿ ರಾಜ್ಯಗಳು ಮತ್ತು ಕೇಂದ್ರ ಒಂದು ತಂಡವಾಗಿ ಕೆಲಸ ಮಾಡಬೇಕು ಎಂದು ಹೇಳುವಾಗ ಪ್ರಧಾನಿಯವರು ರಾಜ್ಯಗಳು ಎತ್ತಿರುವ ಕಳವಳಗಳ ನಿವಾರಣೆಗೂ ಪೂರಕವಾಗಿ ಸ್ಪಂದಿಸಬೇಕಾಗುತ್ತದೆ.**

ದೇಶದ ಅಭಿವೃದ್ಧಿ ಎಂದರೆ ರಾಜ್ಯಗಳ ಅಭಿವೃದ್ಧಿ ಎಂಬ ಮೌಲಿಕ ವಿಚಾರವನ್ನು ಪ್ರಧಾನಿಯವರು ಹೇಳಿದ್ದಾರೆ. ಕೇಂದ್ರದ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ರಾಜ್ಯಗಳು ಕೇಂದ್ರ ಸರ್ಕಾರದ ಜೊತೆಗೆ ಬಲವಾದ ನಂಟನ್ನು ಹೊಂದಿರಬೇಕು. ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಅನುಪಸ್ಥಿತಿ ಹಾಗೂ ಉಪಸ್ಥಿತರಿದ್ದ ಮುಖ್ಯಮಂತ್ರಿಗಳು ಮುಂದಿಟ್ಟ ಬೇಡಿಕೆಗಳಿಂದ ಕೇಂದ್ರ ಮತ್ತು ರಾಜ್ಯಗಳ ನಡುವಣ ನಂಟು ವಿಷಮ ಸ್ಥಿತಿಗೆ ತಲುಪಿದೆ ಎಂಬ ಅಂಶವು ಪ್ರಧಾನಿಯವರಿಗೆ ಮನದಟ್ಟಾಗಿರಬಹುದು. ಹಾಗಾಗಿಯೇ ಒಂದು ತಂಡವಾಗಿ ಇನ್ನೂ ಹೆಚ್ಚಿನ ಸಹಕಾರದಿಂದ ಕೆಲಸ ಮಾಡಬೇಕಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ತೆರಿಗೆ ವರಮಾನದಲ್ಲಿ ಹೆಚ್ಚಿನ ಪಾಲು ಬೇಕು ಎಂದು ತಮಿಳುನಾಡು ಮತ್ತು ಜಾರ್ಖಂಡ್‌ನ ಮುಖ್ಯಮಂತ್ರಿಗಳು ಆಗ್ರಹಿಸಿದ್ದಾರೆ. ರಾಜ್ಯಗಳು ಮತ್ತು ಕೇಂದ್ರದ ನಡುವೆ ಹಣಕಾಸಿನ ಹಂಚಿಕೆಯ ಕುರಿತಾದ ಕಳವಳಗಳನ್ನು ಅವರು ಪುನರುಚ್ಚರಿಸಿದ್ದಾರೆ. ಕೇಂದ್ರದಿಂದ ಹಣಕಾಸಿನ ಹಂಚಿಕೆಯು ಅಭಿವೃದ್ಧಿಯ ಗುರಿ ಸಾಧನೆಗೆ ಅತ್ಯಂತ ನಿರ್ಣಾಯಕವಾದುದು. ಕೇಂದ್ರ, ರಾಜ್ಯಗಳ ನಡುವೆ ಇರಬೇಕಾದ ಒಕ್ಕೂಟ ವ್ಯವಸ್ಥೆಯ ಸಂಬಂಧವು ಇತ್ತೀಚಿನ ಕೆಲವು ವರ್ಷಗಳಲ್ಲಿ ತೀರಾ ವಿಷಮ ಸ್ಥಿತಿಗೆ ತಲುಪಿದೆ ಎಂಬ ವಿಸ್ತೃತ ದೃಷ್ಟಿಕೋನ ದಲ್ಲಿಯೂ ಈ ಆಗ್ರಹವನ್ನು ನೋಡಬೇಕು.

ಈ ಅಪನಂಬಿಕೆಯ ಭಾವನೆಯು ಕೇಂದ್ರ ಮತ್ತು ರಾಜ್ಯಗಳ ಮೇಲೆ ಒಂದು ರೀತಿಯ ಮಿತಿಯನ್ನು ಹೇರಿದೆ. ಅಪನಂಬಿಕೆ ಸೃಷ್ಟಿ ಮತ್ತು ಅದು ಉಲ್ಬಣ ಗೊಳ್ಳಲು ಕೇಂದ್ರ ಸರ್ಕಾರವೇ ಕಾರಣ ಎಂದು ಬಿಜೆಪಿಯ ಪ್ರತಿಸ್ಪರ್ಧಿ ಪಕ್ಷಗಳ ನೇತೃತ್ವದ ಸರ್ಕಾರಗಳು ಹೇಳುತ್ತಿವೆ. ರಾಜ್ಯಪಾಲರ ಪ್ರತಿಕೂಲ ನಡವಳಿಕೆ, ಕೇಂದ್ರದ ಯೋಜನೆಗಳ ಹೇರಿಕೆ, ನಿಧಿ ಬಿಡುಗಡೆ ಮಾಡದಿರುವುದು. ಪ್ರತಿಸ್ಪರ್ಧಿ ಪಕ್ಷಗಳ ನೇತೃತ್ವದ ಸರ್ಕಾರಗಳು ಮತ್ತು ರಾಜಕಾರಣಿಗಳ ಮೇಲೆ ಕೇಂದ್ರೀಯ ತನಿಖಾ ಸಂಸ್ಥೆಗಳಿಂದ ತನಿಖೆಯಂತಹ ಕ್ರಮಗಳು ಒಕ್ಕೂಟ ಸಂಬಂಧವನ್ನು ತೀವ್ರವಾಗಿ ಹಾಳುಗೆಡವಿವೆ. ತಮ್ಮನ್ನು ತಾರತಮ್ಯದಿಂದ ನೋಡಲಾಗುತ್ತಿದೆ, ಕೇಂದ್ರವು ತಮಗೆ ಪ್ರತಿಕೂಲವಾಗಿದೆ ಎಂಬ ಭಾವನೆ ಕೆಲವು ರಾಜ್ಯಗಳಲ್ಲಿ ಇದೆ. ಕೇಂದ್ರ ಸರ್ಕಾರವು ವೈವಿಧ್ಯ ಮತ್ತು ಬಹುತ್ವವನ್ನು ಗೌರವಿಸುತ್ತಿಲ್ಲ ಹಾಗೂ ಇಡೀ ದೇಶದ ಮೇಲೆ ಏಕರೂಪತೆಯನ್ನು ಹೇರಲು ಪ್ರಯತ್ನಿಸುತ್ತಿದೆ ಎಂಬ ಭಾವನೆಯೂ ಇದೆ.

# ರಾಮಾಯಣ



## ದಶರಥ ರಾಯನ ಶರೀರವನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಇಟ್ಟಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ರಾಜನಿಲ್ಲದ ರಾಜ್ಯವು ಅರಣ್ಯಕ್ಕೆ ಸಮಾನವು. ಆದ್ದರಿಂದ ಇಕ್ಷ್ವಾಕುವಂಶದಲ್ಲಿ ಜನಿಸಿದ ಒಬ್ಬ ಕುಮಾರನಿಗೆ ರಾಜ್ಯಾಧಿಪತ್ಯದಲ್ಲಿ ಪಟ್ಟಾಭಿಷೇಕವನ್ನು ಮಾಡಬೇಕು ಎಂದು ಹೇಳಿದರು.

**ಪ್ರಧಾನರು ಭರತನನ್ನು ಕರೆಯಲು ದೂತರನ್ನು ಕಳುಹಿಸಿದ್ದು :** ಆಮೇಲೆ ವಸಿಷ್ಠಮುನೀಶ್ವರನು ಪ್ರಧಾನರನ್ನು ಕುರಿತು ಎಲೈ ಸಿದ್ದಾರ್ಥ, ವಿಜಯ, ಸುಮಂತ್ರ, ಜಯಂತ, ಅಶೋಕ, ನಮ್ಮ ಮಾತನ್ನು ಕೇಳಿರಿ. ನೀವು ನಿಮ್ಮ ದುಃಖವನ್ನು ಬಿಟ್ಟು ಶೀಘ್ರವಾಗಿ ಅರಮನೆಗೆ ಹೋಗಿ ಊಳಿಗದವರನ್ನು ವಾಯುವೇಗವುಳ್ಳ ಕುದುರೆಗಳ ಮೇಲೆ ಹತ್ತಿಸಿ ತನ್ನ ಸೋದರಮಾವನ ಮನೆಯಲ್ಲಿರುವಂಥ ಭರತನ ಸಮೀಪಕ್ಕೆ ಕಳುಹಿಸಿರಿ. ನಾವೆಲ್ಲರೂ ಕೂಡಿಕೊಂಡು ಆತನ ಆರೋಗ್ಯಸ್ಥಿತಿಯನ್ನು ವಿಚಾರಿಸಿದೆವೆಂದೂ ಆತನು ಶೀಘ್ರವಾಗಿ ಪ್ರಯಾಣವಾಗಿ ಹೊರಡಬೇಕೆಂದೂ ಹೇಳಿ ಶ್ರೀರಾಮನು ವನಕ್ಕೆ ಹೋದುದನ್ನೂ ದಶರಥರಾಯನು ಸ್ವರ್ಗಸ್ಥನಾದ ವೃತ್ತಾಂತವನ್ನೂ ಹೇಳದೆ ಭರತನನ್ನು ಕರೆದುಕೊಂಡು ಬರಹೇಳಿರಿ. ಭರತನಿಗೂ ಆತನ ಸೋದರಮಾವನಿಗೂ ಅನೇಕ ವಸ್ತ್ರಾಭರಣಗಳನ್ನು ಕೊಟ್ಟು ದೂತರನ್ನು ಕಳುಹಿಸಿರಿ ಎಂದು ಹೇಳಿದನು. ಆ ಪ್ರಧಾನರು ದೂತರನ್ನು ಕರೆಯಿಸಿ ಅವರಿಗೆ ಹಾಗೆಯೇ ಹೇಳಿ ಕಳುಹಿಸಿದರು. ಆಗ ದೂತರು ತಮ್ಮ ಮನೆಗಳಿಗೆ ಹೋಗಿ ತಮ್ಮ ಕಾರ್ಯಗಳನ್ನು ತೀರಿಸಿಕೊಂಡು ಕುದುರೆಗಳನ್ನು ಹತ್ತಿ ಈಶಾನ್ಯ ದಿಕ್ಕಿಗೆ ಹೊರಟರು. ಅವರು ಮಾಲಿನಿ ಎಂಬ ನದಿಯನ್ನು ದಾಟಿ ಹಸ್ತಿನಾಪಟ್ಟಣದ ಬಳಿ ಗಂಗೆಯನ್ನು ದಾಟಿ ಅಲ್ಲಿಂದ ಪಡುವಲಾಗಿ ತಿರುಗಿ ಪಾಂಚಾಲದೇಶಕ್ಕೆ ಹೋಗಿ ಕುರುಜಾಂಗಲವನ್ನು ಕಳೆದು ನಿರ್ಮಲೋದಕವುಳ್ಳ ಪವಿತ್ರವಾದ ನದಿಗಳನ್ನು ನೋಡುತ್ತ ಮುಂದೆ ಶರದಂಡನದಿಯ ಸಮೀಪಕ್ಕೆ ಹೋಗಿ ಆ ನದೀತೀರದಲ್ಲಿ ಬೇಡಿದ ವರವನ್ನು ಕೊಡುವ ದೇವತಾಯೋಗ್ಯವಾದ ಒಂದು ವೃಕ್ಷವನ್ನು ಕಂಡರು. ಅದಕ್ಕೆ ನಮಸ್ಕಾರವನ್ನು ಮಾಡಿ ಕುಲಿಂಗಪುರಕ್ಕೆ ಹೋಗಿ ಅಲ್ಲಿಂದ ಅಭಿಕಾಲವೆಂಬ ಗ್ರಾಮವನ್ನು ತಲಪಿ ಇಕ್ಷುಮತಿ ಎಂಬ ನದಿಯನ್ನು ದಾಟಿದರು. ಅಲ್ಲಿ ಬೊಗಸೆ ಗಳಿಂದ ಉದಕಪಾನಮಾಡುತ್ತಿದ್ದ ಬ್ರಾಹ್ಮಣರನ್ನು ಕಂಡು ಅಭಿವಂದಿಸಿ ಆ ದೂತರು ಬಾಹೀಕ ದೇಶಕ್ಕೆ ಹೋಗಿ ಅಲ್ಲಿ ಸಾಕ್ಷಾತ್ ಪರಮಪುರುಷನಿಗೆ ಆವಾಸಸ್ಥಾನವಾದ ಸುದಾಮವೆಂಬ ಪರ್ವತವನ್ನು ನೋಡಿ ಮುಂದೆ ವಿಶಾಲವಾದ ಶಾಲ್ಮಲೀನದಿಯನ ಪವಿತ್ರವಾದ ಸರೋವರಗಳನ್ನೂ ಕಾಡಾನೆ ಶರಭ ಮೊದಲಾದ ಮೃಗಗಳನ್ನೂ ನೋಡುತ್ತ ಬಹುದೂರ ಹೋಗಿ ಬಳಲಿದ ಕುದುರೆಗಳುಳ್ಳವರಾಗಿ ಅನೇಕ ಗಿರಿಗಳನ್ನೂ ಪಟ್ಟಣಗಳನ್ನೂ ದಾಟಿ ಗಿರಿವ್ರಜವೆಂಬ ಕೇಕಯರಾಯನ ಪಟ್ಟಣವನ್ನು ಪ್ರವೇಶಿಸಿದರು.

**ಭರತನ ದುಃಸ್ವಪ್ನ :** ಈ ಪ್ರಕಾರದಲ್ಲಿ ದಶರಥರಾಯನ ಪ್ರಧಾನರು ಕಳುಹಿಸಿದ ದೂತರು ಕೇಕಯನ ಪಟ್ಟಣವನ್ನು ಪ್ರವೇಶಿಸಿದ ರಾತ್ರಿಯಲ್ಲಿ ಭರತನು ದುಃಸ್ವಪ್ನವನ್ನು ಕಂಡು ಬೆದರಿ ಚಿಂತಾಕ್ರಾಂತನಾಗಿದ್ದನು. ಮಾರನೆಯ ದಿವಸ ಮನೋವ್ಯಥೆಯಿಂದ ಸಭೆಯಲ್ಲಿ ನಡೆಯುತ್ತಿದ್ದ ಮಾತುಕಥೆಗಳನ್ನೂ ನೃತ್ಯವಾದ್ಯ ಗಾನಸರಸಪ್ರಸಂಗಗಳನ್ನೂ ಸಖರ ಹಾಸ್ಯಗೋಷ್ಠಿಗಳನ್ನೂ ಎಂದಿನಂತೆ ಕೇಳದೆ ಸಂತೋಷವಿಲ್ಲದಿರಲು ಅದನ್ನು ಕಂಡು ಆತನ ಮಿತ್ರರು ಎಲೈ ಪ್ರಿಯಸಖನಾದ ಭರತನೆ, ನಿನ್ನ ಮನಸ್ಸಿನಲ್ಲಿ ಏಕೆ ಚಿಂತೆಯುಂಟಾಗಿದೆ ನಿನ್ನ ಮನೋವ್ಯಥೆಯನ್ನು ಹೇಳು ಎಂದು ಕೇಳಿದರು.

ಮುಂದುವರಿಯುವುದು...

# ಸವಿ ಸವಿ ನೆನಪು



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಆಗಿನ ಕಾಲದಲ್ಲಿ ಹಂಚಿನ ಬಾಡಿಗೆ ಮನೆಗಳು. ಸ್ವಂತ ಮನೆ ಇದ್ದವರು ಅನುಕೂಲಸ್ಥರು. ವಾರಕ್ಕೆ ಎರಡು ಬಾರಿ ಬರುವ ನೀರನ್ನು ಮನೆಯವರೆಲ್ಲಾ ಸೇರಿ ಹಿಡಿದಿಟ್ಟು ಶೇಖರಿಸಿ ಉಪಯೋಗಿಸಬೇಕು. ಖಾಲಿಯಾದರೆ ರಸ್ತೆ ಕೊನೆಯಲ್ಲಿ ಇದ್ದ ಕೈ ಬೋರ್ ವೆಲ್‌ನಿಂದ ನೀರನ್ನು ಹೊತ್ತು ತರಬೇಕು. ನೀರು ಕಾಯಿಸಲು ಸೌದೆ ಒಲೆ.ಆ ಸೌದೆಯನ್ನೂ ಆರು ತಿಂಗಳಿಗಾಗುವಷ್ಟು ಒಡೆಸಿ ಶೇಖರಿಸಿ ಇಟ್ಟು ಬಳಸಬೇಕು. ಮನೆಯಲ್ಲಿ ಸೈಕಲ್ ಇದ್ದವರು ಅನುಕೂಲಸ್ಥರು. ಸ್ಕೂಟರ್ ಇದ್ದವರು ಶ್ರೀಮಂತರು. ಘಂಟೆಗೆ ಇಷ್ಟು ಆಣೆ ಎನ್ನುವ ಲೆಕ್ಕಾಚಾರದಲ್ಲಿ ಸೈಕಲ್ ಶಾಪ್ ನಿಂದ ಬಾಡಿಗೆ ಸೈಕಲ್ ತಂದು ಅದರಲ್ಲೇ ಸೈಕಲ್ ಓಡಿಸುವುದನ್ನು ಕಲಿತುಬಿಟ್ಟರೆ ದೊಡ್ಡ ಸಾಹಸ ಮಾಡಿದಂತೆ.

ಆಮೇಲೆ ಅಪ್ಪ ಅಮ್ಮನನ್ನು ಪೀಡಿಸಿ ನಾಲ್ಕಾಣೆ, ಎಂಟಾಣೆ ಪಡೆದು ಸೈಕಲ್ ಶಾಪ್ ಸೈಕಲ್ ಓಡಿಸುತ್ತಿದ್ದರೆ BMW ಕಾರ್ ಓಡಿಸಿದಷ್ಟು ಖುಷಿ. ಬೀದಿಯಲ್ಲಿ ಒಬ್ಬರ ಮನೆಗೆ ಟಿವಿ ತಂದರೆ ಊರಿಗೆಲ್ಲಾ ಅದೇ ಸುದ್ದಿ. ಅದರಲ್ಲಿ ಬರುತ್ತಿದ್ದ ರಾಮಾಯಣ, ಮಹಾಭಾರತ ನೋಡಲು ಬೀದಿಯ ಪರಿಚಿತರು, ಹುಡುಗರೆಲ್ಲಾ ಬಂದು ಕೂರುವುದು. ಸಿಗ್ನಲ್ ಹೋದಾಗ ಮೇಲೊಬ್ಬರು ಟಿವಿ ಆಂಟೆನಾ ತಿರುಗಿಸುತ್ತಿದ್ದರೆ, ಒಳಗಿನಿಂದ ಸಾಕು ಸಾಕು ಬಂತು ಅನ್ನೋ ಸಡಗರ! ಇರುವ ಸರ್ಕಾರಿ ಶಾಲೆಯಲ್ಲೇ ವಿದ್ಯಾಭ್ಯಾಸ. ವರ್ಷಕ್ಕೊಮ್ಮೆ ಶಾಲೆಯಲ್ಲೇ ಕೊಡುತ್ತಿದ್ದ ಯುನಿಫಾರಂ.ಪಾಸ್ ಆದವರ ಪುಸ್ತಕ ನಮಗೆ.ನಮ್ಮ ಪುಸ್ತಕ ನಮ್ಮ ಜ್ಯೂನಿಯರ್ಸ್‌ಗಳಿಗೆ.


ಶಾಲೆ ಬಿಟ್ಟರೆ ರಸ್ತೆಯಲ್ಲೇ ಗೋಲಿ, ಬುಗುರಿ, ಕಣ್ಣಾಮುಚ್ಚಾಲೆ ಗಿಲ್ಲಿ-ದಾಂಡು ಮುಂತಾದ ಆಟ. ಬೇಸಿಗೆ ರಜೆ ಬಂತೆಂದರೆ ಅಜ್ಜಿಯ ಮನೆ. ಮನೆಯಲ್ಲಿ ಎಲ್ಲರೂ ಒಟ್ಟಾಗಿ ಕುಳಿತು ಸೇವಿಸುವ ಆಹಾರ.

ಹಬ್ಬಕ್ಕೆ ತಾಯಿ ಹಾಕುತ್ತಿದ್ದ ಎಣ್ಣೆ ನೀರು,ತಂದೆ ಕೊಡಿಸುತ್ತಿದ್ದ ಹೊಸ ಬಟ್ಟೆ,ಪಟಾಕಿಯ ಖುಷಿ. ಪಟಾಕಿಯನ್ನು ಬಿಸಿಲಿಗಿಟ್ಟು ಒಣಗಿಸಿಯೇ ಹೊಡೆಯಬೇಕು. ಹೋಳಿಗೆ ತಿನ್ನಲು ಹಬ್ಬವೇ ಬರಬೇಕು! ಪಾಯಸ ತಿನ್ನಲು ಮನೆಗೆ ಯಾರಾದರೂ ಬಂಧು-ಮಿತ್ರರು ಬರಬೇಕು!. ಗಣಪತಿ ತಂದರೆ ಅದನ್ನು ಬಿಡೋಕ್ಕೆ ಮನಸಿರಲಿಲ್ಲ. ಅಪರೂಪಕ್ಕೆ ಅಪ್ಪ ಅಮ್ಮ



ಕರೆದುಕೊಂಡು ಹೋಗುತ್ತಿದ್ದದ್ದು ಡಾ:ರಾಜ್ ಚಿತ್ರಗಳು. ಟಿವಿಯಲ್ಲಿ ಬರುವ ಸಾಪ್ತಾಹಿಕ ಕಾರ್ಯಕ್ರಮಕ್ಕೆ ವಾರವಿಡೀ ಕಾಯುವಿಕೆ!. ಲ್ಯಾಂಡ್ ಫೋನ್ ಇದ್ದವರು ಅಕ್ಕ ಪಕ್ಕದವರಿಗೆ ಕರೆ ಬಂದರೆ ಕೂಗಿ ಕರೆಯುವುದು. ಅಪರೂಪಕ್ಕೆ ಯಾರಿಗಾದರೂ ಕರೆ ಮಾಡಬೇಕಾದರೆ ಟೆಲಿಫೋನ್ ಎಕ್ಸ್ ಚೇಂಜ್‌ಗೆ ಕರೆ ಮಾಡಿ ಬುಕ್ ಮಾಡಬೇಕು.

ಬಡವ-ಶ್ರೀಮಂತ ಎನ್ನುವುದಿಲ್ಲದೇ ಎಲ್ಲರೂ ಕೆಎಸ್‌ಆರ್ ಟಿಸಿ ಕೆಂಪು ಬಸ್ಸಲ್ಲೇ ಖುಷಿಯಾಗಿ ಪ್ರಯಾಣ. ವರ್ಷಕ್ಕೊಮ್ಮೆ ಊರು ಜಾತ್ರೆಯ ಸಂಭ್ರಮ. ಜೋರು ಮಳೆಯಲ್ಲೂ ಆಲಿಕಲ್ಲು ಆರಿಸುವ ತವಕ,ಮಳೆ ನೀರನ್ನು ಬಕೇಟಿನಲ್ಲಿ ಹಿಡಿದು ತೊಟ್ಟಿ ತುಂಬಿಸುವ ಆಟ.



ಬಂಧು-ಮಿತ್ರರ ಮನೆಯ ಸುಖ-ದುಃಖದ ಸಂಧರ್ಭದಲ್ಲಿ ಮನೆಯ ಎಲ್ಲರೂ ಹೋಗಿ ಭಾಗಿಯಾಗುವುದು.

ವಾರಗಟ್ಟಲೆ ಅಲ್ಲೇ ಕ್ಯಾಂಪ್. ಇಂದು ನಮ್ಮೊಂದಿಗೆ ಇರುವ ಸಾಧನಗಳು ಅಂದಿನ ದಿನದಲ್ಲಿ ಇಲ್ಲದಿದ್ದರೂ ಅದೇ ಸ್ವರ್ಗ. ಇಂದು ಅಂಗೈಯ್ಯಲ್ಲೇ ಜಗತ್ತು ಇದೆ. ದುಡ್ಡು ಇದೆ.ಮನೆಗೊಂದು ಕಾರ್ ಇದೆ ನಲ್ಲಿ ತಿರುಗಿಸಿದರೆ ಬಿಸಿ-ಅಥವಾ ತಣ್ಣೀರು ಬರುತ್ತದೆ. ಕ್ಷಣ ಮಾತ್ರದಲ್ಲಿ ಎಲ್ಲಿಗೆ ಬೇಕಾದರೂ ತಲುಪುವಷ್ಟು ಸುಖವಾದ ಸಾಧನಗಳಿವೆ. ಭೂತ-ವರ್ತಮಾನ-ಭವಿಷ್ಯವನ್ನು ಭಗವಂತನಿಗಿಂತ ಚೆನ್ನಾಗಿ ಬಲ್ಲ ಮತ್ತು ಅದನ್ನು ವಿವರಿಸುವ ನ್ಯೂಸ್ ಚಾನೆಲ್‌ಗಳಿವೆ! ಸೆಖೆ ಆದರೆ ಎಸಿ ಇದೆ. ಛಳಿ ಆದರೆ ಹೀಟರ್ ಇದೆ. ರಸ್ತೆಗೊಂದು ಕಾನ್ವೆಂಟ್ ಇದೆ ಹೋಟೆಲ್.... ಆಸ್ಪತ್ರೆ ಎಲ್ಲವೂ ಇದೆ. ಮನೆಯಲ್ಲೇ ಕುಳಿತು ಆರ್ಡರ್ ಮಾಡಿದರೆ ಮೊಬೈಲ್ ಕೆಳಗೆ ಇಡುವಷ್ಟರಲ್ಲಿ ಪಾರ್ಸೆಲ್ ಮನೆ ಬಾಗಿಲಿಗೆ ಬರುತ್ತದೆ. ಆದರೂ ಒಂದು ಮಾತ್ರ ON LINE ಸೇರಿದಂತೆ ಎಲ್ಲೇ ಹುಡುಕಿದರೂ ಸಿಗ್ತಾ ಇಲ್ಲ!.. ಆಗಿನ ಕಾಲದಲ್ಲಿ ಸಿಗುತ್ತಿದ್ದ ಸಂಬಂಧ,ಸ್ನೇಹ, ಪ್ರೀತಿ-ವಿಶ್ವಾಸ, ಸಂತೋಷ-ಸುಖ, ನೆಮ್ಮದಿ.!!!

# ಗೈಡೆಡ್ ಟೂರ್ ಶುರು: ಇಂದಿನಿಂದ ವಿಧಾನಸೌಧ ವೀಕ್ಷಣೆಗೆ ಮುಕ್ತ ಅವಕಾಶ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಕ್ತಿಸೌಧ ವಿಧಾನಸೌಧ ಸಾರ್ವಜನಿಕ ವೀಕ್ಷಣೆಗೆ ಮುಕ್ತವಾಗಿದೆ. ಹೀಗಾಗಿ ಶಕ್ತಿಸೌಧವನ್ನ ದೂರದಿಂದಲೇ ನೋಡಿ.. ಫೋಟೋ ಕ್ಲಿಕ್ಕಿಸಿ ಸಂತಸಪಟ್ಟುಕೊಳ್ಳುತ್ತಿದ್ದ ಜನರಿಗೆ ಹತ್ತಿರದಿಂದಲೇ ನೋಡುವ ಅವಕಾಶ ಸಿಕ್ಕಿದೆ. ಭವ್ಯ ವಿಧಾನಸೌಧ ವೀಕ್ಷಣೆಗೆ ರಾಜ್ಯ ಸರ್ಕಾರ ಗೈಡೆಡ್ ಟೂರ್ ಹೆಸರಿನಲ್ಲಿ ಪ್ರವಾಸ ಭಾಗ್ಯ ಕಲ್ಪಿಸಿದೆ. ನಿತ್ಯ 25 ರಿಂದ 30 ಸದಸ್ಯರ 10 ಬ್ಯಾಚ್‌ಗಳಿಗೆ ವೀಕ್ಷಣೆಗೆ ಅವಕಾಶ ಇರುತ್ತದೆ. ಇಂದಿನಿಂದ ಗೈಡೆಡ್ ಟೂರ್ ಶುರುವಾಗಿದ್ದು, ಪ್ರವಾಸಿಗರಿಗೆ ವಿಧಾನಸೌಧದ ಮಹತ್ವ, ಇತಿಹಾಸ, ಪರಂಪರೆ, ಅಧಿವೇಶನ ಸಭಾಂಗಣ, ಭವ್ಯ ಮೆಟ್ಟಿಲುಗಳ ವಿವರಣೆ ಕೊಡುವ ಕೆಲಸವನ್ನ ಮಾರ್ಗದರ್ಶಿಗಳು ಮಾಡುತ್ತಿದ್ದಾರೆ.

**ಯಾರಿಗೆ ಉಚಿತ, ಯಾರಿಗೆ ಟಿಕೆಟ್ ಖಚಿತ?**

**ಗುರುತಿನ ಚೀಟಿ ಕಡ್ಡಾಯ?:** ವಿಧಾನಸೌಧದ ಮಹತ್ವವನ್ನು ಪ್ರವಾಸಿಗರಿಗೆ ತಿಳಿಸಿಕೊಡಲು ಸದ್ಯ 10 ಗೈಡ್‌ಗಳನ್ನ ನೇಮಕ ಮಾಡಿಕೊಳ್ಳಲಾಗಿದ್ದು, ಕನ್ನಡ ಇಂಗ್ಲಿಷ್ ಭಾಷೆಯಲ್ಲಿ ವಿವರಣೆ ನೀಡಲಾಗುತ್ತದೆ.


ಕರ್ನಾಟಕ ಮಾತ್ರವಲ್ಲದೇ ಹೊರ ರಾಜ್ಯ, ಹೊರ ದೇಶಗಳ ಪ್ರವಾಸಿಗರೂ ವಿಧಾನಸೌಧ ವೀಕ್ಷಣೆಗೆ ಬರ್ತಿದ್ದಾರೆ. ವಿಧಾನಸೌಧ ಪ್ರವಾಸಕ್ಕೆ ಪ್ರತಿ ಬ್ಯಾಚ್‌ಗೂ ಒಂದೂವರೆ ಗಂಟೆ ಸಮಯ, ಒಂದೂವರೆ ಕಿಮೀ ನಡಿಗೆ ಇರಲಿದೆ. ವಿಕಾಸಸೌಧದ ಎಂಟ್ರಿ ಗೇಟ್ (ನಂಬರ್ 3) ಮೂಲಕ ಟೂರ್ ಆರಂಭವಾಗಲಿದೆ. 20 ನಿಮಿಷ ಮುಂಚೆ ಟೂರ್ ಆರಂಭಕ್ಕೂ ಮುನ್ನ ಹಾಜರಿರಬೇಕು, ಟಿಕೆಟ್ ಬುಕ್ ಮಾಡಿದವರು ಸರ್ಕಾರ ವಿತರಿಸಿರುವ ಯಾವುದಾದರೂ ಗುರುತಿನ ಚೀಟಿ ತರಬೇಕು. ವಿಧಾನಸೌಧ ಟೂರ್ ವೇಳೆ ನಿಗದಿತ ಸ್ಥಳದಲ್ಲಿ ಮಾತ್ರ ಫೋಟೋ ತೆಗೆಯಲು ಅವಕಾಶ. **ಟಿಕೆಟ್ ದರ ಎಷ್ಟು:** ಪ್ರತೀ ಪ್ರವಾಸಿಗರಿಗೂ ತಲಾ 50 ರೂ. ಟಿಕೆಟ್ ನಿಗದಿ ಮಾಡಲಾದೆ. ಇನ್ನೂ 15 ವರ್ಷದೊಳಗಿನ ಮಕ್ಕಳು, ಎಸ್‌ಎಸ್‌ಎಲ್‌ಸಿ ವರೆಗಿನ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ಇರಲಿದೆ. ಕಳೆದ ವಾರವಷ್ಟೇ ಸ್ಪೀಕರ್ ಯು.ಟಿ ಖಾದರ್ ಹಾಗೂ ಸಭಾಪತಿ ಹೊರಟ್ಟಿಯವರು ಗೈಡೆಡ್ ಟೂರ್‌ಗೆ ಚಾಲನೆ ನೀಡಿದ್ದರು. ಬೆಂದಕಾಳೂರಿನ ಹೆಗ್ಗುರುತು, ರಾಜ್ಯದ ಆಡಳಿತ ಶಕ್ತಿಸೌಧ ಅಂತಲೇ ಕರೆಯಿಸಿಕೊಳ್ಳುವ ವಿಧಾನಸೌಧ ಈಗ ಪ್ರವಾಸಿ ತಾಣ. ಇಲ್ಲಿಯವರೆಗೂ ಕೇವಲ ಗೇಟ್ ಹೊರಭಾಗದಿಂದ, ರಸ್ತೆಯಿಂದ ಕಾಣಿಸುತ್ತಿದ್ದ ವಿಧಾನಸೌಧ ಇನ್ಮುಂದೆ ಪ್ರವಾಸಿ ಸ್ಥಳ ಆಗಲಿದೆ. ಗೈಡೆಡ್ ಟೂರ್ ಹೆಸರಲ್ಲಿ ಸಾರ್ವಜನಿಕರ ವೀಕ್ಷಣೆಗೆ ಸರ್ಕಾರ ಅವಕಾಶ ನೀಡಿದೆ. ಇನ್ಮುಂದೆ ವಿಧಾನಸೌಧದ ಒಳಗೆ ಹೋಗಿ ಭವ್ಯ ಐತಿಹಾಸಿಕ ಕಟ್ಟಡವನ್ನು ಕಣ್ತುಂಬಿಕೊಳ್ಳಬಹುದು.



# ಭರವಸೆಯ ನೃತ್ಯ ಕಲಾವಿದೆಯರಾದ ಸಾನಿಕ ಮತ್ತು ಜನರಕ್ಷಿತ ರಂಗಪ್ರವೇಶ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು



• ಉದಯವಾಹಿನಿ, ವಿಶೇಷ

ನೃತ್ಯಕ್ಷೇತ್ರದಲ್ಲಿ ಬಹು ಬದ್ಧತೆಯಿಂದ ತೊಡಗಿಕೊಂಡು ಶಿಸ್ತಿನಿಂದ ನೃತ್ಯ ತರಬೇತಿ ನೀಡುತ್ತಿರುವ 'ಕಾರುಣ್ಯ ನೃತ್ಯ ಅಕಾಡೆಮಿ'ಯ ನೃತ್ಯಗುರು ವಿದುಷಿ.ಅಮೃತಾ ಶಶಾಂಕ್ ಸ್ವತಃ ಉತ್ತಮ ನೃತ್ಯಗಾರ್ತಿ. ಭಾವಾಭಿನಯಗಳಿಗೆ ಹೆಸರಾದ ಅಮೃತಾ ಈಗಾಗಲೇ ನೂರಾರು ಜನ ನೃತ್ಯಾಕಾಂಕ್ಷಿಗಳಿಗೆ ಬೆಂಗಳೂರಿನಲ್ಲಿ ನಾಟ್ಯಶಿಕ್ಷಣ ನೀಡುತ್ತಿದ್ದು, ಅವರ ಸಮರ್ಥ ಗರಡಿಯಲ್ಲಿ ರಂಗಪ್ರದರ್ಶನ ನೀಡಲು ತಯಾರಾಗಿರುವ ನೃತ್ಯಶಿಲ್ಪಗಳೆಂದರೆ ಕು. ಸಾನಿಕಾ ಎಸ್. ಮತ್ತು ಜನರಕ್ಷಿತ ಬಿ.ಆರ್ ಇವರು ಕಳೆದ ಒಂದು ದಶಕದಿಂದ ಅಮೃತಾ ಅವರಲ್ಲಿ ನೃತ್ಯಾಭ್ಯಾಸ ಮಾಡುತ್ತಾ ನಾಡಿನ ಅನೇಕ ದೇವಾಲಯ ಮತ್ತು ಇನ್ನಿತರ ವೇದಿಕೆಗಳಲ್ಲಿ ನರ್ತಿಸಿದ್ದಾರೆ.

**ಕಲಾವಿದೆದ್ವಯರ ಸುಮನೋಹರ ನರ್ತನ**

ಶ್ರೀ ರೂಪೇಶ್ ಕುಮಾರ್ ಎಸ್. ಮತ್ತು ಬಿ. ಭರಣಿಯವರ ಪುತ್ರಿ ಹದಿನೇಳು ವರ್ಷದ ಜನರಕ್ಷಿತ ಹಾಗೂ ಶ್ರೀ ಶೇಖರ್ ರಾವ್ ಬಿ. ಹೆಚ್. ಮತ್ತು ಎಸ್. ಶ್ವೇತಾ ಅವರ ಪುತ್ರಿ ಹದಿನೆಂಟರ ಸಾನಿಕಾ, ಕರ್ನಾಟಕ ಸರ್ಕಾರದ ಜ್ಯೂನಿಯರ್ ನೃತ್ಯಪರೀಕ್ಷೆಯಲ್ಲಿ ಶ್ರೇಷ್ಠ ಅಂಕಗಳನ್ನು ಪಡೆದು ತೇರ್ಗಡೆಯಾಗಿದ್ದು ಆಸಕ್ತಿಯಿಂದ ನಾಟ್ಯ ಕಲಿಯುತ್ತಿದ್ದಾರೆ. ಇವರಿಬ್ಬರು, ಜೂನ್ ತಿಂಗಳ 7 -ಶನಿವಾರ ಸಂಜೆ 5.30 ಕ್ಕೆ ವಯ್ಯಾಲಿಕಾವಲ್ಲಿನ ಶ್ರೀಕೃಷ್ಣದೇವರಾಯ ಕಲಾಮಂದಿರ'ದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾರೆ. ಇವರ ಅಪೂರ್ವ ನೃತ್ಯಚೆಲುವನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ.


ಬಹುಮುಖ ಪ್ರತಿಭೆಯಾದ ಕು. ಜನರಕ್ಷಿತಾಗೆ ನೃತ್ಯ ಬಾಲ್ಯದ ಒಲವು. ಅವಳು ತನ್ನ ಬಾಲ್ಯದ 5 ರ ಎಳವೆಯಲ್ಲೇ ಗುರು ನಾಗಲಕ್ಷ್ಮಿ ರಾವ್ ಅವರಲ್ಲಿ ಭರತನಾಟ್ಯ ಕಲಿಯಲಾರಂಭಿಸಿ, ಅನಂತರ ಗುರು ಅಮೃತಾ ಅವರಲ್ಲಿ ಮುಂದುವರೆಸಿದಳು.

ಕಾರ್ಮೆಲ್ ಶಾಲೆಯಲ್ಲೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮುಂದಿದ್ದ ಇವಳು, ಅನೇಕ ನೃತ್ಯಸ್ಪರ್ಧೆಗಳಲ್ಲಿ ಭಾಗವಹಿಸಿ ಬಹುಮಾನಗಳಿಸಿ ನಾಟ್ಯ ಮಯೂರಿ ಎಂಬ ಪ್ರಶಸ್ತಿಯಿಂದ ಪುರಸ್ಕೃತಳಾಗಿದ್ದಾಳೆ ಓದಿನ ಜೊತೆ ಜನರಕ್ಷಿತ ಕ್ರೀಡೆಯಲ್ಲೂ ಮುಂದು. ಎನ್.ಸಿ.ಸಿ ಯಲ್ಲಿ ಕಾರ್ಪೊರಲ್ ಸ್ಥಾನಗಳಿಸಿದ್ದಳು. ಶಾಲೆಯ ಥ್ರೋಬಾಲ್ ತಂಡಕ್ಕೆ ಕ್ಯಾಪ್ಟನ್ ಆಗಿದ್ದ ಇವಳು, ಜಿಲ್ಲಾಮಟ್ಟದ ಥ್ರೋಬಾಲ್ ಟೋರ್ನಮೆಂಟ್ ನಲ್ಲಿ ಭಾಗವಹಿಸಿ ಬೆಸ್ಟ್ ಪ್ಲೇಯರ್' ಅವಾರ್ಡ್ ಪಡೆದದ್ದು ಅವಳ ವೈಶಿಷ್ಟ್ಯ ಅವಳು ಉತ್ತಮ ಅಥ್ಲೆಟಿಕ್ ಕೂಡ ಪ್ರಸ್ತುತ ಕಾರ್ಮೆಲ್ ಪಿ.ಯೂ. ಕಾಲೇಜಿನಲ್ಲಿ ಎರಡನೆಯ ವರ್ಷದ ಪಿ.ಯೂ.ಸಿ ವಿದ್ಯಾರ್ಥಿನಿಯಾಗಿರುವ ಇವಳು, ಬೆಂಗಳೂರು, ಉಡುಪಿ, ಶಿವಮೊಗ್ಗ ಮುಂತಾದ ಅನೇಕ ಸ್ಥಳಗಳಲ್ಲಿ ನೃತ್ಯ ಪ್ರದರ್ಶನ ನೀಡಿದ್ದಾಳೆ. ಕು. ಸಾನಿಕಾ ಕೂಡ ಬಹುಮುಖೀ ವ್ಯಕ್ತಿತ್ವ ಉಳ್ಳವಳು. ವಿದುಷಿ ಅಮೃತಾ ಬಳಿ ಬದ್ಧತೆಯಿಂದ ನೃತ್ಯ ಕಲಿಯುತ್ತಿರುವ ಇವಳು, ಪಿ. ಯೂ.ಸಿ. ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದು ಉತ್ತೀರ್ಣ ಹೊಂದಿ ಈಗ, ಮಹಾರಾಣಿ ಲಕ್ಷ್ಮೀ ಅಮ್ಮಣ್ಣಿ ಕಾಲೇಜಿನಲ್ಲಿ ಬಿ.ಬಿ.ಎ. ವಿದ್ಯಾಭ್ಯಾಸ ಮಾಡುತ್ತಿದ್ದಾಳೆ. ಓದಿನಲ್ಲೂ ಚುರುಕಾಗಿರುವ ಸಾನಿಕಾ, ಶಾಲೆಯಲ್ಲಿ ಬ್ಯಾಂಡ್ ಗ್ರೂಪ್ ಕ್ಯಾಪ್ಟನ್ ಆಗಿದ್ದು, ವಿಜ್ಞಾನ ಪ್ರದರ್ಶನಗಳಲ್ಲಿ ಬಹುಮಾನ ಗಳಿಸಿದ್ದಾಳೆ. ಅಂತರಶಾಲಾ- ಕಾಲೇಜುಗಳ ಜಿಲ್ಲಾ ಮಟ್ಟದ ಕಬ್ಬಡಿ ಸ್ಪರ್ಧೆಗಳಲ್ಲಿ ಅನೇಕ ಬಹುಮಾನಗಳನ್ನು ಪಡೆದ ಹೆಗ್ಗಳಿಕೆ ಇವಳದು. ಕರ್ನಾಟಕ ಸರ್ಕಾರದ ಜ್ಯೂನಿಯರ್ ನೃತ್ಯಪರೀಕ್ಷೆಯ ಜೊತೆ ಗಂಧರ್ವ ಮಹಾ ವಿದ್ಯಾಲಯದ ಪರೀಕ್ಷೆಗಳಲ್ಲೂ ಜಯಶಾಲಿಯಾಗಿದ್ದಾಳೆ.

ನಾಡಿನಾದ್ಯಂತ ವಿವಿಧ ವೇದಿಕೆಗಳಲ್ಲಿ ತನ್ನ ಪ್ರತಿಭಾ ಪ್ರದರ್ಶನ ಮಾಡಿರುವುದಲ್ಲದೆ ಸಾನಿಕಾ, ನೃತ್ಯೋಲ್ಲಾಸ ರಾಷ್ಟ್ರೀಯ ನೃತ್ಯೋತ್ಸವದಲ್ಲಿ ಭಾಗವಹಿಸಿದ್ದು, ಉಡುಪಿ, ಶಿವಮೊಗ್ಗದ ದೇವಾಲಯಗಳಲ್ಲೂ ನೃತ್ಯ ಪ್ರದರ್ಶಿಸಿದ್ದಾಳೆ.

# ವಯಸ್ಸಾಗುತ್ತಾ ಬಂದಂತೆ ಪಾರ್ಕಿನ್ಸನ್ ಕಾಯಿಲೆ ಶುರು!

ದೇಹದ ನರಮಂಡಲ ವ್ಯವಸ್ಥೆಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆ ಎಂದರೆ ಅದು ಪಾರ್ಕಿನ್ಸನ್ ಕಾಯಿಲೆ. ಇದಕ್ಕೆ ಕಾರಣ ಮೆದುಳಿನಲ್ಲಿ ಡೋಪಮೈನ್ ಹಾರ್ಮೋನ್ ಮಟ್ಟದಲ್ಲಿ ಏರುಪೇರಾದರೆ ಈ ಕಾಯಿಲೆ ಕಾಣಿಸಿಕೊಳ್ಳುತ್ತದೆ, ಎನ್ನುತ್ತಾರೆ ವೈದ್ಯರು. ಅದರಲ್ಲೂ ವಯಸ್ಸು ದಾಟಿದ ಜನರಲ್ಲಿ ಈ ಕಾಯಿಲೆ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚು ಎನ್ನುತ್ತಾರೆ ಆರೋಗ್ಯ ತಜ್ಞರು ಪಾರ್ಕಿನ್ಸನ್ ಕಾಯಿಲೆ ಎಂದರೆ, ಮನುಷ್ಯನ ನರಮಂಡಲದ ವ್ಯವಸ್ಥೆಯ ಮೇಲೆ ಎದುರಾಗುವ ಒಂದು ಬಗೆಯ ಆರೋಗ್ಯ ಸಮಸ್ಯೆ. ಒಂದು ವೇಳೆ ವ್ಯಕ್ತಿಯಲ್ಲಿ ಈ ಕಾಯಿಲೆ ಕಾಣಿಸಿಕೊಂಡರೆ, ಆತನ ಆಕೆಯ ದೈಹಿಕ ಚಲನವಲನಗಳಲ್ಲಿ ಹಲವಾರು ರೀತಿಯಲ್ಲಿ ಬದಲಾವಣೆಗಳು ಕಾಣಿಸಿಕೊಳ್ಳಲು ಶುರುವಾಗುತ್ತದೆ!



ಮುಖ್ಯವಾಗಿ ಕೈಕಾಲುಗಳಲ್ಲಿ ನಡುಕ ಶುರುವಾಗುತ್ತದೆ, ಮುಖ ಹಾಗೂ ದೇಹದಲ್ಲಿ ಕೆಲವೊಂದು ಪ್ರಮುಖ ಭಾಗಗಳಲ್ಲಿ ಹಿಡಿದು ಕೊಂಡಂತೆ ಆಗುತ್ತದೆ ಅಂದರೆ ಮಸಲ್ಸ್ ಕ್ಯಾಚ್ ರೀತಿಯ ಅನುಭವ ಆಗತೊಡಗುತ್ತದೆ, ಕೆಲವರಿಗೆ ನಡೆಯುವಾಗ ದೇಹದ ಸಮತೋಲನ ತಪ್ಪುವುದು, ಮಾತನಾಡುವಾಗ ಮಾತು ತೊದಲುವುದು ಮತ್ತು ಕೈಗಳು ಇದ್ದಕ್ಕಿದಂತೆ ನಡುಗುವುದು, ದೇಹದ ತೂಕ ವಿಪರೀತ ಕಡಿಮೆಯಾಗುತ್ತದೆ, ಇವೆಲ್ಲಾ ಈ ಕಾಯಿಲೆಯ ಮುಖ ಲಕ್ಷಣಗಳಲ್ಲಿ ಒಂದು. ಎರಡು ತಿಂಗಳ ಹಿಂದೆ ರಷ್ಯಾ ದೇಶದ ಅಧ್ಯಕ್ಷ ವ್ಲಾಡಿಮೀರ್ ಪುಟಿನ್ ಅವರಿಗೂ ಈ ಕಾಯಿಲೆ ಕಾಣಿಸಿಕೊಂಡಿದ್ದು ಇಲ್ಲಿ ಸ್ಮರಿಸಬಹುದು



**ಈ ಬಗ್ಗೆ ತಜ್ಞರು ಏನು ಹೇಳುತ್ತಾರೆ:** ಈ ಕಾಯಿಲೆಯ ಬಗ್ಗೆ ತಜ್ಞರು ಹೇಳುವ ಪ್ರಕಾರ ಪಾರ್ಕಿನ್ಸನ್ ಕಾಯಿಲೆಯು ವ್ಯಕ್ತಿಯ ಚಲನೆ, ಸಮತೋಲನ, ಸಮನ್ವಯವನ್ನು ನಿಯಂತ್ರಿಸುವ ಮೆದುಳಿನ ಭಾಗಗಳ ಮೇಲೆ ಪರಿಣಾಮ ಬೀರುತ್ತದೆ. ವ್ಯಕ್ತಿಯ ದೇಹದಲ್ಲಿ ಡೋಪಮೈನ್ ಹಾರ್ಮೋನ್ ಮಟ್ಟವು ತುಂಬಾ ಕಡಿಮೆಯಾದಾಗ ಈ ಸಮಸ್ಯೆ ಉಂಟಾಗುತ್ತದೆ. ಇಂತಹ ಸಂದರ್ಭದಲ್ಲಿ ಈ ಕಾಯಿಲೆಯ ಕೆಲವೊಂದು ಸೂಕ್ಷ್ಮ ರೋಗಲಕ್ಷಣಗಳನ್ನು ಪ್ರಾರಂಭದಲ್ಲಿ ತಿಳಿದು ಕೊಂಡರೆ, ಈ ಕಾಯಿಲೆಯನ್ನು ಸುಲಭವಾಗಿ ನಿಯಂತ್ರಣದಲ್ಲಿ ಇಟ್ಟು ಕೊಳ್ಳಬಹುದಾಗಿದೆ.

**ಈ ಕಾಯಿಲೆಗೆ ಪ್ರಮುಖ ಕಾರಣಗಳೇನು:** ಪಾರ್ಕಿನ್ಸನ್ ಕಾಯಿಲೆಗೆ ನಿಖರವಾದ ಕಾರಣ ಇನ್ನೂ ಸಂಪೂರ್ಣವಾಗಿ ಸ್ಪಷ್ಟವಾಗಿಲ್ಲ ಎನ್ನುತ್ತಾರೆ ತಜ್ಞರು,

**ಪಾರ್ಕಿನ್ಸನ್ ಕಾಯಿಲೆ ಯಾರಿಗೆ ಹೆಚ್ಚು ಅಪಾಯ?**

**ಡಾ. ಮಧುಕರ್ ಹೇಳುವಂತೆ ಈ ಕಾಯಿಲೆಯ ಹೆಚ್ಚಿನ ಅಪಾಯ ವೃದ್ಧಾಪ್ಯದಲ್ಲಿ ಕಂಡುಬರುತ್ತದೆ. ವಿಶೇಷವಾಗಿ 60 ವರ್ಷ ವಯಸ್ಸಿನ ನಂತರ, ಈ ಕಾಯಿಲೆಯ ಹೆಚ್ಚಿನ ಪ್ರಕರಣಗಳು ವರದಿಯಾಗುತ್ತವೆ. ಕೆಲವು ಸಂಶೋಧನೆಗಳು ಈ ರೋಗವು ಪುರುಷರಿಗಿಂತ ಮಹಿಳೆಯರಲ್ಲಿ ಹೆಚ್ಚು ಸಾಮಾನ್ಯವಾಗಿದೆ ಎಂದು ಸಾಬೀತುಪಡಿಸಿವೆ.**

ಆದರೆ ಈ ರೋಗವು ಆನುವಂಶಿಕ ಕಾರಣಗಳಿಂದ ಕೂಡ ಕಾಣಿಸಿಕೊಳ್ಳ ಬಹುದು. ಹೀಗಾಗಿ ಈ ರೋಗ ಒಮ್ಮೆ ಬಂದರೆ, ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ, ಕೇವಲ ಇದನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹುದು ಅಷ್ಟೇ! ಪಾರ್ಕಿನ್ಸನ್ ಕಾಯಿಲೆಗೆ ನಿಖರವಾದ ಕಾರಣ ಸ್ಪಷ್ಟವಾಗಿಲ್ಲ. ಆದಾಗ್ಯೂ, ವಿವಿಧ ಅಧ್ಯಯನಗಳ ಪ್ರಕಾರ, ಆನುವಂಶಿಕ ಮತ್ತು ಪರಿಸರ ಅಂಶಗಳ ಸಂಯೋಜನೆಯು ಈ ಕಾಯಿಲೆಗೆ ಕಾರಣವಾಗುತ್ತದೆ. ಕೆಲವು ವಿಷಕಾರಿ ವಸ್ತುಗಳಿಗೆ ಒಡ್ಡಿಕೊಳ್ಳುವುದು, ತಲೆಗೆ ಗಾಯಗಳು ಮತ್ತು ಪಾರ್ಕಿನ್ಸನ್ ಕಾಯಿಲೆಯ ಕುಟುಂಬದ ಇತಿಹಾಸವು ಅಪಾಯವನ್ನು ಹೆಚ್ಚಿಸಬಹುದು.

**ವೈದ್ಯರು ಹೇಳುವ ಪ್ರಕಾರ :** ಸರ್ವೋದಯ ಆಸ್ಪತ್ರೆಯ ನರವಿಜ್ಞಾನ ವಿಭಾಗದ ಡಾ. ಮಧುಕರ್ ತ್ರಿವೇದಿ ಅವರು ಹೇಳುವ ಪ್ರಕಾರ ಈ ಕಾಯಿಲೆ ಕಾಣಿಸಿಕೊಂಡರೆ ಕೈ ಮತ್ತು ಕಾಲುಗಳಲ್ಲಿ ನಡುಕ, ಸ್ನಾಯುಗಳ ಬಿಗಿತ ಮತ್ತು ದೇಹವನ್ನು ಸಮತೋಲನದಲ್ಲಿಡುವಲ್ಲಿ ತೊಂದರೆ ಉಂಟು ಮಾಡುತ್ತದೆ. ಇನ್ನು ಕೆಲವರಿಗೆ ಈ ನಡೆಯಲು ತೊಂದರೆಯಾಗಬಹುದು ಮತ್ತು ಮಾತನಾಡಲು ಕೂಡ ತೊಂದರೆಯಾಗಬಹುದು. ಈ ಕಾಯಿಲೆಗೆ ಶಾಶ್ವತ ಚಿಕಿತ್ಸೆ ಇಲ್ಲ, ಆದರೆ ಔಷಧಿಗಳು ಮತ್ತು ಚಿಕಿತ್ಸೆಯಿಂದ ಇದರ ಲಕ್ಷಣಗಳನ್ನು ತಕ್ಕಮಟ್ಟಿಗಾದರೂ ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹುದು ಎನ್ನುತ್ತಾರೆ ಆರೋಗ್ಯ ತಜ್ಞರು. ರೋಗಿಗಳ ದೇಹದಲ್ಲಿ ಡೋಪಮೈನ್ ಪ್ರಮಾಣವನ್ನು ಹೆಚ್ಚಿಸಲು ಔಷಧಿಗಳನ್ನು ನೀಡಲಾಗುತ್ತದೆ. ಇದಲ್ಲದೆ, ಭೌತಚಿಕಿತ್ಸೆ ಮತ್ತು ಆರೋಗ್ಯಕರ ಆಹಾರ ಪದ್ಧತಿಗೆ ವಿಶೇಷ ಗಮನ ನೀಡಲಾಗುತ್ತದೆ. ಸಮಯಕ್ಕೆ ಸರಿಯಾಗಿ ಗುರುತಿಸಿದರೆ, ಅದರ ಪರಿಣಾಮವನ್ನು ಮಿತಿಗೊಳಿಸಲು ಸಾಧ್ಯವಿದೆ.

**ಇದಕ್ಕೆ ಚಿಕಿತ್ಸೆಗಳೇನು :** ಪಾರ್ಕಿನ್ಸನ್ ಕಾಯಿಲೆಯ ಆರಂಭಿಕ ರೋಗನಿರ್ಣಯವನ್ನು ಆರಂಭದಲ್ಲಿ ಪತ್ತೆಹಚ್ಚಿ ಅದಕ್ಕೆ ಸಂಬಂಧಪಟ್ಟ ಔಷಧಿಗಳು ಜೀವನಶೈಲಿಯ ಬದಲಾವಣೆಗಳನ್ನು ಮಾಡಿಕೊಂಡರೆ, ಖಂಡಿತವಾಗಿ ಕೂಡ ಈ ಕಾಯಿಲೆಯನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹುದು ಎನ್ನುತ್ತಾರೆ ತಜ್ಞರು. ಇನ್ನು ರೋಗಿಯ ನರವೈಜ್ಞಾನಿಕ ಪರೀಕ್ಷೆ, ವೈದ್ಯಕೀಯ ಇತಿಹಾಸ, ಡಾಟ್ಸ್ಕ್ಯಾನ್ ಡೋಪಮೈನ್ ಟ್ರಾನ್ಸ್‌ಪೋರ್ಟರ್ ಸ್ಕ್ಯಾನ್ ಅಥವಾ ಎಂಆರ್‌ಐ ರೋಗನಿರ್ಣಯಕ್ಕೆ ಸಹಾಯ ಮಾಡುತ್ತದೆ. ಸಕಾಲಿಕ ರೋಗನಿರ್ಣಯವು ರೋಗವನ್ನು ನಿರ್ವಹಿಸಲು ಪ್ರಮುಖವಾಗಿದೆ. ಪಾರ್ಕಿನ್ಸನ್ ಕಾಯಿಲೆಗೆ ಯಾವುದೇ ಚಿಕಿತ್ಸೆ ಇಲ್ಲ, ಆದರೆ ಚಿಕಿತ್ಸೆಯು ಯಶಸ್ವಿ ರೋಗಿಯ ಫಲಿತಾಂಶಗಳಿಗಾಗಿ ರೋಗ ಲಕ್ಷಣಗಳನ್ನು ನಿರ್ವಹಿಸುವುದರ ಮೇಲೆ ಕೇಂದ್ರೀಕರಿಸುತ್ತದೆ.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
|---|---|---|
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಮಧ್ಯಾಹ್ನ | 10:30 ರಿಂದ 12:00 |

**ಮೇಷ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ವೃಷಭ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ.

**ಮಿಥುನ** ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಇಂದು ಎದುರಾಗಬಹುದು. ಉದ್ಯಮಿಗಳು ಕೆಲವು ಹಠಾತ್ ಅನಿರೀಕ್ಷಿತ ಲಾಭ ಅಥವಾ ಆದಾಯದ ಒಳ್ಳೆಯ ದಿನವನ್ನು ಹೊಂದಬಹುದಾದ್ದರಿಂದ ಅವರಿಗೆ ಒಳ್ಳೆಯ ದಿನ.

**ಕರ್ಕಾಟಕ** ನಿಮ್ಮಲ್ಲಿ ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಭವಿಷ್ಯದಲ್ಲಿ ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ.

**ಸಿಂಹ** ಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿಯನ್ನು ಕುಂಠಿತಗೊಳಿಸಿದೆಯೆಂದು ಕಂಡುಕೊಳ್ಳಲು ಇದು ಸಕಾಲ.

**ಕನ್ಯಾ** ಇಂದು ಮನೆಯಲ್ಲಿ ಹೆಚ್ಚಿನ ಸಮಯ ನಿದ್ರೆ ಮಾಡಿ ಕಳೆಯುತ್ತೀರಿ. ಸಂಜೆಯ ಸಮಯದಲ್ಲಿ ನೀವು ನಿಮ್ಮ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿದ್ದೀರಿ ಎಂದು ಅನುಭವಿಸುತ್ತೀರಿ.

**ತುಲಾ** ಮಕ್ಕಳ ಜೊತೆಗಿನ ನಿಮ್ಮ ಕಠಿಣ ವರ್ತನೆ ನಿಮಗೆ ಸಿಟ್ಟುಬರಿಸಬಹುದು. ಇದು ನಿಮ್ಮ ನಡುವೆ ಕೇವಲ ಒಂದು ತಡೆಗೋಡೆಯನ್ನು ಮಾತ್ರ ಸೃಷ್ಟಿಸುವುದರಿಂದ ನೀವು ನಿಮ್ಮ ಮೇಲೆ ನಿಯಂತ್ರಣ ಹೊಂದಿರಬೇಕು.

**ವೃಶ್ಚಿಕ** ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ. ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ.

**ಧನಸ್ಸು** ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

**ಮಕರ** ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಸಾಲಗಾರರು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.

**ಕುಂಭ** ನಿಮ್ಮಲ್ಲಿ ಕೆಲವರು ಇದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು.

**ಮೀನ** ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

---

### • ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಆಶಾ ಕಾರ್ಯಕರ್ತೆಯರ ಮೂಲಕ ಮನೆ ಮನೆಗಳಲ್ಲಿ ಜಾಗೃತಿ ಮೂಡಿಸಬೇಕು

# ತಂಬಾಕು ದುಷ್ಪರಿಣಾಮಗಳ ಕುರಿತು ಹೆಚ್ಚು ಜಾಗೃತಿ ಮೂಡಿಸಿ: ನ್ಯಾ.ಎಂ.ವಿಜಯ್

• **ಉದಯವಾಹಿನಿ, ಚಿತ್ರದುರ್ಗ**

ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ಗ್ರಾಮೀಣ ಭಾಗದಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸುವಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಸೂಚನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕಾನೂನು ಸೇವಾ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಜಿಲ್ಲಾಸ್ಪತ್ರೆ ಹಾಗೂ ಮಲ್ನಾಡ್ ಕ್ಯಾನ್ಸರ್ ಆಸ್ಪತ್ರೆ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

**ವಿಶ್ವ ತಂಬಾಕು ರಹಿತ ದಿನಾಚರಣೆ**

ಶಿವಮೊಗ್ಗದ ಮಲ್ನಾಡು ಕ್ಯಾನ್ಸರ್ ಆಸ್ಪತ್ರೆಯ ಡಾ.ಸಚಿನ್ ಕೊಟ್ಟೂರು ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಪ್ರಾತ್ಯಕ್ಷಿಕೆ ನೀಡಿ, 1987 ರಲ್ಲಿ ವಿಶ್ವಸಂಸ್ಥೆ ಏಪ್ರಿಲ್ 7 ಅನ್ನು ಧೂಮಪಾನ ನಿಷೇಧ ದಿನವನ್ನಾಗಿ ಘೋಷಿಸಿತು. ನಂತರದಲ್ಲಿ ಮೇ 31ನ್ನು ತಂಬಾಕು ರಹಿತ ದಿನವಾಗಿ ಆಚರಿಸುತ್ತಾ ಬರಲಾಗುತ್ತಿದೆ. ತಂಬಾಕು ಉದ್ದಿಮೆದಾರರು ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಅನುಸರಿಸುತ್ತಿರುವ ತಂತ್ರಗಳನ್ನು ಬಯಲು ಮಾಡುವ ದೃಷ್ಟಿಯಿಂದ ವಿಶ್ವ ಸಂಸ್ಥೆ ''ಅನ್‌ಮಾಸ್ಕಿಂಗ್ ದಿ ಅಪೀಲ್'' ಎಂದು ಈ ಬಾರಿಯ ಘೋಷ ವಾಕ್ಯವನ್ನು ಹೆಸರಿಸಿದೆ. ಜಗತ್ತಿನಾದ್ಯಂತ 16,000ಕ್ಕೂ ಅಧಿಕ ಸ್ವಾದಗಳಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದೆ.

340 ಕೋಟಿ ಅಧಿಕ ಜನರು ಒಂದಲ್ಲಾ ಒಂದು ರೂಪದಲ್ಲಿ ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡುತ್ತಿದ್ದಾರೆ. 13 ರಿಂದ 15 ವರ್ಷದ ಒಳಗಿನ 3.70 ಕೋಟಿ ಮಕ್ಕಳು ಜಾಗತಿಕವಾಗಿ ತಂಬಾಕು ವ್ಯಸನಿಗಳಾಗಿ ಮಾರ್ಪಟ್ಟಿದ್ದಾರೆ.

ತಂಬಾಕು ಸೇವನೆಯಿಂದ ಶ್ವಾಸಕೋಶದ ಕ್ಯಾನ್ಸರ್, ಹೃದಯ ಹಾಗೂ ಶ್ವಾಸಕೋಶ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಉಂಟಾಗುತ್ತವೆ. ವಿಶ್ವದ್ಯಾಂತ ಪ್ರತಿ ವರ್ಷ 8.7 ಕೋಟಿ ಜನರು ಇವುಗಳಿಂದ ಮೃತಪಡುತ್ತಿದ್ದಾರೆ. 65,000 ಮಕ್ಕಳು ಸಾವನ್ನಪ್ಪುತ್ತಿದ್ದಾರೆ.

ಗರ್ಭಿಣಿಯರಲ್ಲಿ ತಂಬಾಕು ಸೇವನೆಯಿಂದ ಅವಧಿಗೆ ಮುನ್ನವೇ ಹೆರಿಗೆ, ಕಡಿಮೆ ತೂಕದ ಮಕ್ಕಳ ಜನನವಾಗುತ್ತಿದೆ. ಜನಿಸಿದ ಶಿಶುಗಳ ಬೆಳವಣಿಗೆ ತಂಬಾಕು ಮಾರಕವಾಗಿದೆ. ಭಾರತದಲ್ಲಿ ಅತ್ಯಧಿಕವಾಗಿ ತಂಬಾಕು ಉತ್ಪನ್ನಗಳನ್ನು ಬಳಸಲಾಗುತ್ತದೆ. ಇದು ಕ್ಯಾನ್ಸರ್ ರೋಗಗಳ ಸಂಖ್ಯೆ ಹೆಚ್ಚಾಗಲು ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ಇ-ಸಿಗರೇಟ್ ಉತ್ಪನ್ನಗಳು ಸಹ ಮಾರುಕಟ್ಟೆ ಬಂದಿವೆ. ಭಾರತದಲ್ಲಿ ಇವುಗಳಿಗೆ ನಿಷೇಧ ಹೇರಲಾಗಿದೆ. ಯುವಕರು ತಂಬಾಕು ವ್ಯಸನಗಳಿಗೆ ಬಲಿಯಾದಂತೆ ಎಚ್ಚರ ವಹಿಸಬೇಕು ಎಂದರು.



ಉದಯವಾಹಿನಿ ಚಿತ್ರ

**ಮನೆ ಮನೆಗಳಲ್ಲಿ ಜಾಗೃತಿ**

**ಗ್ರಾಮೀಣ ಭಾಗದ ಹೆಣ್ಣು ಮಕ್ಕಳು ತಂಬಾಕು ಸೇವನೆ ಪರಿಣಾಮದಿಂದ ಕ್ಯಾನ್ಸರ್‌ಗೆ ತುತ್ತಾಗಿ, ಕಿದ್ವಾಯಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೆಲವು ಪ್ರಕರಣಗಳಲ್ಲಿ ಪ್ರಾಣವನ್ನು ಕಳೆದುಕೊಂಡಿದ್ದಾರೆ. ಇದನ್ನು ತಪ್ಪಿಸಲು ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಆಶಾ ಕಾರ್ಯಕರ್ತೆಯರ ಮೂಲಕ ಮನೆ ಮನೆಗಳಲ್ಲಿ ಜಾಗೃತಿ ಮೂಡಿಸಬೇಕು. ಕೋಟ್ಪಾ ಕಾಯ್ದೆಯಡಿ ನಿಯಮ ಬಾಹಿರವಾಗಿ ತಂಬಾಕು ಮಾರಾಟ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ದಂಡ ವಸೂಲಿ ಮಾಡಬೇಕು ಎಂದು ನ್ಯಾ.ಎಂ.ವಿಜಯ್ ಹೇಳಿದರು.**

> **ತಂಬಾಕು ಉತ್ಪನ್ನಗಳ ಸೇವನೆಯಿಂದ ಬಾಯಿ ಕ್ಯಾನ್ಸರ್ ಪ್ರಕರಣಗಳು ಹೆಚ್ಚಾಗುತ್ತಿವೆ. ಚಿಕ್ಕವಯಸ್ಸಿನ ವಿದ್ಯಾರ್ಥಿಗಳು ಸಹ ಕ್ಯಾನ್ಸರ್‌ಗೆ ತುತ್ತಾಗುತ್ತಿರುವುದು ದುಃಖದ ಸಂಗತಿಯಾಗಿದೆ. ತಂಬಾಕು ಉತ್ಪನ್ನಗಳಲ್ಲಿ ಕಂಪನಿಗಳು ಬೆರಸುವ ರಾಸಾಯನಿಕಗಳ ಪರಿಣಾಮವಾಗಿ ತಂಬಾಕು ಸೇವೆನೆ ವ್ಯಸನವಾಗಿ ಪರಿಣಮಿಸುತ್ತಿದೆ. ಗುಟುಕಾ ಸೇವಿಸುವ ಯುವಕರಲ್ಲಿ ಆರಂಭದಲ್ಲಿ ನಾಲಿಗೆಯ ರುಚಿ ಗ್ರಹಣ ಸಂವೇದನೆ ಇಲ್ಲದಂತೆ ಆಗುತ್ತದೆ. ಆಹಾರ ಸೇವನೆಯು ದುಸ್ತರವಾಗುತ್ತದೆ. ಕೆಲ ವರ್ಷಗಳ ತರುವಾಯ ಇದು ಕ್ಯಾನ್ಸರ್ ಆಗಿ ಮಾರ್ಪಡುತ್ತದೆ. ಆರೋಗ್ಯ ಕಾರ್ಯಕರ್ತೆಯರು ಜನರಲ್ಲಿ ಈ ಕುರಿತು ಜಾಗೃತಿ ಮೂಡಿಸಬೇಕು. ತಂಬಾಕು ಸೇವನೆ ತ್ಯಜಿಸಿದರೆ ಆರೋಗ್ಯವಂತರಾಗಿ ಜೀವಿಸಬಹುದು**
>
> **-ಡಾ.ಎಸ್.ಪಿ.ರವೀಂದ್ರ, ಜಿಲ್ಲಾ ಶಸ್ತ್ರಚಿಕಿತ್ಸಕ**

**ನಗರದಲ್ಲಿ ಜಾಗೃತಿ ಜಾಥ:** ತಂಬಾಕು ರಹಿತ ದಿನದ ಅಂಗವಾಗಿ ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾಸ್ಪತ್ರೆ ಬಳಿ ಜಾಗೃತಿ ಜಾಥಕ್ಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಚಾಲನೆ ನೀಡಿದರು. ಜಾಥಾದಲ್ಲಿ ನರ್ಸಿಂಗ್ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಜಿಲ್ಲಾಸ್ಪತ್ರೆಯಿಂದ ಜೋಗಿಮಟ್ಟಿ ರಸ್ತೆ ಮಾರ್ಗವಾಗಿ ಜಾಥ ಜಿಲ್ಲಾ ಪಂಚಾಯಿತಿ ತಲುಪಿತು. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ವೇದಿಕೆ ಕಾರ್ಯಕ್ರಮದಲ್ಲಿ ಜಾಥದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ ಕಂಬಾಳಿ ಮಠ, ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎನ್.ಪ್ರಭುದೇವ, ಮಲ್ನಾಡು ಆಸ್ಪತ್ರೆಯ ಡಾ.ಅನಿಲ್.ಸಿ.ಪಿ ಸೇರಿದಂತೆ ಮತ್ತಿರರು ಉಪಸ್ಥಿರಿದ್ದರು.


---

## ವಯೋನಿವೃತ್ತಿ: ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್‌ಗೆ ಬೀಳ್ಕೊಡುಗೆ

• **ಉದಯವಾಹಿನಿ, ಚಿತ್ರದುರ್ಗ**

ವಯೋನಿವೃತ್ತಿ ಹೊಂದಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಅವರಿಗೆ ಆತ್ಮೀಯವಾಗಿ ಬೀಳ್ಕೊಡಲಾಯಿತು.

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ಬಿಳ್ಕೋಡುಗೆ ಸಮಾರಂಭ ನಡೆಯಿತು.



ಉದಯವಾಹಿನಿ ಚಿತ್ರ

**ಸತತ 30 ವರ್ಷಗಳ ಕಾಲ ಕಾರ್ಯ**

ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಅವರು ಆರೋಗ್ಯ ಇಲಾಖೆಯಲ್ಲಿ 30 ವರ್ಷಗಳ ಕಾಲ ಸತತ ಯಾವುದೇ ಅಡೆತಡೆ ಇಲ್ಲದೆ ಕಾರ್ಯನಿರ್ವಹಿಸಿ, ಆರೋಗ್ಯ ಇಲಾಖೆಯ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಯಶಸ್ವಿಯಾಗಲು, ಸಾರ್ವಜನಿಕ ವಲಯಗಳಲ್ಲಿ ಶಾಲೆ, ಕಾಲೇಜು, ಅಂಗನವಾಡಿ, ಸಮುದಾಯದಲ್ಲಿ ಆರೋಗ್ಯ ಶಿಕ್ಷಣ ನೀಡುವುದರ ಮುಖಾಂತರ ಪ್ರಚಾರ ಕಾರ್ಯ ಕೈಗೊಂಡು ವಾರ್ತಾ ಇಲಾಖೆಯೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಳ್ಳುವುದರ ಜೊತೆಗೆ ಆರೋಗ್ಯ ಶಿಕ್ಷಣ ನೀಡಿದ್ದನ್ನು ಮರೆಯುವಂತಿಲ್ಲ.

ಅವರ ಮಾರ್ಗದರ್ಶನ ಸದಾ ಆರೋಗ್ಯ ಇಲಾಖೆಯ ಮೇಲೆ ಇರಲಿ ಎಂಬುದು ನಮ್ಮಗಳ ಆಶಯ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಅಭಿಪ್ರಾಯವ್ಯಕ್ತಪಡಿಸಿದರು.

ಆರೋಗ್ಯ ಇಲಾಖೆಯ ವೈದ್ಯರಾದ ಡಾ.ನಾಗರಾಜ್, ತಾಲ್ಲೂಕು ಆರೋಗ್ಯ ಕಚೇರಿ ಸಿಬ್ಬಂದಿಗಳಾದ ಮಹಮ್ಮದ್ ಅಲಿ, ಅಬೀಬ್ ಉಲ್ಲಾ, ನಾಗರಾಜ, ನಾಗವೇಣಿ, ಪ್ರತಿಭಾ, ಜಿಲ್ಲಾ ಐಇಸಿ ವಿಭಾಗದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಟಿ.ಕೃಷ್ಣ ನಾಯ್ಕ್, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ಸುನಂದಾದೇವಿ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಮತ್ತಿತರರು ಇದ್ದರು.

---

## ಕಳಪೆ ಕಾಮಗಾರಿ: ಗುತ್ತಿಗೆದಾರರಿಗೆ ಬಿಲ್ ಪಾವತಿಸದಂತೆ ಕರವೇ ಮನವಿ

• **ಉದಯವಾಹಿನಿ, ಸೇಡಂ**

ತಾಲ್ಲೂಕಿನ ಇಮಡಾಪೂರ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆ ಹಿಂದುಗಡೆ ಜಿಪಂ ಇಲಾಖೆ ವತಿಯಿಂದ ಸಿ.ಸಿ.ರಸ್ತೆ ಕಾಮಗಾರಿ ಮಾಡಲಾಗಿದ್ದು ಸಲ್ಪ ಮಳೆಗೆ ಮೊಳಕಾಲು ಉದ್ದಕ್ಕೂ ಸಿಸಿ ರಸ್ತೆ ಮೇಲೆ ನೀರು ನಿಂತಿದ್ದು ಈ ಸಿಸಿ ರಸ್ತೆಯು ಸಂಪೂರ್ಣ ಕಳಪೆ ಕಾಮಗಾರಿ ಆಗಿದ್ದು ಗುತ್ತಿಗೆದಾರರಿಗೆ ಬಿಲ್ ಪಾವತಿಸದಂತೆ ಕರ್ನಾಟಕ ರಕ್ಷಣಾ ವೇದಿಕೆಯ ಗ್ರಾಮ ಘಟಕದ ಅಧ್ಯಕ್ಷರಾದ ರವಿಸಿಂಗ ರಜಪೂತ ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

ಜಿಲ್ಲಾ ಪಂಚಾಯಿತ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ರವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಅವರು ಸಿಸಿ ರಸ್ತೆಗೆ ಬೇಕಾಗಿರುವಂತಹ ಕಾಂಕ್ರೀಟ್ ಸಿಮೆಂಟ್ ಮರಳು ಸರಿಯಾಗಿ ಉಪಯೋಗಿಸದೆ ಇರುವುದರಿಂದ ಮನಸ್ಸಿಗೆ ಬಂದಂತೆ ಸಿಸಿ ರಸ್ತೆ ಮಾಡಿ ಕೈ ತೊಳೆದುಕೊಂಡಿದ್ದಾರೆ ಈ ಕಾಮಗಾರಿ ಕುರಿತು ಈಗಾಗಲೇ ಅಧಿಕಾರಿಗಳಿಗೆ ಗುತ್ತಿಗೆದಾರನಿಂದ ಸರಿಯಾಗಿ ಕೆಲಸ ತೆಗೆದುಕೊಳ್ಳಿ ಎಂದು ಸಂಬಂಧಪಟ್ಟ ಜ್ಯೂನಿಯರ ಇಂಜಿನಿಯರ ಅವರಿಗೆ ಹೇಳಿದರು ಯಾವುದೇ ರೀತಿ ಸ್ಪಂದನೆ ನೀಡಿಲ್ಲ, ಒಂದು ವೇಳೆ ಬಿಲ್ಲು ಪಾವತಿ ಮಾಡಿದರೆ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

---

## ಮನೆ ಬೀಗ ಮುರಿದು 5.72 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

• **ಉದಯವಾಹಿನಿ, ಕಲಬುರಗಿ**

ಮನೆ ಬೀಗ ಮುರಿದು 5.72 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಹೀರಾಪುರ ಕ್ರಾಸ್‌ನ ಜಿಡಿಎ ಲೇಔಟ್‌ನಲ್ಲಿ ನಡೆದಿದೆ. ವಿಜಯಲಕ್ಷ್ಮೀ ಬಾಗವಾಲೇ ಎಂಬುವವರ ಮನೆ ಬೀಗ ಮುರಿದು ಕಳ್ಳರು 50 ಸಾವಿರ ರೂ.ನಗದು, 50 ಗ್ರಾಂ.ಬೆಳ್ಳಿಯ ಲಕ್ಷ್ಮೀ ಮೂರ್ತಿ, 100 ಗ್ರಾಂ.ನ 2 ಜೊತೆ ಕಾಲಚೈನಾ, 20 ಗ್ರಾಂ.ನ 2 ಬೆಳ್ಳಿ ಉಂಗುರ, 8 ಸಾವಿರ ರೂ. ಮೌಲ್ಯದ 30 ಗ್ರಾಂ.ನ ಶಿವಲಿಂಗ ಮೂರ್ತಿ, 100 ಗ್ರಾಂ.ಹಾಲಗಡಗ ಸೇರಿ 30 ಸಾವಿರ ರೂ. ಮೌಲ್ಯದ 300 ಗ್ರಾಂ.ಬೆಳ್ಳಿ ಸಾಮಾನುಗಳು, ಚೈನ್, ಉಂಗುರ, ಬ್ರಾಸ್‌ಲೇಟ್, ಮುಗಿನ ನತ್ತು, ಮಂಗಳಸೂತ್ರ ಸೇರಿ 3.88 ಲಕ್ಷ ರೂ. ಮೌಲ್ಯದ ಬಂಗಾರದ ಆಭರಣ ಹಾಗೂ ತಾಯಿ ಅಂಬವ್ವ ಅವರ ಅಲಮಾರದಲ್ಲಿದ್ದ 1.84 ಲಕ್ಷ ರೂ.ಮೌಲ್ಯದ 46 ಗ್ರಾಂ.ಬಂಗಾರದ ಆಭರಣ ಸೇರಿ 5.72 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ.

---

## ವಿದ್ಯುತ್ ಸ್ಪರ್ಶ: 5 ಎಮ್ಮೆಗಳ ಸಾವು

• **ಉದಯವಾಹಿನಿ, ಸಿರುಗುಪ್ಪ**

ತಾಲ್ಲೂಕಿನ ಕರೂರು ಗ್ರಾಮದ ಗುಂಜಿನ ಹಳ್ಳದ ಬಳಿ ಹರಿದು ಬಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ 5 ಎಮ್ಮೆ ಸಾವನ್ನಪ್ಪಿದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ನಡೆದು 2 ದಿನಗಳಾಗಿದ್ದು ಕೆಪಿಟಿಸಿಎಲ್ ಸಿಬ್ಬಂದಿ, ಪೊಲೀಸ್ ಇಲಾಖೆ ಅಧಿಕಾರಿಗಳು ಭೇಟಿ ನೀಡಿದ್ದಾರೆ ಎಂದು ಸಾರ್ವಜನಿಕರು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗೋಸಬಾಳು ಗ್ರಾಮದ ರೈತ ಮೀಸೆ ಗಾದಿಲಿಂಗಪ್ಪನಿಗೆ ಸೇರಿದ ಎಮ್ಮೆ ಸೇರಿದಂತೆ ಇತರೆ ನಾಲ್ಕು ಎಮ್ಮೆಗಳು ಮರಣ ಹೊಂದಿದ್ದು ಮಾಲೀಕರ ಹೆಸರು ತಿಳಿದು ಬಂದಿಲ್ಲ. 5 ಎಮ್ಮೆಗಳ ಒಟ್ಟು ಮೌಲ್ಯ ಅಂದಾಜು ರೂ.3 ಲಕ್ಷ ಎಂದು ಅಂದಾಜಿಸಲಾಗಿದ್ದು, ಈ ಬಗ್ಗೆ ಸಿರಿಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ಜೈಲಿನಲ್ಲಿ ಮೊಬೈಲ್ ಜಾಮರ್ ಸಮಸ್ಯೆ ವಿರುದ್ಧ ಪ್ರತಿಭಟನೆ

• **ಉದಯವಾಹಿನಿ, ಬಳ್ಳಾರಿ**

ನಗರದ ಸೆಂಟ್ರಲ್ ಜೈಲ್‌ನಲ್ಲಿ ಇತ್ತೀಚಿಗೆ ಹೊಸದಾಗಿ ಅಳವಡಿಸಿರುವ ಮೊಬೈಲ್ ಜಾಮರ್‌ನಿಂದ ಆಗಿರುವ ಸಮಸ್ಯೆ ವಿರುದ್ಧ ಇಂದು ಬಿಜೆಪಿ ನಗರದ ಕನಕ ದುರ್ಗಮ್ಮ ದೇವಸ್ಥಾನದ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿ ಜೈಲಿನ ಮುಖ್ಯಸ್ಥರಿಗೆ ಮನವಿ ಸಲ್ಲಿಸಿದ್ದಾರೆ.


ಉದಯವಾಹಿನಿ ಚಿತ್ರ

ನಗರದ ಮಾಜಿ ಶಾಸಕ ಜಿ.ಸೋಮಶೇಖರ್ ರೆಡ್ಡಿ, ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ಪಾಲಿಕೆ ಸದಸ್ಯರಾದ ಹನುಮಂತ ಗುಡಿಗಂಟಿ, ಕೆ.ಹನುಮಂತಪ್ಪ, ನಗರ ಅಧ್ಯಕ್ಷ ವೆಂಕೇಶ್ ಮೊದಲಾದವರು ಜೈಲಿನ ಉಪ ಅಧೀಕ್ಷಕಿ ಅವರಿಗೆ ಮನವಿ ಸಲ್ಲಿಸಿ. ಜೈಲಿನಲ್ಲಿ ಹೊಸದಾದ ಜಾಮರ್ ಅಳವಡಿಕೆಯಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಣಿಜ್ಯ ವಹಿವಾಟುಗಳು ನಡೆಸಲು ಸಾರ್ವಜನಿಕರು ಕರೆ ಮಾಡಿದರೆ ಯಾವೊಂದು ಕರೆಗಳು ಹೋಗುತ್ತಿಲ್ಲ. ಯಾವುದೇ ಡಿಜಿಟಲ್ ಪೇಮೆಂಟ್ಸ್ ನಡೆಯುತ್ತಿಲ್ಲ, ಈ ಬಗ್ಗೆ ಈ ಮೊದಲು ದೂರು ನೀಡಿದರೂ ಯಾವುದೇ ಕ್ರಮ ಜರುಗಿಸಿಲ್ಲ. ಇದರಿಂದ ಸಾರ್ವಜನಿಕರಿಗೆ ಹಾಗೂ ವಾಣಿಜ್ಯದಾರರಿಗೆ ತೊಂದರೆಯಾಗುತ್ತಿದ್ದು ಸೂಕ್ತ ಕ್ರಮಕೈಗೊಳ್ಳಬೇಕೆಂದು ಮತ್ತೊಮ್ಮೆ ಮನವಿ ಮಾಡಿದ್ದಾರೆ.

---

## ಕಮಲ್ ಹಾಸನ್ ಹೇಳಿಕೆ ಖಂಡಿಸಿ ಕರವೇ ಪ್ರತಿಭಟನೆ

• **ಉದಯವಾಹಿನಿ, ಬಸವನಬಾಗೇವಾಡಿ**

ಕನ್ನಡ ಭಾಷೆಯು ತಮಿಳು ಭಾಷೆಯಿಂದ ಹುಟ್ಟಿದ್ದು ಎಂದು ನಟ ಕಮಲ್ ಹಾಸನ್ ನೀಡಿರವ ಹೇಳಿಕೆಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು. ಸರ್ಕಾರಿ ಐಬಿಯಿಂದ ಬಸವೇಶ್ವರ ಸರ್ಕಲ್‌ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಟಾಯರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಲಾಯಿತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಸಿಂದಗಿ ತಾಲ್ಲೂಕ ಕರವೇ ಅಧ್ಯಕ್ಷರಾದ ಶ್ರೀಕಾಂತ್ ಬಿಜಾಪುರ್ ಅವರು ಮಾತನಾಡಿ, ಕನ್ನಡ ಭಾಷೆಯು ತಮಿಳು ಭಾಷೆಯಿಂದ ಹುಟ್ಟಿದ್ದು ಎಂದು ಹೇಳಿಕೆ ನೀಡಿರುವ ಕಮಲ್ ಹಾಸನ್ ಕನ್ನಡ ಜನತೆಯ ಕ್ಷಮೆ ಕೋರಬೇಕು ಇಲ್ಲದಿದ್ದರೆ ಅವರ ಚಿತ್ರಗಳನ್ನು ಕರ್ನಾಟಕದಲ್ಲಿ ನಿರ್ಬಂಧಿಸುತ್ತೇವೆ ಎಂದರು.


ಉದಯವಾಹಿನಿ ಚಿತ್ರ

**ಚಿತ್ರ ಪ್ರದರ್ಶನ ಮಾಡಲು ಬಿಡುವುದಿಲ್ಲ**

ಕರವೇ ರಾಜ್ಯ ಸಂಚಾಲಕ ಸಂತೋಷ ಗೌಡ ಪಾಟೀಲ್ ಮಾತನಾಡಿ, ಕನ್ನಡ ಭಾಷೆ ಕನ್ನಡ ನೆಲ ಕನ್ನಡ ಜಲ ಕನ್ನಡ ತಾಯಿಗೆ ಅವಮಾನ ಮಾಡಿದ ಯಾವುದೇ ವ್ಯಕ್ತಿ ಇರಲಿ ರಾಜಕಾರಣಿ ಇರಲಿ ಚಿತ್ರನಟರೇ ಇರಲಿ ಅವರ ವಿರುದ್ಧ ಪ್ರತಿಭಟನೆ ಮಾಡುತ್ತೇವೆ. ಕಮಲ್ ಹಾಸನ್ ಅವರ ಚಿತ್ರವನ್ನು ಕರ್ನಾಟಕದ ಚಿತ್ರಮಂದಿರದಲ್ಲಿ ಪ್ರದರ್ಶನ ಮಾಡಲು ಬಿಡುವುದಿಲ್ಲ. ಅದೇ ರೀತಿ ಕನ್ನಡ ನಟಿ ರಮ್ಯಾ ಅವರು ಕರ್ನಾಟಕದಲ್ಲಿ ಇದ್ದುಕೊಂಡು ಕನ್ನಡ ಜನರಿಂದ ಮುಂದೆ ಬಂದು ಕನ್ನಡಕ್ಕೆ ಅವಮಾನ ಮಾಡಿದ್ದಾರೆ ಅವರ ಪ್ರಕೃತಿ ದಹನ ಮಾಡುತ್ತೇವೆ. ಕರ್ನಾಟಕದ ರಾಜಕಾರಣಿಗಳು ಇದರ ಬಗ್ಗೆ ಚಕಾರ ಎತ್ತುತ್ತಿಲ್ಲ ಅವರಿಗೆ ಕನ್ನಡ ಭಾಷೆಯ ಬಗ್ಗೆ ಅಭಿಮಾನವಿಲ್ಲ ಇದು ನಮ್ಮ ದುರಂತ ಎಂದರು.

ಕರವೇ ರಾಜ್ಯ ಪ್ರಧಾನ ಕಾರ್ಯದರ್ಶಿ ಅಶೋಕ್ ಹಾರಿವಾಳ ಮಾತನಾಡಿ, ಕನ್ನಡ ಭಾಷೆಗೆ ಅವಮಾನ ಮಾಡಿರುವ ಕಮಲ್ ಹಾಸನ್ ಕರ್ನಾಟಕ ಜನತೆಯಲ್ಲಿ ಕ್ಷಮೆ ಕೋರಬೇಕು. ಇಲ್ಲದಿದ್ದರೆ ಕರ್ನಾಟಕದಲ್ಲಿ ಅವರ ಚಿತ್ರಗಳನ್ನು ಪ್ರದರ್ಶನ ಮಾಡಲು ಬಿಡುವುದಿಲ್ಲ ಎಂದು ಎಚ್ಚರಿಸಿದರು.

---

## ಹಟ್ಟಿಯಲ್ಲಿ ಅಗ್ನಿ ಅವಘಡ ಕಂಬಳದ ಕೋಣಗಳು ಮೃತ್ಯು

• **ಉದಯವಾಹಿನಿ, ಉಡುಪಿ**

ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಹಟ್ಟಿಗೆ ಬೆಂಕಿ ತಗುಲಿ ಎರಡು ಕಂಬಳದ ಕೋಣಗಳು ಸುಟ್ಟುಕರಕಲಾದ ಘಟನೆ ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಕಾಂತಾವರ ಬೇಲಾಡಿ ಎಂಬಲ್ಲಿ ತಡರಾತ್ರಿ ಸಂಭವಿಸಿದೆ. ಬೇಲಾಡಿ ಅಶೋಕ್ ಶೆಟ್ಟಿಯವರಿಗೆ ಸೇರಿದ ಹಟ್ಟಿಯಲ್ಲಿ ಈ ದುರ್ಘಟನೆ ನಡೆದಿದೆ. ರಾತ್ರಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ ಉಂಟಾಗಿದ್ದು, ಬೆಂಕಿಯ ಕೆನ್ನಾಲೆಗೆ ಸಂಪೂರ್ಣ ಹಟ್ಟಿಗೆ ವ್ಯಾಪಿಸಿದೆ. ಇದರಿಂದ ಅಪ್ಪು ಮತ್ತು ತೋನ್ಸೆ ಹೆಸರಿನ ಎರಡು ಕಂಬಳ ಕೋಣಗಳು ಬೆಂಕಿಗಾಹುತಿಯಾಗಿವೆ.

---

## ಜನೌಷಧಿ ಕೇಂದ್ರ ಮುಚ್ಚುವ ಕ್ರಮ ಖಂಡಿಸಿ ಪ್ರತಿಭಟನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬಾದಾಮಿ**

ನಗರದ ಸರ್ಕಾರಿ ಆಸ್ಪತ್ರೆಯ ಮುಂದೆ ರಾಜ್ಯ ಸರ್ಕಾರವು ಜನ ಔಷಧಿ ಕೇಂದ್ರಗಳನ್ನು ಮುಚ್ಚಲು ಹೊರಟಿರುವುದನ್ನು ಖಂಡಿಸಿ ಬಿಜೆಪಿ ಪಕ್ಷದ ವತಿಯಿಂದ ಕಪ್ಪು ಬಟ್ಟೆ ಧರಿಸಿ ಮೌನ ಪ್ರತಿಭಟನೆಯನ್ನು ನಡೆಸಲಾಯಿತು.

ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿ ಸರಕಾರದ ಜನವಿರೋಧಿ ನೀತಿಯನ್ನು ಖಂಡಿಸಿದರು. ರಾಜ್ಯ ಸರ್ಕಾರ ಇದೆ ರೀತಿಯಾಗಿ ತನ್ನ ಧೋರಣೆಯನ್ನು ಮುಂದುವರಿಸಿದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟವನ್ನು ರಾಜ್ಯಾದ್ಯಂತ ಕೈಗೊಳ್ಳಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ನಾಗರಾಜ ಕಾಚಟ್ಟಿ, ಮುಖಂಡರಾದ ಶಿವನಗೌಡ ಸುಂಕದ, ಮುತ್ತು ಉಳ್ಳಾಗಡ್ಡಿ, ಹುಚ್ಚಪ್ಪ ಬೆಳಗುಂಡಿ, ಹೊನ್ನಯ್ಯ ಹಿರೇಮಠ, ಭೀಮನಗೌಡ ಪಾಟೀಲ, ಮಾಗುಂಡಪ್ಪ ನೋಟಗಾರ ಹಾಜರಿದ್ದರು.

---

## ಕುಡಿಯುವ ನೀರು ಪೂರೈಕೆಗೆ ಸ್ಥಳೀಯರ ಮನವಿ

• **ಉದಯವಾಹಿನಿ, ಹುಮನಾಬಾದ್**

ಕಳೆದ ಅನೇಕ ದಿನಗಳಿಂದ ನೀರು ಪೂರೈಕೆಯಾಗದ ಹಿನ್ನಲೆ ಪಟ್ಟಣದ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ವಾರ್ಡ್ ಸಂಖ್ಯೆ 16ರ ಜೇರಪೇಟ್ ಬಡಾವಣೆ ನಿವಾಸಿಗಳು ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಕುಡಿಯುವ ನೀರು ಪೂರೈಕೆಗೆ ಮನವಿ ಮಾಡಿದರು.

ಜೇರಪೇಟ್ ಬಡಾವಣೆ ನಿವಾಸಿಗಳು ಮಾತನಾಡಿ, ಕಳೆದ ಸಾಕಷ್ಟು ದಿನಗಳಿಂದ ನಮ್ಮ ಬಡಾವಣಗೆ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ ಇದರಿಂದ ಸಾಕಷ್ಟು ತೊಂದರೆ ಅನುಭವಿಸುವಂತ ವಾತಾವರಣ ನಿರ್ಮಾಣವಾಗಿದೆ. ಹೀಗಾಗಿ ನಮ್ಮ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲಗೆ ಮನವಿ ಮಾಡಿದರು. ಬಳಿಕ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಪುರಸಭೆ ಮುಖ್ಯಾಧಿಕಾರಿ ಮೀನಕುಮಾರಿ ಬೋರಳಕರ್ ಹಾಗೂ ಪುರಸಭೆ ಸದಸ್ಯ ಅಫ್ಸರಮಿಯ ಜತೆಗೆ ಸಮಾಲೋಚನೆ ನಡೆಸಿ ಪಟ್ಟಣದ ನಿವಾಸಿಗಳಿಗೆ ತೊಂದರೆಯಾಗದಂತೆ ಸೂಕ್ತ ಸಮಯಕ್ಕೆ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದರು. ಮುಖ್ಯಾಧಿಕಾರಿ ಮೀನಾಕುಮಾರಿ ಬೋರಾಳಕರ್ ಮಾತನಾಡಿ, ಬಿರುಗಾಳಿ ಸಹಿತ ಸತತ ಸುರಿಯುತ್ತಿರುವ ಮಳೆಗೆ ಬಹುತೇಕ ಕಡೆಗಳಲ್ಲಿ ವಿದ್ಯುತ್ ಕಡಿತವಾಗಿದೆ.


ಉದಯವಾಹಿನಿ ಚಿತ್ರ

ಇದರಿಂದಾಗಿ ಕುಡಿಯುವ ನೀರು ಪೂರೈಕೆ ಮಾಡಲು ತೊಂದರೆ ಆಗುತ್ತಿದೆ. ಪುರಸಭೆ ಸಿಬ್ಬಂದಿಗಳಿಗೆ ಸೂಚನೆ ನೀಡಿ ಎಲ್ಲವೂ ಸರಿಪಡಿಸಿಕೊಂಡು ನೀರು ಪೂರೈಕೆಗೆ ಪ್ರಯತ್ನ ಮಾಡಲಾಗುವುದು ಎಂದರು.

---

## ಮಟ್ಕಾ ದಂಧೆ: ಇಬ್ಬರ ಬಂಧನ

• **ಉದಯವಾಹಿನಿ, ಉಡುಪಿ**


ಉದಯವಾಹಿನಿ ಚಿತ್ರ

ಮೇ 31 ರಂದು ಕುರ್ಕಾಲು ಗ್ರಾಮದ ಶಂಕರಪುರದ ಅಶ್ವತಕಟ್ಟೆ ಬಸ್ ನಿಲ್ದಾಣದ ಬಳಿ ಮಟ್ಕಾ ಚೀಟಿ ಬರೆಯುತ್ತಿದ್ದ ವಿಠಲ ದೇವಾಡಿಗ ಎಂಬಾತನನ್ನು ಬಂಧಿಸಿದ್ದು, ಆತನ ವಶದಲ್ಲಿ ಮಟ್ಕಾ ಸಂಖ್ಯೆ ಬರೆದಿರುವ ಚೀಟಿ 1, ನಗದು ಹಣ ರೂಪಾಯಿ 1,200/- ಮತ್ತು ಬಾಲ್ ಪೆನ್ -1ನ್ನು ಜಪ್ತಿ ಮಾಡಲಾಗಿರುತ್ತದೆ.

ಮಟ್ಕಾ ಚೀಟಿ ನೀಡುವ ಬಗ್ಗೆ ವಿಚಾರಿಸಲಾಗಿ ಜೂಜಾಟದ ಬುಕ್ಕಿ ಉಡುಪಿಯ ಲಿಯೋ ಕರ್ನೆಲಿಯೋ ತಿಳಿಸಿದಂತೆ, ನಾನು ಮಟ್ಕಾ ಜುಗಾರಿ ಹಣ ಸಾರ್ವಜನಿಕರಿಂದ ಕಾನೂನು ಬಾಹಿರವಾಗಿ ಸಂಗ್ರಹಿಸುತ್ತಿರುವುದಾಗಿ ಒಪ್ಪಿಕೊಂಡಿರುತ್ತಾನೆ. ವಿಠಲ ದೇವಾಡಿಗ ಮತ್ತು ಲಿಯೋ ಕರ್ನೇಲಿಯೋ ಇವರುಗಳು ಸಂಘಟಿತರಾಗಿ ಕಾನೂನು ಬಾಹಿರವಾಗಿ ಮಟ್ಕಾ ಜುಗಾರಿ ಆಟದ ಬಗ್ಗೆ ಸಾರ್ವಜನಿಕರನ್ನು ನಂಬಿಸಿ ಮೋಸ ಮಾಡಿ ಅವರಿಂದ ಹಣ ಸಂಗ್ರಹ ಮಾಡುತ್ತಿದ್ದು, ಇವರುಗಳ ವಿರುದ್ಧ ಶಿರ್ವ ಪೊಲೀಸ್ ಠಾಣೆಯಲ್ಲಿ ಅಪರಾಧ ಪ್ರಕರಣ ದಾಖಲಾಗಿರುತ್ತದೆ.

ಮೊದಲ ಆರೋಪಿ ವಿಠಲ ದೇವಾಡಿಗ ವಿರುದ್ಧ ಈಗಾಗಲೇ 12 ಪ್ರಕರಣಗಳು ದಾಖಲಾಗಿರುತ್ತದೆ. ಎರಡನೇ ಆರೋಪಿಯಾದ ಲಿಯೋ ಕರ್ನೇಲಿಯೋ ವಿರುದ್ಧ ಈಗಾಗಲೇ ಸುಮಾರು 34 ಪ್ರಕರಣಗಳು ದಾಖಲಾಗಿರುತ್ತದೆ. ಇಬ್ಬರು ಆರೋಪಿಗಳನ್ನು ದಸ್ತಗಿರಿ ಮಾಡಲಾಗಿದ್ದು ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

---

### • ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ 15 ಕೋಟಿ ರೂ. ವೆಚ್ಚದಲ್ಲಿ ಸರಕು ಶೆಡ್ ನಿರ್ಮಾಣ: ವಿ. ಸೋಮಣ್ಣ

# ಸರಕು ಶೆಡ್ ನಿರ್ಮಾಣದಿಂದ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ

• **ಉದಯವಾಹಿನಿ, ಬೀದರ**

ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ 15 ಕೋಟಿ ರೂ. ವೆಚ್ಚದಲ್ಲಿ ಸರಕು ಶೆಡ್ ನಿರ್ಮಾಣವಾಗುತ್ತಿದ್ದು, ಈ ನಿಲ್ದಾಣವು ಹೊಸ ಸರಕು ಶೆಡ್‌ಗೆ ಸೂಕ್ತವಾಗಿದ್ದು, ಇದು ಈ ಪ್ರದೇಶದಲ್ಲಿ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ ನೀಡಲಿದೆ. ಮುಂದಿನ 50 ವರ್ಷಗಳ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಹೊಸ ಸರಕು ಶೆಡ್‌ನ್ನು ನಿರ್ಮಿಸಲಾಗುತ್ತಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಹೇಳಿದರು.

ಅವರು ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಶೆಡ್ ನಿರ್ಮಾಣ ಮತ್ತು ಭಾಲ್ಕಿ ಮತ್ತು ಕಲಗುಪುರ ರೈಲ್ವೆ ನಿಲ್ದಾಣಗಳ ನಡುವಿನ ಲೆವೆಲ್ ಕ್ರಾಸಿಂಗ್ ಸಂಖ್ಯೆ.71 ರ ಬದಲಿಗೆ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ರಸ್ತೆ ಸಾರಿಗೆಗೆ ಹೋಲಿಸಿದರೆ ರೈಲ್ವೆ ಮೂಲಕ ಸಾರಿಗೆ ವೆಚ್ಚ ಕಡಿಮೆಯಾಗಿದ್ದು, ಸಣ್ಣ ಕೈಗಾರಿಕೆಗಳಿಗೆ ತಮ್ಮ ಉತ್ಪನ್ನಗಳನ್ನು ವಿವಿಧ ಸ್ಥಳಗಳಿಗೆ ಸಾಗಿಸಲು ಸಹಾಯಕವಾಗಿದೆ ಎಂದರು. ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಮಾರ್ಗದರ್ಶನ ಮತ್ತು ದೂರದೃಷ್ಟಿಯ ನಾಯಕತ್ವದಲ್ಲಿ ಕರ್ನಾಟಕ ರಾಜ್ಯದಲ್ಲಿ ರೈಲ್ವೆ ಅಭಿವೃದ್ಧಿ ಕಾರ್ಯಗಳು ವೇಗವಾಗಿ ಪ್ರಗತಿಯಲ್ಲಿವೆ ಎಂದರು. ಇದರ ಜೊತೆಗೆ, ಭಾಲ್ಕಿಯಲ್ಲಿ ಲೆವೆಲ್ ಕ್ರಾಸಿಂಗ್ ಸಂಖ್ಯೆ 71 ರ ಬದಲಿಗೆ 10.85 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಲಾಗಿದೆ. ಈ ಕೆಳಸೇತುವೆ ಕಾಮಗಾರಿ ಪೂರ್ಣಗೊಂಡ ನಂತರ, ವಾಹನ ಸಂಚಾರಕ್ಕೆ ಸುಗಮ ಮತ್ತು ಸುರಕ್ಷತೆ ಹೆಚ್ಚಿಸಲಿದೆ ಎಂದರು.

> **ಹೊಸ ಸರಕು ಶೆಡ್ ಸರಕು ಗ್ರಾಹಕರಿಗೆ ಸೂಕ್ತವಾಗಿದ್ದು, ಇದು ಈ ಪ್ರದೇಶದಲ್ಲಿ ಸರಕು ಲೋಡಿಂಗ್‌ಗೆ ಮತ್ತಷ್ಟು ಉತ್ತೇಜನ ನೀಡಲಿದೆ. ಈ ಎರಡೂ ಯೋಜನೆಗಳು ಈ ಪ್ರದೇಶದ ರೈಲ್ವೆ ಮೂಲಸೌಕರ್ಯದ ಬೆಳವಣಿಗೆಗೆ ಕೊಡುಗೆ ನೀಡಲಿವೆ ಎಂದರು. ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ರಾಜ್ಯದಲ್ಲಿ ರೈಲ್ವೆ ನಿಲ್ದಾಣಗಳ ಪುನರಾಭಿವೃದ್ಧಿ ಸೇರಿದಂತೆ ಹಲವಾರು ರೈಲ್ವೆ ಅಭಿವೃದ್ಧಿ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ ಅವರು, ಭಾಲ್ಕಿ ಮತ್ತು ಹುಮನಾಬಾದ್ ನಿಲ್ದಾಣಗಳ ಪುನರಾಭಿವೃದ್ಧಿಗೆ ಸಹ ಒಪ್ಪಿಗೆ ನೀಡುವಂತೆ ಗೌರವಾನ್ವಿತ ರಾಜ್ಯ ಸಚಿವರಿಗೆ ಮನವಿ ಮಾಡಿದರು**
>
> **-ಸಾಗರ್ ಈಶ್ವರ್ ಖಂಡ್ರೆ, ಬೀದರ ಸಂಸದ**


ಉದಯವಾಹಿನಿ ಚಿತ್ರ

> **ಗೌರವಾನ್ವಿತ ರೈಲ್ವೆ ರಾಜ್ಯ ಸಚಿವರು ಖಾನಾಪುರದಲ್ಲಿ ಸರಕು ಶೆಡ್ ಮತ್ತು ಎಲ್‌ಸಿ ಗೇಟ್ ಸಂಖ್ಯೆ 71 ರ ಬದಲಿಗೆ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡುವುದು ಸಂತೋಷದ ಸಂದರ್ಭವಾಗಿದೆ ಎಂದರು. ಇದು ಈ ಪ್ರದೇಶದಲ್ಲಿ ರೈಲ್ವೆ ಮೂಲಸೌಕರ್ಯವನ್ನು ವಿಸ್ತರಿಸುವಲ್ಲಿ ಮತ್ತು ಸುರಕ್ಷತೆಯನ್ನು ಹೆಚ್ಚಿಸುವಲ್ಲಿ ಹೊಸ ಚೈತನ್ಯವನ್ನು ತರುತ್ತದೆ**
>
> **-ಅರವಿಂದ್ ಕುಮಾರ್ ಜೈನ್**

> **ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಶೆಡ್ ಮತ್ತು ಭಾಲ್ಕಿಯಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣಕ್ಕಾಗಿ ರೈಲ್ವೆ ಸಚಿವಾಲಯ ಈ ಉಪಕ್ರಮ ಕೈಗೊಂಡಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು. ಬೀದರ್‌ನಿಂದ ತಿರುಪತಿ, ಅಜ್ಮೀರ್, ಮುಂಬೈ ಮತ್ತು ಬೆಂಗಳೂರಿಗೆ ನೇರ ರೈಲು ಸಂಪರ್ಕಕ್ಕಾಗಿ ಅವರು ವಿನಂತಿಸಿದರು -ರಹೀಂ ಖಾನ್**
>
> **ಪೌರಾಡಳಿತ ಹಾಗೂ ಹಜ್ ಸಚಿವ**

**ಕೆಳಸೇತುವೆ ನಿರ್ಮಾಣಕ್ಕೆ ಶಂಕು ಸ್ಥಾಪನೆ**

ಬೀದರ್ ರೈಲ್ವೆ ನಿಲ್ದಾಣದ ಪುನರಾಭಿವೃದ್ಧಿಯನ್ನು 24.35 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿವೆ ಎಂದು ತಿಳಿಸಿದರು. ಯಾದಗಿರಿ ನಿಲ್ದಾಣವನ್ನು 26.12 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದರೆ, ರಾಯಚೂರು ನಿಲ್ದಾಣದ ಪುನರಾಭಿವೃದ್ಧಿಯನ್ನು 21.71 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿದೆ ಎಂದರು.

ಇವುಗಳ ಜೊತೆಗೆ ಕರ್ನಾಟಕ ರಾಜ್ಯದಲ್ಲಿ ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ಒಟ್ಟು 58 ರೈಲ್ವೆ ನಿಲ್ದಾಣಗಳನ್ನು ಪುನರಾಭಿವೃದ್ಧಿಪಡಿಸಲಾಗುತ್ತಿದೆ. ದಕ್ಷಿಣ ಮಧ್ಯ ರೈಲ್ವೆ ವ್ಯಾಪ್ತಿಯಲ್ಲಿ 1465 ರೈಲ್ವೆ ಕಿಲೋಮೀಟರ್‌ಗಳಲ್ಲಿ 'ಕವಚ' ರೈಲು ಸಂರಕ್ಷಣಾ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ಮುಂದಿನ ಹಂತದಲ್ಲಿ ಇದರ ವಿಸ್ತರಣೆಯನ್ನು ಕೈಗೊಳ್ಳಲಾಗುತ್ತಿದೆ ಎಂದರು. 2025-26ನೇ ಆರ್ಥಿಕ ವರ್ಷಕ್ಕೆ ಕರ್ನಾಟಕ ರಾಜ್ಯಕ್ಕೆ 7,654 ಕೋಟಿ ರೂ. ರೈಲ್ವೆ ಬಜೆಟ್ ಮೀಸಲಿಡಲಾಗಿದೆ ಎಂದು ರೈಲ್ವೆ ರಾಜ್ಯ ಸಚಿವರು ತಿಳಿಸಿದರು.

# ಗಾಜಾ ನೆರವು ಕೇಂದ್ರದ ಬಳಿ ಇಸ್ರೇಲ್ ಟ್ಯಾಂಕ್‌ಗಳಿಂದ ಗುಂಡಿನ ದಾಳಿ

## ಇಸ್ರೇಲ್ ಯುದ್ಧ ಟ್ಯಾಂಕ್‌ಗಳು ನಡೆಸಿದ ಗುಂಡಿನ ದಾಳಿಯಲ್ಲಿ 26 ಪ್ಯಾಲೆಸ್ಟೈನಿಯನ್ನರ ಸಾವು

**ಗಾಜಾ:** ದಕ್ಷಿಣ ಗಾಜಾದ ರಫಾ ಪ್ರದೇಶದಲ್ಲಿ ಅಮೆರಿಕ ಬೆಂಬಲಿತ ನೆರವು ವಿತರಣಾ ಕೇಂದ್ರದ ಬಳಿ ಇಸ್ರೇಲ್ ಪಡೆಗಳು ನಡೆಸಿದ ಗುಂಡಿನ ದಾಳಿಯಲ್ಲಿ, ಕನಿಷ್ಠ 26 ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿರುವುದಲ್ಲದೇ 80ಕ್ಕೂ ಹೆಚ್ಚು ಜನ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ. ಭಾನುವಾರ ಗಾಜಾ ಹ್ಯುಮಾನಿಟೇರಿಯನ್ ಫೌಂಡೇಶನ್ ನಡೆಸುತ್ತಿರುವ ನೆರವು ಕೇಂದ್ರದ ಬಳಿಯ ಅಲ್-ಅಲಮ್ ವೃತ್ತದ ಬಳಿ, ಆಹಾರ ಪೊಟ್ಟಣಗಳನ್ನು ಸ್ವೀಕರಿಸಲು ಸಾವಿರಾರು ಪ್ಯಾಲೆಸ್ಟೀನಿಯನ್ನರು ಜಮಾಯಿಸಿದ್ದರು. ಈ ವೇಳೆ ಇಸ್ರೇಲಿ ಟ್ಯಾಂಕ್‌ಗಳು ಜನಸಮೂಹದ ಮೇಲೆ ಗುಂಡು ಹಾರಿಸಿದವು ಎನ್ನಲಾಗಿದೆ. ಇಸ್ರೇಲ್ ಗಾಜಾದ ಜನರಿಗಾಗಿ ಸೀಮಿತ ನೆರವು ನೀಡಲು ಒಪ್ಪಿಕೊಂಡಿದೆ. ಹಮಾಸ್ ಕದನ ವಿರಾಮ ಪ್ರಸ್ತಾಪವನ್ನು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ ಎಂದು ಅಮೆರಿಕ ಹೇಳಿಕೆ ನೀಡಿದ ಕೆಲವೇ ಸಮಯದಲ್ಲಿ, ಗಾಜಾದ ರಫಾ ಬಳಿ ಇರುವ ನೆರವು ಕೇಂದ್ರದ ಮೇಲೆ ಇಸ್ರೇಲ್ ದಾಳಿ ನಡೆಸಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ. ಈ ದಾಳಿಯಲ್ಲಿ ಕನಿಷ್ಠ 26 ಜನ ಸ್ಥಳದಲ್ಲೇ ಅಸುನೀಗಿದ್ದು, ಗಾಯಗೊಂಡ 80ಕ್ಕೂ ಹೆಚ್ಚು ಜನರನ್ನು, ಖಾನ್ ಯೂನಿಸ್‌ನಲ್ಲಿರುವ ಕೆಲವೇ ಕೆಲವು ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳಲ್ಲಿ ಒಂದಾದ ನಾಸರ್ ಆಸ್ಪತ್ರೆಗೆ ಸೇರಿಸಲಾಗಿದೆ.



**ಸಾಮೂಹಿಕ ಸಾವಿನ ಬಲೆಗಳಾಗಿ ಪರಿವರ್ತನೆ**

**ಹಮಾಸ್ ಕಿಡಿ:** ಇನ್ನು ರಫಾದ ನೆರವು ಕೇಂದ್ರದ ಮೇಲೆ ಇಸ್ರೇಲ್ ನಡೆಸಿದ ದಾಳಿಯನ್ನು ಖಂಡಿಸಿರುವ ಹಮಾಸ್, ಹಸಿದ ನಾಗರಿಕರ ಮೇಲೆ ಅಮಾನವೀಯವಾಗಿ ನಡೆಸಿರುವ ಗುಂಡಿನ ದಾಳಿ ಯಾವುದೇ ಹತ್ಯಾಕಾಂಡಕ್ಕಿಂತ ಕಡಿಮೆ ಇಲ್ಲ ಎಂದು ಕಿಡಿಕಾರಿದೆ. ಅಲ್ಲದೇ ರಫಾದಲ್ಲಿರುವ ಮಾನವೀಯ ಪರಿಹಾರ ಕೇಂದ್ರಗಳು, ಸಾಮೂಹಿಕ ಸಾವಿನ ಬಲೆಗಳಾಗಿ ಪರಿವರ್ತನೆಗೊಂಡಿವೆ ಎಂದು ಹಮಾಸ್ ವಾಗ್ದಾಳಿ ನಡೆಸಿದೆ. ಯುದ್ಧದಿಂದ ಹಾನಿಗೊಳಗಾದ ಗಾಜಾದಲ್ಲಿನ ಮಾನವೀಯ ಬಿಕ್ಕಟ್ಟಿನ ಕಾರಣಕ್ಕೆ, ಇಸ್ರೇಲ್ ಅಂತಾರಾಷ್ಟ್ರೀಯ ಟೀಕೆಗಳನ್ನು ಎದುರಿಸುತ್ತಿದೆ.

ಕಳೆದ ಮಾರ್ಚ್‌ನಲ್ಲಿ ಘೋಷಿಸಿದ್ದ ಸಂಕ್ಷಿಪ್ತ ಕದನ ವಿರಾಮ ಒಪ್ಪಂದದಲ್ಲಿ ಬಿರುಕು ಮೂಡಿದ ಬಳಿಕ, ಇಸ್ರೇಲ್ ಗಾಜಾದ ಮೇಲೆ ತೀವ್ರವಾದ ಮಿಲಿಟರಿ ದಿಗ್ಬಂಧನ ವಿಧಿಸಿದೆ. ಈ ದಿಗ್ಬಂಧನದ ಕಾರಣಕ್ಕೆ ಗಾಜದಲ್ಲಿ ಹಸಿವು ಮತ್ತು ಆರೋಗ್ಯ ನೆರವು ದೊರೆಯದೇ ಅಪಾರ ಪ್ರಮಾಣದಲ್ಲಿ ಮಕ್ಕಳು ಸಾವನ್ನಪ್ಪಲಿದ್ದಾರೆ ಎಂದು ವಿಶ್ವಸಂಸ್ಥೆ ಎಚ್ಚರಿಸಿದೆ.

**ಜಿಎಚ್‌ಎಫ್‌ಗೆ ವಿಶ್ವಸಂಸ್ಥೆ ವಿರೋಧ:** ಇಸ್ರೇಲ್, ಯುನೈಟೆಡ್ ಸ್ಟೇಟ್ಸ್ ಬೆಂಬಲಿತ ಖಾಸಗಿ ಸಂಸ್ಥೆಯಾದ ಜಿಎಚ್‌ಎಫ್, ದಿಗ್ಬಂಧನವನ್ನು ಭಾಗಶಃ ತೆಗೆದುಹಾಕಿದ ನಂತರ ಅಂದರೆ ಕಳೆದ ಮೇ 26ರಿಂದ ಗಾಜಾ ಪಟ್ಟಿಯಲ್ಲಿ ಆಹಾರವನ್ನು ವಿತರಿಸುವ ಕಾರ್ಯದಲ್ಲಿ ನಿರತವಾಗಿದೆ. ಇಲ್ಲಿಯವರೆಗೆ ಸುಮಾರು 2.1 ಮಿಲಿಯನ್ ಆಹಾರ ಪೊಟ್ಟಣಗಳನ್ನು ವಿತರಿಸಿರುವುದಾಗಿ ಜಿಎಚ್‌ಎಫ್ ಹೇಳಿಕೊಂಡಿದೆ.

### ವಿಫಲವಾದ ಮಾತುಕತೆ

**ಗಾಜಾ ಪಟ್ಟಿಯಲ್ಲಿ ಶಾಂತಿ ಸ್ಥಾಪನೆಯ ಸಂಬಂಧ ನಡೆಯುತ್ತಿರುವ ಮಾತುಕತೆಗಳೂ ಯಾವುದೇ ಪ್ರಗತಿ ಕಾಣುತ್ತಿಲ್ಲ. ಇಸ್ರೇಲ್ ಮತ್ತು ಅಮೆರಿಕ ಹಮಾಸ್ ವಶದಲ್ಲಿರುವ ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆಗೆ ಒತ್ತಾಯಿಸುತ್ತಿದ್ದರೆ, ಹಮಾಸ್ ಗಾಜಾ ಪಟ್ಟಿಯಿಂದ ಇಸ್ರೇಲಿ ಪಡೆಗಳ ಸಂಪೂರ್ಣ ವಾಪಸಾತಿಗೆ ಪಟ್ಟು ಹಿಡಿದಿದೆ. ಈ ಹಗ್ಗಜಗ್ಗಾಟದಿಂದಾಗಿ ಗಾಜಾದಲ್ಲಿ ಮಾನವೀಯ ಬಿಕ್ಕಟ್ಟು ಹೆಚ್ಚುತ್ತಿದ್ದು, ಇದಕ್ಕೆ ನೆರವು ಕೇಂದ್ರದ ಮೇಲೆ ಇಸ್ರೇಲಿ ಟ್ಯಾಂಕ್‌ಗಳು ನಡೆಸಿದ ಗುಂಡಿನ ದಾಳಿ ತಾಜಾ ಉದಾಹರಣೆಯಾಗಿದೆ.**

### ಸಂಘಟನೆಗಳು ಅಸಮಾಧಾನ ಹೊರಹಾಕಿವೆ

**ವಿಶ್ವಸಂಸ್ಥೆಯ ನೆರವು ಸಂಸ್ಥೆಗಳು ಜಿಎಚ್‌ಎಫ್‌ನ ನೆರವು ಕಾರ್ಯವಿಧಾನವನ್ನು ಟೀಕಿಸಿವೆ. ಇದು ಮಾನವೀಯ ತತ್ವಗಳನ್ನು ಉಲ್ಲಂಘಿಸುತ್ತದೆ, ಪ್ಯಾಲೆಸ್ಟೀನಿಯನ್ನರ ಅಪಾಯಗಳನ್ನು ಹೆಚ್ಚಿಸುತ್ತದೆ ಎಂದು ಈ ಸಂಘಟನೆಗಳು ಅಸಮಾಧಾನ ಹೊರಹಾಕಿವೆ. ಗಾಜಾಗೆ ಹೆಚ್ಚಿನ ಪ್ರಮಾಣದ ಆಹಾರ ಸಹಾಯವನ್ನು ತ್ವರಿತವಾಗಿ ತಲುಪಿಸಲು, ಶ್ವಸಂಸ್ಥೆಯ ವಿಶ್ವ ಆಹಾರ ಕಾರ್ಯಕ್ರಮವು ಇಸ್ರೇಲ್‌ಗೆ ಕರೆ ನೀಡಿದೆ. ಆದರೆ ವಿಶ್ವಸಂಸ್ಥೆ, ಇತರ ಪ್ರಮುಖ ಜಾಗತಿಕ ನೆರವು ಗುಂಪುಗಳು, ಜಿಎಚ್‌ಎಫ್‌ನೊಂದಿಗೆ ಸಹಕರಿಸಲು ನಿರಾಕರಿಸಿವೆ. ಇದು ಮೂಲಭೂತ ಮಾನವೀಯ ತತ್ವಗಳನ್ನು ಉಲ್ಲಂಘಿಸುತ್ತದೆ, ಇಸ್ರೇಲಿ ಮಿಲಿಟರಿ ಉದ್ದೇಶಗಳನ್ನು ಪೂರೈಸಲು ರಚಿಸಲಾಗಿರುವ ಸಂಘಟನೆ ಎಂದು ಗಂಭೀರ ಆರೋಪ ಮಾಡಿವೆ.**

# ಗೋರಖ್ ಪುರದಲ್ಲಿ ಹಕ್ಕಿ ಜ್ವರ ಪತ್ತೆ

**ಗೋರಖ್ ಪುರ:** ಉತ್ತರ ಪ್ರದೇಶದ ಗೋರಖ್ ಪುರ ಜಿಲ್ಲೆಯ ಐದು ಪ್ರದೇಶಗಳಲ್ಲಿ ಹಕ್ಕಿ ಜ್ವರ ಕಾಣಿಸಿಕೊಂಡಿದೆ. ಜಿಲ್ಲಾ ಆಡಳಿತವು ನಗರದ ಎಲ್ಲಾ ಜೀವಂತ ಪಕ್ಷಿ ಮಾರುಕಟ್ಟೆಗಳನ್ನು 21 ದಿನಗಳವರೆಗೆ ತಕ್ಷಣ ಮುಚ್ಚಲು ಮತ್ತು ಸೋಂಕಿತ ಪ್ರದೇಶಗಳಲ್ಲಿ, ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪಶುಗಳ ಕೊಲ್ಲುವ ಕಾರ್ಯಾಚರಣೆಯನ್ನು ಪ್ರಾರಂಭಿಸಲು ಆದೇಶಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭೋಪಾಲ್‌ನಲ್ಲಿರುವ ರಾಷ್ಟ್ರೀಯ ಹೈ ಸೆಕ್ಯುರಿಟಿ ಪ್ರಾಣಿ ರೋಗಗಳ ಸಂಸ್ಥೆ ಕೋಳಿಯಲ್ಲಿ ಏವಿಯನ್ ಇನ್‌ಫ್ಲುಯೆನ್ಸ ಸೋಂಕು ಇರುವಿಕೆಯನ್ನು ದೃಢಪಡಿಸಿದೆ ಎಂದು ಹೆಚ್ಚುವರಿ ಪುರಸಭೆ ಆಯುಕ್ತ ನಿರಂಕರ್ ಸಿಂಗ್ ತಿಳಿಸಿದ್ದಾರೆ. ಗೋರಖ್ ಪುರ ಆಡಳಿತದ ಪ್ರಕಾರ, ಜುಂಗಿಯಾ ಬಜಾರ್, ಅಲ್ಯೂಮಿನಿಯಂ ಕಾರ್ಖಾನೆ ಪ್ರದೇಶ, ತಾರಾಮಂಡಲ್,



ಭಗತ್ ಚೌರಾಹಾ ಮತ್ತು ಶಹೀದ್ ಅಶ್ಫಾಕುಲ್ಲಾ ಖಾನ್ ಝೂಲಾಜಿಕಲ್ ಪಾರ್ಕ್‌ನಿಂದ ಸಂಗ್ರಹಿಸಲಾದ ಮಾದರಿಗಳನ್ನು ಪರೀಕ್ಷೆ ನಡೆಸಿವೆ.ಸೋಂಕು ದೃಢಪಟ್ಟಿದೆ. ಈ ಸೋಂಕು ಹರಡುವಿಕೆಗೆ ತ್ವರಿತ ಪ್ರತಿಕ್ರಿಯೆಯಾಗಿ, ಮುಖ್ಯ ಪಶುವೈದ್ಯಾಧಿಕಾರಿ ಜಿಲ್ಲಾ ಮಟ್ಟದ ಕ್ಷಿಪ್ರ ಪ್ರತಿಕ್ರಿಯೆ ತಂಡಗಳನ್ನು ನಿಯೋಜಿಸಿದ್ದಾರೆ ಮತ್ತು ಸರ್ದಾರ್ ಪಶುವೈದ್ಯಕೀಯ ಆಸ್ಪತ್ರೆಯಲ್ಲಿ ಮೀಸಲಾದ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಸೋಂಕಿತ ವಲಯಗಳ ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಕೋಳಿ, ಪಕ್ಷಿ ಕೊಲ್ಲುವ ಕಾರ್ಯಾಚರಣೆಗಳು ಪ್ರಾರಂಭವಾಗಿವೆ ಎಂದು ಹೆಚ್ಚುವರಿ ಪುರಸಭೆ ಆಯುಕ್ತ ನಿರಂಕರ್ ಸಿಂಗ್ ಹೇಳಿದರು. ಗೊತ್ತುಪಡಿಸಿದ ಪ್ರದೇಶಗಳೊಳಗಿನ ಎಲ್ಲಾ ಜೀವಂತ ಪಕ್ಷಿಗಳನ್ನು ಕೊಲ್ಲಲಾಗುವುದು ಮತ್ತು ವೈರಸ್ ಹರಡುವುದನ್ನು ತಡೆಯಲು ವ್ಯಾಪಕವಾದ ಸೋಂಕುನಿವಾರಕ ಅಭಿಯಾನಗಳನ್ನು ಸಕ್ರಿಯವಾಗಿ ನಡೆಸಲಾಗುತ್ತಿದೆ ಎಂದು ಸಿಂಗ್ ಹೇಳಿದರು.

### ಹಸೀನಾ ವಿರುದ್ಧದ ಆರೋಪಗಳಿಗೆ ಪೂರಕ ದಾಖಲೆ ಸಲ್ಲಿಸಿದ ಮುಖ್ಯ ಪ್ರಾಸಿಕ್ಯೂಟರ್ ತಾಜುಲ್ ಇಸ್ಲಾಂ

# ಶೇಖ್ ಹಸೀನಾ ವಿರುದ್ಧದ ಆರೋಪಗಳ ವಿಚಾರಣೆ ಆರಂಭ

**ಢಾಕಾ:** 2024ರ ವಿದ್ಯಾರ್ಥಿ ನೇತೃತ್ವದ ದಂಗೆಯ ಸಮಯದಲ್ಲಿ ಹಿಂಸಾತ್ಮಕ ದಮನ ಕಾರ್ಯಾಚರಣೆಗಳಿಗೆ ಆದೇಶ ನೀಡಿದ ಆರೋಪದ ಮೇಲೆ, ಬಾಂಗ್ಲಾದೇಶದಲ್ಲಿ ಮಾಜಿ ಪ್ರಧಾನಿ ಶೇಖ್ ಹಸೀನಾ ವಿರುದ್ಧ ವಿಚಾರಣೆ ಆರಂಭವಾಗಿದೆ. ವಿಚಾರಣೆ ಆರಂಭವಾಗುತ್ತಿದ್ದಂತೇ ಬಾಂಗ್ಲಾದೇಶದ ಪ್ರಾಸಿಕ್ಯೂಟರ್‌ಗಳು, ಮಾಜಿ ಪ್ರಧಾನಿ ಶೇಖ್ ಹಸೀನಾ, ಇಬ್ಬರು ಹಿರಿಯ ಅಧಿಕಾರಿಗಳ ವಿರುದ್ಧ ಮಾನವೀಯತೆಯ ವಿರುದ್ಧದ ಅಪರಾಧಗಳ ಗಂಭೀರ ಆರೋಪ ಹೊರಿಸಿದರು.



**ಉಗ್ರ ಶಿಕ್ಷೆಗೆ ಗುರಿಯಾಗುವ ಸಾಧ್ಯತೆ**

ಈ ವಿಚಾರಣೆಯಿಂದ ಶೇಖ್ ಹಸೀನಾ ವಿರುದ್ಧ ತೀರ್ಪು ಹೊರಬಂದರೆ ಉಗ್ರ ಶಿಕ್ಷೆ ಘೋಷಣೆಯಾಗುವ ಸಾಧ್ಯತೆ ಇದೆ. ವಿಚಾರಣೆಯ ಆರಂಭದಲ್ಲಿ ಶೇಖ್ ಹಸೀನಾ ಅವರು ತಮ್ಮ ಆಡಳಿತದ ವಿರುದ್ಧ ಭುಗಿಲೆದ್ದ ವಿದ್ಯಾರ್ಥಿ ದಂಗೆಯನ್ನು ಹತ್ತಿಕ್ಕಲು, ರಾಜ್ಯ ಭದ್ರತಾ ಪಡೆಗಳು, ಅವರ ರಾಜಕೀಯ ಪಕ್ಷ, ಸಂಯೋಜಿತ ವಿಧ್ವಂಸಕ ಗುಂಪುಗಳಿಗೆ ಕಾನೂನು ಬಾಹಿರವಾಗಿ ಅಧಿಕಾರ ನೀಡಿದ್ದರು. ಶೇಖ್ ಹಸೀನಾ ಅವರು ಸಾಮೂಹಿಕ ಸಾವುನೋವುಗಳಿಗೆ ಕಾರಣವಾದ ಕಾರ್ಯಾಚರಣೆ ನಡೆಸಲು ನೇರ ಆದೇಶ ನೀಡಿದ್ದರು ಎಂದು ಮುಖ್ಯ ಪ್ರಾಸಿಕ್ಯೂಟರ್ ತಾಜುಲ್ ಇಸ್ಲಾಂ ಗಂಭೀರ ಆರೋಪಗಳನ್ನು ಮಾಡಿದರು. ಶೇಖ್ ಹಸೀನಾ ಅವರ ನೇತೃತ್ವದಲ್ಲೇ ಸಾಮೂಹಿಕ ಹತ್ಯೆಗಳನ್ನು ಯೋಜಿಸಲಾಗಿತ್ತು ಎಂಬ ಮುಖ್ಯ ಪ್ರಾಸಿಕ್ಯೂಟರ್ ತಾಜುಲ್ ಇಸ್ಲಾಂ ಅವರ ಆರೋಪ ಇದೀಗ ಗಮನ ಸೆಳೆದಿದೆ. ತಾಜುಲ್ ಇಸ್ಲಾಂ ತಮ್ಮ ವಾದಗಳಿಗೆ ಪೂರಕವಾಗಿ ವಿವಿಧ ಏಜೆನ್ಸಿಗಳ ನಡುವೆ ನಡೆದಿದ್ದ ಸಂವಹನ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಪ್ರಕರಣವು 81 ಜನರನ್ನು ಸಾಕ್ಷಿಗಳಾಗಿ ಪಟ್ಟಿ ಮಾಡಿದೆ ಎಂದು ಆರಂಭಿಕ ವಿಚಾರಣೆ ಬಳಿಕ ತಾಜುಲ್ ಇಸ್ಲಾಂ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ. ಸರ್ಕಾರದ ಮುಖ್ಯಸ್ಥೆಯಾಗಿ ಶೇಖ್ ಹಸೀನಾ, ಅಶಾಂತಿಯ ಸಮಯದಲ್ಲಿ ಭದ್ರತಾ ಪಡೆ ಕಾರ್ಯಾಚರಣೆಗಳನ್ನು ಕಮಾಂಡ್ ಮಾಡುವ ಜವಾಬ್ದಾರಿಯನ್ನು ಹೊಂದಿದ್ದರು.

ಆದರೆ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಮುಗ್ಧ ಜನರ ಸಾಮೂಹಿಕ ಹತ್ಯೆಗೆ ಕಾರಣವಾದರು ಎಂದು ಪ್ರಾಸಿಕ್ಯೂಟರ್‌ಗಳು ಆರೋಪಿಸಿದ್ದಾರೆ. ಶೇಖ್ ಹಸೀನಾ ಅವರ ಆದೇಶದಂತೆ ನಡೆದ ದಮನ ಕಾರ್ಯಾಚರಣೆಯಲ್ಲಿ ಸುಮಾರು 1,500 ಜನರು ಸಾವನ್ನಪ್ಪಿದ್ದು, 25,000ಕ್ಕೂ ಹೆಚ್ಚು ಜನರು ಗಾಯ ಗೊಂಡಿದ್ದಾರೆ ಎಂದು ಮುಖ್ಯ ಪ್ರಾಸಿಕ್ಯೂಟರ್ ತಾಜುಲ್ ಇಸ್ಲಾಂ ಆರೋಪ ಮಾಡಿದ್ದಾರೆ. ಒಂದು ವೇಳೆ ಆರೋಪ ಸಾಬೀತಾದರೆ ಶೇಖ್ ಹಸೀನಾ ಅವರು ಮಾನವೀಯತೆ ವಿರುದ್ಧದ ಅಪರಾಧಗಳ ಅಡಿಯಲ್ಲಿ ಉಗ್ರ ಶಿಕ್ಷೆಗೆ ಗುರಿಯಾಗುವ ಸಾಧ್ಯತೆ ಇದೆ. ಇಷ್ಟೇ ಅಲ್ಲದೇ ಶೇಖ್ ಹಸೀನಾ, ಅವರ ಕೆಲವು ಕುಟುಂಬ ಸದಸ್ಯರ ವಿರುದ್ಧ, ಬಾಂಗ್ಲಾದೇಶದ ವಿವಿಧ ನ್ಯಾಯಾಲಯಗಳಲ್ಲಿ ಭ್ರಷ್ಟಾಚಾರ ಆರೋಪಗಳ ವಿಚಾರಣೆ ಕೂಡ ನಡೆಯುತ್ತಿದೆ. ಶೇಖ್ ಹಸೀನಾ ಅವರ ಹಸ್ತಾಂತರ ಕೋರಿ, ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಭಾರತಕ್ಕೆ ಮನವಿ ಪತ್ರ ಕಳುಹಿಸಿರುವುದನ್ನು ಇಲ್ಲಿ ಸ್ಮರಿಸಬಹುದು.


### ಬಾಂಗ್ಲಾದಿಂದ ಭಾರತಕ್ಕೆ ಪಲಾಯನ

**15 ವರ್ಷಗಳ ಕಾಲ ಬಾಂಗ್ಲಾದೇಶದ ಪ್ರಧಾನಿಯಾಗಿ ಆಡಳಿತ ನಡೆಸಿದ ನಂತರ, ಕಳೆದ ವರ್ಷದ ಆಗಸ್ಟ್‌ನಲ್ಲಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಶೇಖ್ ಹಸೀನಾ ರಾಜೀನಾಮೆಗೆ ಒತ್ತಾಯಿಸಿ, ವಿದ್ಯಾರ್ಥಿ ಸಂಘಟನೆಗಳ ನೇತೃತ್ವದಲ್ಲಿ ಲಕ್ಷಾಂತರ ಜನ ಪ್ರತಿಭಟನೆ ನಡೆಸಿದ್ದರು. ಈ ವೇಳೆ ಪ್ರತಿಭಟನಾಕಾರರನ್ನು ಹತ್ತಿಕ್ಕಲು ಭದ್ರತಾ ಪಡೆಗಳು ಹಿಂಸಾತ್ಮಕ ಮಾರ್ಗವನ್ನು ಅನುಸರಿಸಿತ್ತು. ಆದರೆ ಅಂತಿಮವಾಗಿ ಪ್ರತಿಭಟನಾಕಾರರ ಒತ್ತಡಕ್ಕೆ ಮಣಿದು ಶೇಖ್ ಹಸೀನಾ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಲ್ಲದೇ, ಬಾಂಗ್ಲಾದೇಶದಿಂದ ಭಾರತಕ್ಕೆ ಪಲಾಯನ ಮಾಡಿದರು.**

# ಭಯೋತ್ಪಾದನೆ ಮೂಲಕ ಸಿಂಧೂ ಜಲ ಒಪ್ಪಂದ ಉಲ್ಲಂಘನೆ

**ವಿಶ್ವಸಂಸ್ಥೆ:** ಪಾಕಿಸ್ತಾನದಿಂದ ನಿರಂತರ ಗಡಿಯಾಚೆಗಿನ ಭಯೋತ್ಪಾದನೆಯು, ಒಪ್ಪಂದದ ಅನುಷ್ಠಾನಕ್ಕೆ ಅಡ್ಡಿಯಾಗುತ್ತಿರುವುದರಿಂದ ಒಪ್ಪಂದದ ಉಲ್ಲಂಘನೆಗೆ ಭಾರತವನ್ನು ದೂಷಿಸುವುದನ್ನು ಇಸ್ಲಾಮಾಬಾದ್ ನಿಲ್ಲಿಸಬೇಕು ಎಂದು ಭಾರತ ತಿರುಗೇಟು ನೀಡಿದೆ.

ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಜಾಗತಿಕ ವೇದಿಕೆಯಲ್ಲಿ ಭಾರತ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿರುವುದನ್ನು ಟೀಕಿಸಿದ ಬೆನ್ನಲ್ಲೇ, ಇದಕ್ಕೆ ತಿರುಗೇಟು ನೀಡಿದ್ದು, ಇದನ್ನು ಅನಗತ್ಯ ಉಲ್ಲೇಖ ಎಂದು ಹೇಳಿದೆ. ಹಿಮನದಿಗಳ ಕುರಿತ ವಿಶ್ವಸಂಸ್ಥೆಯ ಸಮ್ಮೇಳನದ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಕೀರ್ತಿ ವರ್ಧನ್‌ಸಿಂಗ್, ಪಾಕಿಸ್ತಾನವೇ ಭಯೋತ್ಪಾದನೆಯ ಮೂಲಕ ಒಪ್ಪಂದವನ್ನು ಉಲ್ಲಂಘಿಸುತ್ತಿದೆ. ಪಾಕಿಸ್ತಾನವು ವೇದಿಕೆಯನ್ನು ದುರುಪಯೋಗಪಡಿಸಿಕೊಳ್ಳುವ ಮತ್ತು ವೇದಿಕೆಯ ವ್ಯಾಪ್ತಿಗೆ ಬರದ ವಿಷಯಗಳ ಬಗ್ಗೆ ಅನಗತ್ಯ ಉಲ್ಲೇಖಗಳನ್ನು ತರುವ ಪ್ರಯತ್ನ ನಾವು ನೋಡಿದ್ದೇವೆ. ಇದನ್ನು ನಾವು ಬಲವಾಗಿ ಖಂಡಿಸುತ್ತೇವೆ ಎಂದು ವಾಗ್ದಾಳಿ ನಡೆಸಿದರು.



ಏ. 22 ರಂದು ಜಮ್ಮು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಮೂಲದ ಭಯೋ ತ್ಪಾದಕರು 26 ನಾಗರಿಕರನ್ನು ಕೊಂದ ನಂತರ ಭಾರತ ಪಾಕಿಸ್ತಾನದ ವಿರುದ್ಧ ತೆಗೆದುಕೊಂಡ ರಾಜತಾಂತ್ರಿಕ ಕ್ರಮಗಳ ಸರಣಿಯಲ್ಲಿ 1960ರ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಲಾಗಿದೆ. ಭಾರತದ ವಿರುದ್ಧದ ಪ್ರಾಕ್ಸಿ ಯುದ್ಧದ ಭಾಗವಾಗಿ ಇಸ್ಲಾಮಾಬಾದ್ ಗಡಿಯಾಚೆಗಿನ ಭಯೋತ್ಪಾದನೆಯನ್ನು ಬೆಂಬಲಿಸುತ್ತಿದೆ, ಸುಗಮಗೊಳಿಸುತ್ತಿದೆ ಎಂದು ನವದೆಹಲಿ ನಿರಂತರವಾಗಿ ಆರೋಪಿಸಿದೆ. ಹಿಮನದಿಗಳ ಸಂರಕ್ಷಣೆ ಕುರಿತ ಅಂತರ ರಾಷ್ಟ್ರೀಯ ಸಮ್ಮೇಳನ ದಲ್ಲಿ ಮಾತನಾಡಿದ್ದ ಶೆಹಬಾಜ್ ಷರೀಫ್ , ನೀರಿನ ಆಯುಧೀ ಕರಣ, ಸಿಂಧೂ ಜಲಾನಯನ ಪ್ರದೇಶದ ನೀರಿನ ಹಂಚಿಕೆಯನ್ನು ನಿಯಂತ್ರಿಸುವ ಸಿಂಧೂ ಜಲ ಒಪ್ಪಂದವನ್ನು ತಡೆಹಿಡಿಯುವ ಭಾರತದ ಏಕಪಕ್ಷೀಯ, ಕಾನೂನುಬಾಹಿರ ನಿರ್ಧಾರವು ತೀವ್ರ ವಿಷಾದಕರ ಎಂದು ದೂರಿದ್ದರು. ರಾಜಕೀಯ ಲಾಭಕ್ಕಾಗಿ ಲಕ್ಷಾಂತರ ಜೀವಗಳನ್ನು ಒತ್ತೆ ಯಾಳುಗಳಾಗಿ ಇಡಬಾರದು, ಪಾಕಿಸ್ತಾನ ಇದಕ್ಕೆ ಅವಕಾಶ ನೀಡುವುದಿಲ್ಲ. ನಾವು ಎಂದಿಗೂ ಕೆಂಪು ರೇಖೆಯನ್ನು ದಾಟಲು ಬಿಡುವುದಿಲ್ಲ ಎಂದು ಅವರು ಹೇಳಿದ್ದರು. ಹೇಳಿಕೆಗಳಿಗೆ ಕೇಂದ್ರ ಸಚಿವರು ಆಕ್ಷೇಪ ವ್ಯಕ್ತಪಡಿಸಿ ಸಿಂಧೂ ಜಲ ಒಪ್ಪಂದಕ್ಕೆ ಸಹಿ ಹಾಕಿದಾಗಿನಿಂದ ಪರಿಸ್ಥಿತಿಯಲ್ಲಿ ಮೂಲಭೂತ ಬದಲಾವಣೆಗಳಾಗಿವೆ ಎಂಬುದು ನಿರಾಕರಿಸಲಾಗದ ಸತ್ಯ ಎಂದರು. ಒಪ್ಪಂದದ ಬಾಧ್ಯತೆಗಳ ಮರುಮೌಲ್ಯಮಾಪನದ ಅಗತ್ಯವಿದೆ. ಈ ಬದಲಾವಣೆಗಳಲ್ಲಿ ತಾಂತ್ರಿಕ ಪ್ರಗತಿಗಳು, ಜನಸಂಖ್ಯಾ ಬದಲಾವಣೆಗಳು, ಹವಾಮಾನ ಬದಲಾವಣೆ, ಗಡಿಯಾಚೆಗಿನ ಭಯೋತ್ಪಾದನೆಯ ನಿರಂತರ ಬೆದರಿಕೆ ಸೇರಿವೆ ಎಂದು ಅವರು ಹೇಳಿದರು. ಆದಾಗ್ಯೂ, ಪಾಕಿಸ್ತಾನದ ನಿರಂತರ ಗಡಿಯಾಚೆಗಿನ ಭಯೋತ್ಪಾದನೆಯು ಒಪ್ಪಂದದ ನಿಬಂಧನೆಗಳ ಪ್ರಕಾರ ಅದನ್ನು ಬಳಸಿಕೊಳ್ಳುವ ಸಾಮರ್ಥ್ಯಕ್ಕೆ ಅಡ್ಡಿಪಡಿಸುತ್ತದೆ. ಒಪ್ಪಂದವನ್ನು ಉಲ್ಲಂಘಿಸುತ್ತಿರುವ ಪಾಕಿಸ್ತಾನವು ಒಪ್ಪಂದದ ಉಲ್ಲಂಘನೆಯ ಹೊಣೆಯನ್ನು ಭಾರತದ ಮೇಲೆ ಹೊರಿಸುವುದನ್ನು ನಿಲ್ಲಿಸಬೇಕು ಎಂದರು. ಒಪ್ಪಂದದ ಪೀಠಿಕೆಯಲ್ಲಿ ಇದನ್ನು ಸದ್ಭಾವನೆ, ಸ್ನೇಹದ ಮನೋಭಾವದಿಂದ ತೀರ್ಮಾನಿಸಲಾಗಿದೆ ಎಂದು ಹೇಳಲಾಗಿದ್ದು, ಒಪ್ಪಂದವನ್ನು ಉತ್ತಮ ನಂಬಿಕೆಯಿಂದ ಗೌರವಿಸುವುದು ಅತ್ಯಗತ್ಯ ಎಂದು ವರ್ಧನ್ ಸಿಂಗ್ ಹೇಳಿದರು.

**ಪಾಕ್ ಪ್ರಧಾನಿಗೆ ಭಾರತ ತಿರುಗೇಟು**

# ಕೊರೋನಾ ತುರ್ತು ಸ್ಥಿತಿ ಎದುರಿಸಲು ಸಿದ್ಧ ಎಂದ ಕೇಂದ್ರ

**ಹೊಸದಿಲ್ಲಿ:** ದೇಶದಲ್ಲಿ ಕೊರೋನಾ ಸೋಂಕಿತರ ಸಂಖ್ಯೆ 3,500ರ ಗಡಿ ದಾಟಿರುವ ಬೆನ್ನಲ್ಲಿಯೇ, ಯಾವುದೇ ಸ್ಥಿತಿ ಎದುರಾದರೂ ನಿಭಾಯಿಸಲು ಸನ್ನದ್ಧವಾಗಿರುವುದಾಗಿ ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ಇದು ಕೇವಲ ರೂಪಾಂತರಗೊಂಡ ವೈರಸ್ ಆಗಿದ್ದು, ಹೆಚ್ಚಿನ ಅಪಾಯವಿಲ್ಲ ಎಂದು ತಜ್ಞರು ತಿಳಿಸಿದ್ದಾರೆ.



ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಆರೋಗ್ಯ ಸಚಿವ ಪ್ರತಾಪ್‌ರಾವ್ ಜಾಧವ್, ಸರಕಾರ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳೊಂದಿಗೆ ಸಜ್ಜಾಗಿದೆ. ಕೇಂದ್ರ ಆರೋಗ್ಯ ಸಚಿವಾಲಯ, ಆಯುಷ್ ಸಚಿವಾಲಯಗಳು ಪರಿಸ್ಥಿತಿಯನ್ನು ಗಂಭೀರವಾಗಿ ಅವಲೋಕಿಸುತ್ತಿವೆ. ಎಲ್ಲಾ ರಾಜ್ಯಗಳ ಸ್ಥಿತಿಯನ್ನೂ ಗಮನಿಸುತ್ತಿದ್ದೇವೆ ಎಂದು ಹೇಳಿದರು. ಸಕ್ರಿಯ ಪ್ರಕರಣಗಳು ಹೆಚ್ಚಿರುವ ರಾಜ್ಯಗಳ ಪೈಕಿ ಕೇರಳ ಮೊದಲ ಸ್ಥಾನದಲ್ಲಿದ್ದು, ನಂತರ ಮಹಾರಾಷ್ಟ್ರ ಹಾಗೂ ದಿಲ್ಲಿ ಇವೆ. ಕೇರಳದಲ್ಲಿ 1,336 ಮಹಾರಾಷ್ಟ್ರದಲ್ಲಿ 424, ದಿಲ್ಲಿಯಲ್ಲಿ 294, ಗುಜರಾತ್‌ನಲ್ಲಿ 223, ತಮಿಳುನಾಡು ಹಾಗೂ ಕರ್ನಾಟಕದಲ್ಲಿ 148 ಪ್ರಕರಣಗಳು ಪತ್ತೆಯಾಗಿವೆ, ಎಂದು ಕೇಂದ್ರ ಸರಕಾರ ತಿಳಿಸಿದೆ. ಈ ವರ್ಷದ ಮೊದಲ 5 ತಿಂಗಳಲ್ಲಿ ಕೋವಿಡ್‌ನಿಂದ ಮೃತಪಟ್ಟವರ ಸಂಖ್ಯೆ 23ಕ್ಕೇರಿದೆ.

ಕಳೆದ 24 ಗಂಟೆಗಳಲ್ಲಿ ಮಹಾರಾಷ್ಟ್ರದಲ್ಲಿ 2 ಕೋವಿಡ್ ಸಾವು ಸಂಭವಿಸಿದೆ. ದಿಲ್ಲಿ, ಗುಜರಾತ್, ಕರ್ನಾಟಕ, ಪಂಜಾಬ್, ತಮಿಳುನಾಡಿನಲ್ಲಿ ತಲಾ ಒಂದು ಸಾವು ವರದಿಯಾಗಿದೆ. ಕೇರಳದಲ್ಲಿ ಅತಿ ಹೆಚ್ಚು ಪ್ರಕರಣಗಳು ದಾಖಲಾಗಲು ರಾಜ್ಯ ಹೆಚ್ಚಿನ ಪರೀಕ್ಷೆ ನಡೆಸುತ್ತಿರುವುದೇ ಕಾರಣ ಎನ್ನಲಾಗುತ್ತಿದೆ. ಕೇರಳದಲ್ಲಿ ಕೋವಿಡ್ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಗಳಿಗೆ ಹಾಸಿಗೆಗಳು, ಆಮ್ಲಜನಕ ಸಿಲಿಂಡರ್‌ಗಳು, ಪರೀಕ್ಷಾ ಕಿಟ್‌ಗಳು, ಲಸಿಕೆಗಳ ಲಭ್ಯತೆ ಖಚಿತಪಡಿಸಿಕೊಳ್ಳಲು ಸೂಚನೆ ನೀಡಲಾಗಿದೆ. ವೃದ್ಧರು ಮತ್ತು ಇತರ ಕಾಯಿಲೆಗಳಿಂದ ಬಳಲುತ್ತಿರುವವರು ಜನದಟ್ಟಣೆ ಪ್ರದೇಶಗಳಿಗೆ ಹೋಗುವಾಗ ಮಾಸ್ಕ್ ಧರಿಸಲು ಸೂಚಿಸಲಾಗಿದೆ.

**" ಈ ಹಿಂದಿನ ಸಮಯದಲ್ಲಿ ನಿರ್ಮಿಸಲಾದ ಮೂಲ ಸೌಕರ್ಯಗಳಾದ ಆಮ್ಲಜನಕ ಘಟಕಗಳು ಮತ್ತು ಐಸಿಯುಗಳನ್ನು ನಾವು ಪರಿಶೀಲಿಸಿದ್ದು, ಈಗಾಗಲೇ ಸಿದ್ಧತೆ ಪ್ರಾರಂಭಿಸಿದ್ದೇವೆ. ಮುಂದೆ ಬರಬಹುದಾದ ಯಾವುದೇ ಪರಿಸ್ಥಿತಿಯನ್ನು ನಿಭಾಯಿಸಲು ನಾವು ಸಿದ್ಧವಾಗಿದ್ದೇವೆ ಎಂದರು.**

# ರಷ್ಯಾದಲ್ಲಿ ಸೇತುವೆ ಕುಸಿದು ಹಳಿ ತಪ್ಪಿದ ರೈಲು, 7 ಮಂದಿ ಸಾವು

**ಮಾಸ್ಕೋ:** ಪಶ್ಚಿಮ ರಷ್ಯಾದ ಬ್ರಿಯಾನ್ಸ್ ಪ್ರದೇಶದಲ್ಲಿ ಸೇತುವೆ ಕುಸಿದ ಪರಿಣಾಮವಾಗಿ ಪ್ರಯಾಣಿಕರ ರೈಲು ಹಳಿತಪ್ಪಿ ಕನಿಷ್ಠ ಏಳು ಮಂದಿ ಸಾವನ್ನಪ್ಪಿದ್ದು, 30 ಜನರು ಗಾಯ ಗೊಂಡಿದ್ದಾರೆ. ಅಪಘಾತದ ದೃಶಾವಳಿಗಳು ಎದೆ ಝಲ್ಲೆನಿಸುವಂತಿದೆ. ಈ ದುರಂತವು ಉಕ್ರೇನ್ ಗಡಿಯಲ್ಲಿರುವ ರಷ್ಯಾದ ಬ್ರಿಯಾನ್ಸ್ ಪ್ರದೇಶದಲ್ಲಿ ಸಂಭವಿಸಿದೆ. 2022ರಲ್ಲಿ ರಷ್ಯಾ ಉಕ್ರೇನ್ ಮೇಲೆ ಸಂಪೂರ್ಣ ಆಕ್ರಮಣವನ್ನು ಪ್ರಾರಂಭಿಸಿದಾಗಿನಿಂದ ಈ ಪ್ರದೇಶದಲ್ಲಿ ಹೆಚ್ಚಿನ ಉದ್ವಿಗ್ನತೆ ಕಂಡುಬಂದಿದೆ. ಉಕ್ರೇನ್ ಗಡಿಗೆ ಹೊಂದಿಕೊಂಡಿರುವ ಬ್ರಿಯಾನ್ಸ್ ಪ್ರದೇಶದಲ್ಲಿ ಈ ಘಟನೆ ಸಂಭವಿಸಿದೆ. ರಷ್ಯಾದ ಅಧಿಕಾರಿಗಳ ಪ್ರಕಾರ, ಸಾರಿಗೆ ಕಾರ್ಯಾಚರಣೆಯಲ್ಲಿ ಅಕ್ರಮ ಹಸ್ತಕ್ಷೇಪ ದ ಪರಿಣಾಮವಾಗಿ ಸೇತುವೆ ಕುಸಿದಿದೆ. ರೈಲು ಮಾಸ್ಕೋದಿಂದ ಕಿಮೋವೊ ಪಟ್ಟಣಕ್ಕೆ ಪ್ರಯಾಣಿಸುತ್ತಿದ್ದಾಗ, ಹಳಿತಪ್ಪಿದ ಸೇತುವೆಗೆ ಡಿಕ್ಕಿ ಹೊಡೆದಿದೆ. ಗಾಯಗೊಂಡವರಲ್ಲಿ ಇಬ್ಬರು ಮಕ್ಕಳು ಸೇರಿದ್ದು, ಅವರಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ಬ್ರಿಯಾನ್ಸ್ ಪ್ರಾಂತ್ಯದ ಗವರ್ನರ್ ಅಲೆಕ್ಸಾಂಡರ್ ಬೊಗೊಮಾಜ್ ತಿಳಿಸಿದ್ದಾರೆ. ಉಕ್ರೇನ್‌ನಲ್ಲಿ ರಷ್ಯಾ ಸೇನಾ ಕಾರ್ಯಾಚರಣೆ ಪ್ರಾರಂಭವಾದಾಗಿನಿಂದ, ಬ್ರಿಯಾನ್ಸ್ ಸೇರಿದಂತೆ ಗಡಿ ಪ್ರಾಂತ್ಯಗಳಲ್ಲಿ ಶೆಲ್ ದಾಳಿ ಮತ್ತು ಡ್ರೋನ್ ದಾಳಿಗಳು ಹೆಚ್ಚಾಗಿ ನಡೆಯುತ್ತಿವೆ. ಈ ಘಟನೆಗೆ ಉಕ್ರೇನ್ನಿಂದ ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ನಜ್ಜುಗುಜ್ಜಾದ ರೈಲು ಬೋಗಿಗಳು ಹರಿದು ಚಲ್ಲಾಪಿಲ್ಲಿಯಾಗಿ ಬಿದ್ದಿರುವುದು, ಸಹಾಯಕ್ಕಾಗಿ ಪರದಾಡುತ್ತಿರುವ ಪ್ರಯಾಣಿಕರ ಚಿತ್ರಣ ಕಂಡುಬಂದಿದೆ. ಸೇತುವೆ ಕುಸಿಯುವ ಕೆಲವೇ ಕ್ಷಣಗಳ ಮೊದಲು ಕೆಲವು ವಾಹನಗಳು ಅಪಾಯದಿಂದ ಪಾರಾಗುವ ದೃಶ್ಯಗಳು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳಲಾಗಿದೆ.



**ಗಾಯಾಳುಗಳಿಗೆ ತಕ್ಷಣದ ನೆರವಿನ ಭರವಸೆ :** ರೈಲ್ವೆ ಅಪಘಾತದಿಂದ ಗಾಯಗೊಂಡವರಿಗೆ ಅಗತ್ಯವಿರುವ ಎಲ್ಲಾ ಸಹಾಯವನ್ನು ಮಾಡಲಾಗುತ್ತಿದೆ ಎಂದು ಗವರ್ನರ್ ಬೊಗೊಮಾಜ್ ಹೇಳಿದ್ದಾರೆ. ಈ ದುರಂತದಲ್ಲಿ ಗಾಯಗೊಂಡವರಿಗೆ ಸೂಕ್ತ ಚಿಕಿತ್ಸೆ ನೀಡಲು ಸರ್ಕಾರವು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ರಷ್ಯಾದ ಅಧಿಕಾರಿಗಳು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ವಿಡಿಯೋ ಪ್ರಕಾರ, ರಾತ್ರಿಯಿಡೀ ರೈಲಿನಲ್ಲಿ ಸಿಲುಕಿದ್ದ ಜನರನ್ನು ರಕ್ಷಣಾ ಸಿಬ್ಬಂದಿ ಬೇರೆಡೆಗೆ ಸ್ಥಳಾಂತರಿಸುತ್ತಿರುವುದು, ಸುಮಾರು 180 ಸಿಬ್ಬಂದಿ ಕಾರ್ಯಪ್ರವೃತ್ತರಾಗಿರುವ ದೃಶ್ಯ ಕಂಡುಬಂದಿತು. ಈ ದುರಂತವು ಬ್ರಿಯಾನ್ಸ್ ಪ್ರದೇಶದಲ್ಲಿ ಸಂಭವಿಸಿದೆ.

# ಎಲಾನ್ ಮಸ್ಕ್ ಬೆಂಬಲಿಗರಿಗೆ ಟ್ರಂಪ್ ಕೊಕ್

## ಐಸಾಕ್‌ಮನ್ ನಾಮನಿರ್ದೇಶನ ರದ್ದು, ಹೊಸ ಹೆಸರು ಶೀಘ್ರ ಘೋಷಣೆ ಸಾಧ್ಯತೆ

**ಅಮೆರಿಕ:** ಬಿಲಿಯನೇರ್ ಉದ್ಯಮಿ ಜಾರೆಡ್ ಐಸಾಕ್‌ಮನ್ ಅವರನ್ನು ನಾಸಾ ಆಡಳಿತಾಧಿಕಾರಿಯಾಗಿ ನೇಮಿಸುವ ಪ್ರಸ್ತಾಪವನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಿಂಪಡೆದಿದ್ದಾರೆ. ಎಲೋನ್ ಮಸ್ಕ್ ಅವರ ಆಪ್ತರಾಗಿದ್ದ ಐಸಾಕ್‌ಮನ್ ಅವರ ಹೆಸರನ್ನು ರದ್ದು ಮಾಡಲಾಗಿದೆ. ಸೆನೆಟ್‌ನಲ್ಲಿ ಅನುಮೋದನೆ ಪಡೆಯುವ ಕೆಲವೇ ದಿನಗಳ ಮುಂಚೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಟ್ರಂಪ್ ಅವರ ಅಮೆರಿಕಾ ಫಸ್ಟ್ ಕಾರ್ಯಸೂಚಿಗೆ ಹೊಂದಿಕೆಯಾಗುವ ವ್ಯಕ್ತಿಯನ್ನು ನಾಸಾ ಮುಖ್ಯಸ್ಥರನ್ನಾಗಿ ನೇಮಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ. ಈ ಬೆಳವಣಿಗೆಯು ಬಾಹ್ಯಾಕಾಶ ಕ್ಷೇತ್ರದಲ್ಲಿ ಹಲವು ಚರ್ಚೆಗಳಿಗೆ ಕಾರಣವಾಗಿದೆ. ಐಸಾಕ್‌ಮನ್ ಅವರ ಬದಲಿಗೆ ಯು.ಎಸ್. ಏರ್ ಫೋರ್ಸ್‌ನ ನಿವೃತ್ತ ಲೆಫ್ಟಿನೆಂಟ್ ಜನರಲ್ ಸ್ಟೀವನ್ ಕ್ವಾಸ್ಟ್ ಅವರನ್ನು ನೇಮಿಸುವ ಸಾಧ್ಯತೆ ಇದೆ. ಶೀಘ್ರದಲ್ಲೇ ಹೊಸ ಹೆಸರನ್ನು ಟ್ರಂಪ್ ಘೋಷಿಸಲಿದ್ದಾರೆ ಎಂದು ಶ್ವೇತಭವನದ ವಕ್ತಾರರಾದ ಲಿಜ್ ಹಸ್ಟನ್ ತಿಳಿಸಿದ್ದಾರೆ. ಅಧ್ಯಕ್ಷ ಟ್ರಂಪ್ ಅವರ ಅಮೆರಿಕಾ ಫಸ್ಟ್ ಕಾರ್ಯಸೂಚಿಗೆ ನಾಸಾದ ಮುಂದಿನ ನಾಯಕ ಸಂಪೂರ್ಣವಾಗಿ ಹೊಂದಿಕೆಯಾಗುವುದು ಅತ್ಯಗತ್ಯ ಎಂದು ಹಸ್ಟನ್ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಐಸಾಕ್‌ಮನ್ ಅವರ ಹಠಾತ್ ನಿರ್ಗಮನವು ಬಾಹ್ಯಾಕಾಶ ಸಮುದಾಯದಲ್ಲಿ ಆಶ್ಚರ್ಯವನ್ನುಂಟು ಮಾಡಿದೆ. ಸ್ಪೇಸ್ ಎಕ್ಸ್‌ನೊಂದಿಗೆ ಅವರ ಮೊದಲ ಖಾಸಗಿ ಬಾಹ್ಯಾಕಾಶ ಹಾರಾಟಗಳು ಮತ್ತು ಬಲವಾದ ಉದ್ಯಮ ಬೆಂಬಲಕ್ಕಾಗಿ ಅವರು ಹೆಸರುವಾಸಿಯಾಗಿದ್ದರು. ಅದರಲ್ಲೂ ವಿಶೇಷವಾಗಿ ಮಂಗಳ ಗ್ರಹದ ಪರಿಶೋಧನೆಗೆ ಸಂಬಂಧಿಸಿದಂತೆ ಮಸ್ಕ್ ಅವರ ದೃಷ್ಟಿಗೆ ಅನುಗುಣವಾಗಿ ನಾಸಾದ ಭವಿಷ್ಯವನ್ನು ರೂಪಿಸುವಲ್ಲಿ ಪ್ರಮುಖ ವ್ಯಕ್ತಿಯಾಗಿ ಐಸಾಕ್‌ಮನ್ ಗುರುತಿಸಿಕೊಂಡಿದ್ದರು.





ಅವರ ನಾಮನಿರ್ದೇಶನವು ದೀರ್ಘಕಾಲದಿಂದ ವಿಳಂಬವಾಗಿತ್ತು. ಸ್ಪೇಸ್‌ಎಕ್ಸ್‌ನೊಂದಿಗೆ ಅವರ ಆರ್ಥಿಕ, ಕಾರ್ಯತಂತ್ರದ ಸಂಬಂಧಗಳ ಬಗ್ಗೆ ಶಾಸಕರಲ್ಲಿ ಚರ್ಚೆಗಳು ಹುಟ್ಟಿಕೊಂಡಿದ್ದವು. ಐಸಾಕ್‌ಮನ್ ಅವರ ನಿರ್ಗಮನವು ಟ್ರಂಪ್ ಆಡಳಿತದಲ್ಲಿ ಮಸ್ಕ್ ಅವರ ಪಾತ್ರದ ನಿರ್ಗಮನದ ನಂತರ ಬಂದಿದೆ. ಮಸ್ಕ್ ಅವರು ವಿಶೇಷ ಸರ್ಕಾರಿ ಉದ್ಯೋಗಿಯಾಗಿ ಸರ್ಕಾರದ ದಕ್ಷತೆ ಇಲಾಖೆಯ ಮೇಲ್ವಿಚಾರಣೆಯನ್ನು ಮಾಡುತ್ತಿದ್ದರು. ಈ ಹುದ್ದೆಯು ಹಿರಿಯ ಸಹಾಯಕರಲ್ಲಿ ಭಿನ್ನಾಭಿಪ್ರಾಯಕ್ಕೆ ಕಾರಣವಾಗಿತ್ತು ಎನ್ನಲಾಗಿದೆ.

**ಬಾಹ್ಯಾಕಾಶ ಪಡೆಗೆ ಬೆಂಬಲ**

### ಎಲಾನ್ ಮಸ್ಕ್ ಪ್ರತಿಕ್ರಿಯೆ ಏನು?

**ಈ ನಿರ್ಧಾರಕ್ಕೆ ಶ್ವೇತಭವನವು ಯಾವುದೇ ಕಾರಣವನ್ನು ನೀಡಿಲ್ಲ. ಆದರೆ ಸೆಮಾಫೋರ್ ಮೊದಲಿಗೆ ಈ ಬೆಳವಣಿಗೆಯನ್ನು ವರದಿ ಮಾಡಿದೆ. ಎಲೋನ್ ಮಸ್ಕ್ ಅವರ ಆಪ್ತ ಮೂಲಗಳು ಈ ಕ್ರಮವು ರಾಜಕೀಯ ಪ್ರೇರಿತವಾಗಿದೆ ಎಂದು ಹೇಳಿವೆ. ಈ ಬಗ್ಗೆ ಮಸ್ಕ್ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿ, ಅಂತಹ ಸಮರ್ಥ, ಒಳ್ಳೆಯ ವ್ಯಕ್ತಿಯನ್ನು ಕಂಡುಹಿಡಿಯುವುದು ಅಪರೂಪ ಎಂದು ಹೇಳಿದ್ದಾರೆ.**

ಐಸಾಕ್‌ಮನ್ ಅವರ ಬದಲಿಗೆ ಯಾರನ್ನು ನೇಮಿಸಬಹುದು ಎಂಬ ಚರ್ಚೆಗಳು ನಡೆಯುತ್ತಿವೆ. ಯು.ಎಸ್. ಏರ್ ಫೋರ್ಸ್‌ನ ನಿವೃತ್ತ ಲೆಫ್ಟಿನೆಂಟ್ ಜನರಲ್ ಸ್ಟೀವನ್ ಕ್ವಾಸ್ಟ್ ಅವರ ಹೆಸರು ಮುಂಚೂಣಿಯಲ್ಲಿದೆ. ಅವರು ಯು.ಎಸ್. ಬಾಹ್ಯಾಕಾಶ ಪಡೆಗೆ ಬೆಂಬಲ ನೀಡುವ ಟ್ರಂಪ್ ಅವರ ನಿಷ್ಠಾವಂತ ಬೆಂಬಲಿಗ ಎಂದು ಹಲವು ವರದಿಗಳು ಹೇಳಿವೆ.

### ವಿಜ್ಞಾನ ವಿಭಾಗಕ್ಕೆ ಬಜೆಟ್ ಕಡಿತ

**ಟ್ರಂಪ್ ಆಡಳಿತವು 2026ರ ಬಜೆಟ್ ಪ್ರಸ್ತಾವನೆಯಲ್ಲಿ ನಾಸಾದ ವಿಜ್ಞಾನ ಕಾರ್ಯಕ್ರಮಗಳಿಗೆ, ಬಜೆಟ್ ಕಡಿತ ಮಾಡಲು ಮುಂದಾಗಿದೆ. ಇದು ವಿಜ್ಞಾನ ಕಾರ್ಯಕ್ರಮಗಳಿಗೆ ದೊಡ್ಡ ಕಡಿತಗಳನ್ನು ಒಳಗೊಂಡಿದೆ. ಇದರಿಂದಾಗಿ ಸಾವಿರಾರು ಉದ್ಯೋಗ ನಷ್ಟವಾಗಬಹುದು ಎಂದು ಅಂದಾಜಿಸಲಾಗಿದೆ. ಈ ಯೋಜನೆಯು ಬಾಹ್ಯಾಕಾಶ ವಕೀಲರು ಮತ್ತು ಶಾಸಕರಿಂದ ತೀವ್ರ ವಿರೋಧವನ್ನು ವ್ಯಕ್ತಪಡಿಸಿದೆ. ಇದು ಯು.ಎಸ್. ಬಾಹ್ಯಾಕಾಶ ನಾಯಕತ್ವವನ್ನು ದುರ್ಬಲಗೊಳಿಸುತ್ತದೆ ಎಂದು ಎಚ್ಚರಿಸಿದ್ದಾರೆ.**

ಶಿಫ್ಟ್ 4 ಪಾವತಿ ತಂತ್ರಜ್ಞಾನ ಸಂಸ್ಥೆಯ ಸಂಸ್ಥಾಪಕರಾದ ಐಸಾಕ್‌ಮನ್, ನಾಸಾದ ಆರ್ಟೆಮಿಸ್ ಚಂದ್ರನ ಕಾರ್ಯಾಚರಣೆ ಮತ್ತು ಮಂಗಳ ಗ್ರಹದ ಕಡೆಗೆ ತ್ವರಿತಗತಿಯನ್ನು ಸಮತೋಲನಗೊಳಿಸುವ ದೃಷ್ಟಿಯನ್ನು ಹೊಂದಿದ್ದರು. ಏಪ್ರಿಲ್‌ನಲ್ಲಿ ನಡೆದ ಅವರ ದೃಢೀಕರಣ ವಿಚಾರಣೆಯ ಸಂದರ್ಭದಲ್ಲಿ ಅವರ ಅಭಿಪ್ರಾಯಗಳು ಉತ್ಸಾಹ ಮತ್ತು ಟೀಕೆಗಳನ್ನು ಹುಟ್ಟುಹಾಕಿದ್ದವು.

## ಮಿನಿ ನ್ಯೂಸ್

### ಅಪ್ಪ ಅಮ್ಮನಿಗೆ ಎಮೋಷನಲ್ ಪತ್ರ ಬರೆದ ತೇಜ್ ಪ್ರತಾಪ್

**ಪಾಟ್ನಾ:** ಇತ್ತೀಚೆಗೆ ತಮ್ಮ ತಂದೆ ಮತ್ತು ಪಕ್ಷದ ಮುಖ್ಯಸ್ಥ ಲಾಲು ಪ್ರಸಾದ್‌ರಿಂದ ಆರ್‌ಜೆಡಿಯಿಂದ ಉಚ್ಚಾಟನೆಗೊಂಡಿದ್ದ ಬಿಹಾರದ ಮಾಜಿ ಸಚಿವ ತೇಜ್ ಪ್ರತಾಪ್ ಯಾದವ್ ಅವರು, ಪಕ್ಷ, ಕುಟುಂಬದೊಳಗಿನ ತಮ್ಮ ಸಂಕಷ್ಟಕ್ಕೆ ದುರಾಸೆಯ ಜನರು ತಮ್ಮೊಂದಿಗೆ ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಲಾಲೂ ಪ್ರಸಾದ್ ಅವರು ಮೇ 25ರಂದು ತಮ್ಮ ಹಿರಿಯ ಮಗ ಯಾದವ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಿ, ಅವರೊಂದಿಗಿನ ಎಲ್ಲಾ ಕುಟುಂಬ ಸಂಬಂಧಗಳನ್ನು ಮುರಿದುಕೊಂಡಿದ್ದರು. ಅಲ್ಲದೆ ತೇಜ್ ಪ್ರತಾಪ್ ಯಾದವ್ ನಡೆಯು ಬೇಜವಾಬ್ದಾರಿ, ಸಾರ್ವಜನಿಕ ನಡವಳಿಕೆಗೆ ಅನುಗುಣವಾಗಿಲ್ಲ ಎಂದ್ದರು.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ತೇಜ್ ಪ್ರತಾಪ್, ನನ್ನ ಪ್ರೀತಿಯ ತಾಯಿ, ತಂದೆ ನನ್ನ ಇಡೀ ಪ್ರಪಂಚವು ಕೇವಲ ನೀವಿಬ್ಬರು. ನೀವು ನೀಡಿದ ಯಾವುದೇ ಆದೇಶವು ದೇವರಿಗಿಂತ ದೊಡ್ಡದು. ನೀವು ಇದ್ದರೆ ನನಗೆ ಎಲ್ಲವೂ ಇದೆ. ನನಗೆ ಬೇಕಾಗಿರುವುದು ನಿಮ್ಮ ನಂಬಿಕೆ-ಪ್ರೀತಿ. ಮತ್ತೇನೂ ಇಲ್ಲ. ಅಪ್ಪಾ, ನೀವು ಇಲ್ಲದಿದ್ದರೆ, ಈ ಪಕ್ಷವೂ ಅಸ್ತಿತ್ವದಲ್ಲಿಲ್ಲ, ನನ್ನೊಂದಿಗೆ ರಾಜಕೀಯ ಮಾಡುವ ಜೈಚಂದ್‌ನಂತಹ ದುರಾಸೆಯ ಜನರು ಇರುತ್ತಿರಲಿಲ್ಲ. ಅಪ್ಪ, ಅಮ್ಮ, ನೀವಿಬ್ಬರೂ ಯಾವಾಗಲೂ ಆರೋಗ್ಯವಾಗಿ, ಸಂತೋಷವಾಗಿರಲಿ ಎಂದು ಭಾವನಾತ್ಮಕವಾಗಿ ಹೇಳಿದ್ದಾರೆ.

ಆದಾಗ್ಯೂ, ಜನರು ತಮ್ಮೊಂದಿಗೆ ರಾಜಕೀಯ ಆಡುತ್ತಿದ್ದಾರೆ ಎಂಬುದರ ಅರ್ಥವನ್ನು ಯಾದವ್ ವಿವರಿಸಿಲ್ಲ. ಲಾಲೂ ಪ್ರಸಾದ್ ಯಾದವ್ ಅವರ ಕಿರಿಯ ಪುತ್ರ ತೇಜಸ್ವಿ ಯಾದವ್ ನೇತೃತ್ವದಲ್ಲಿ ಆರ್‌ಜೆಡಿ ಸ್ಪರ್ಧಿಸಲಿರುವ ಬಿಹಾರ ವಿಧಾನಸಭಾ ಚುನಾವಣೆಗೆ ಕೆಲವೇ ತಿಂಗಳುಗಳ ಮೊದಲು ಅವರ ಉಚ್ಚಾಟನೆಯಾಗಿದೆ. ಪ್ರಸಾದ್, ರಾಬ್ಡಿದೇವಿಗೆ ಜನಿಸಿದ ಇಬ್ಬರು ಸಹೋದರರು ರಾಜಕೀಯ ದಲ್ಲಿ ಸಕ್ರಿಯವಾಗಿರುವ ಒಂಬತ್ತು ಒಡಹುಟ್ಟಿದವರಲ್ಲಿ ನಾಲ್ವರು ಸೇರಿದ್ದಾರೆ. ತೇಜ್ ಪ್ರತಾಪ್ ಯಾದವ್ ಅವರು 2015ರ ವಿಧಾನಸಭಾ ಚುನಾವಣೆಯಲ್ಲಿ ರಾಜಕೀಯಕ್ಕೆ ಪಾದಾರ್ಪಣೆ ಮಾಡಿದ್ದರು, ರಾಜ್ಯ ಕ್ಯಾಬಿನೆಟ್‌ನಲ್ಲಿ ಎರಡು ಸಂಕ್ಷಿಪ್ತ ಅವಧಿಯೊಂದಿಗೆ ಎರಡನೇ ಅವಧಿಯ ಶಾಸಕರಾಗಿದ್ದಾರೆ.

### 25 ಲಕ್ಷ ರೂ. ಲಂಚ ಪಡೆದ ಪ್ರಕರಣದಲ್ಲಿ ಐಆರ್‌ಎಸ್ ಅಧಿಕಾರಿ ಬಂಧನ

**ನವದೆಹಲಿ:** ಸುಮಾರು 25 ಲಕ್ಷ ರೂ. ಲಂಚ ಸ್ವೀಕರಿಸಿದ ಆರೋಪದ ಮೇಲೆ ತೆರಿಗೆ ಪಾವತಿದಾರರ ಸೇವೆಗಳ ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹೆಚ್ಚುವರಿ ಮಹಾನಿರ್ದೇಶಕರನ್ನು ಸಿಬಿಐ ಬಂಧಿಸಿದೆ. ಭಾರತೀಯ ಕಂದಾಯ ಸೇವೆಯ 2007 ರ ಬ್ಯಾಚ್ ಅಧಿಕಾರಿ ಅಮಿತ್ ಕುಮಾರ್ ಸಿಂಘಾಲ್ ಸಿಂಗಲ್ ಬಂಧಿತ ಅಧಿಕಾರಿ. ಒಟ್ಟು 45 ಲಕ್ಷ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ಮೊದಲ ಕಂತಿನ 25 ಲಕ್ಷ ರೂ.ಗಳನ್ನು ಮೊಹಾಲಿಯಲ್ಲಿರುವ ಅವರ ನಿವಾಸಕ್ಕೆ ತಲುಪಿಸಲಾಗುತ್ತಿದೆ ಎಂದು ಅವರು ಸಿಬಿಐ ಮೂಲಗಳು ತಿಳಿಸಿವೆ. ದೂರಿನ ನಂತರ ಸಿಬಿಐ ಬಲೆ ಬೀಸಿ ಹರ್ಷ್ ಕೋಟಕ್ ಎಂಬ ಖಾಸಗಿ ವ್ಯಕ್ತಿಯನ್ನು ಬಂಧಿಸಿದೆ.

ಆದರೆ ಅಧಿಕಾರಿಯ ಮೊಹಾಲಿ ನಿವಾಸದಲ್ಲಿ ಸಿಂಗಲ್ ಪರವಾಗಿ ಲಂಚ ಸ್ವೀಕರಿಸುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಲಂಚದ ಬೇಡಿಕೆಯೊಂದಿಗೆ ಕಾನೂನು ಕ್ರಮ, ಭಾರೀ ದಂಡ ವಿಧಿಸುವಿಕೆ ಮತ್ತು ನಿಯಮ ಪಾಲಿಸದಿದ್ದರೆ ಕಿರುಕುಳದ ಬೆದರಿಕೆಗಳು ಇದ್ದವು ಎಂದು ಸಿಬಿಐ ವಕ್ತಾರರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಸಿಂಘಾಲ್ ಅವರನ್ನು ನವದೆಹಲಿಯ ವಸಂತ್ ಕುಂಜ್‌ನಲ್ಲಿರುವ ಅವರ ನಿವಾಸದಿಂದ ಬಂಧಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ದೆಹಲಿ, ಪಂಜಾಬ್, ಮುಂಬೈನಾದ್ಯಂತ ಹಲವು ಸ್ಥಳಗಳಲ್ಲಿ ಶೋಧ ನಡೆಸುತ್ತಿದೆ.

### 24 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಕೊಲೆ ಆರೋಪಿ ಸೆರೆ



**ಪಾಲ್ಘರ್:** ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯಲ್ಲಿ ನಡೆದ ಕೊಲೆ ಪ್ರಕರಣವೊಂದರಲ್ಲಿ ಆರೋಪಿಯಾಗಿ ಕಳೆದ 24 ವರ್ಷಗಳಿಂದ ತಲೆಮರೆಸಿಕೊಂಡಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಛೋಟೆ ಅಲಿಯಾಸ್ ಬಾಬುನ್ ಓಂಪ್ರಕಾಶ್ ಶ್ರೀಸಹುನಿ ದಿವಾಕರ್‌ನನ್ನು ಉತ್ತರ ಪ್ರದೇಶದ ಕಾನ್ಪುರದಿಂದ ಬಂಧಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ಆಯುಕ್ತ ಮದನ್ ಬಲ್ಲಾಲ್ ತಿಳಿಸಿದ್ದಾರೆ. ಕಳೆದ ಜ. 14, 2001ರಂದು, ಮೊಹರಂ ಅಲಿ ಮೊಹಮ್ಮದ್ ಇಬ್ರಾಹಿಂ ಆಲಿ (46) ಎಂಬುವವರನ್ನು ವಿರಾರ್ ಪ್ರದೇಶದಲ್ಲಿ ಹರಿತವಾದ ಆಯುಧದಿಂದ ಇರಿದು ಕೊಲೆ ಮಾಡಿದ್ದ. ಹತ್ತಿರದ ಹಾರ್ಡ್‌ವೇರ್ ಅಂಗಡಿಯಿಂದ ಆರೋಪಿಗಳ ಆಟೋರಿಕ್ಷಾಗಳಲ್ಲಿ ಇಬ್ರಾಹಿಂ ಅಲಿ ನಿಯಮಿತವಾಗಿ ಪ್ರಯಾಣಿಸುತ್ತಿದ್ದರು. ಆ ಸಮಯದಿಂದ ನಾವು ಆಟೋರಿಕ್ಷಾ ಚಾಲಕರನ್ನು ಗುರುತಿಸಲು, ಪ್ರಾದೇಶಿಕ ಸಾರಿಗೆ ಕಚೇರಿ ದಾಖಲೆಗಳೊಂದಿಗೆ ಪರಿಶೀಲಿಸಲು ಪ್ರಾರಂಭಿಸಿದ್ದೇವೆ.

ನಂತರ ನಾವು ಆರೋಪಿಯ ಮಗ, ಸೋದರಳಿಯ ಮೂಲಕ ಪಡೆದ ಫೋನ್ ಸಂಖ್ಯೆ ಗಳ ತಾಂತ್ರಿಕ ವಿಶ್ಲೇಷಣೆಯನ್ನು ನಡೆಸಿದ್ದೇವೆ. ಹೀಗಾಗಿ ನಾವು ಕಾಲ್ಪುರದ ಪಹಾರ್‌ಪುರಲ್ಲಿ ವೇಶಬದಲಿಸಿ ನೆಲೆಸಿದ್ದ ಈಗ ಆರೋಪಿಯನ್ನು ಸೆರೆಹಿಡಿದ್ದಿದ್ದೇವೆ ಎಂದು ಅವರು ಹೇಳಿದರು. ವಿಶೇಷ ಪೊಲೀಸ್ ತಂಡವನ್ನು ಉತ್ತರ ಪ್ರದೇಶಕ್ಕೆ ಕಳುಹಿಸಲಾಯಿತು, ಹಲವಾರು ದಿನಗಳ ಕಣ್ಗಾವಲಿನ ನಂತರ, ಕಾನ್ಪುರ ಪೊಲೀಸರ ಸಹಾಯದಿಂದ ಹಮೀದ್ ಪುರ ರಸ್ತೆಯ ಪೆಟ್ರೋಲ್ ಪಂಪ್ ಬಳಿ ಆರೋಪಿಯನ್ನು ಬಂಧಿಸಲಾಯಿತು ಎಂದು ಅಧಿಕಾರಿ ತಿಳಿಸಿದ್ದಾರೆ.

### ಫೋಟೋ ತೆಗೆಯುತ್ತಿದ್ದ ವ್ಯಕ್ತಿ ಸಮುದ್ರಕ್ಕೆ ಬಿದ್ದು ಸಾವು

**ಮುಂಬೈ:** ಕರಾವಳಿ ಬಳಿ ಸ್ನೇಹಿತರೊಂದಿಗೆ ಫೋಟೋ ತೆಗೆಯುತ್ತಿದ್ದಾಗ ಸಮುದ್ರಕ್ಕೆ ಬಿದ್ದು ಯುವಕನೊಬ್ಬ ಸಾವನ್ನಪ್ಪಿರುವ ಘಟನೆ ಕಳೆದ ರಾತ್ರಿ ಇಲ್ಲಿ ನಡೆದಿದೆ. ಅನಿಲ್ ಅರ್ಜುನ್ ರಜಪೂತ್ (20) ಮೃತ ಯುವಕನಾಗಿದ್ದು, ಜುಹು ಜೆಟ್ಟಿಯಲ್ಲಿ ಸಮುದ್ರಕ್ಕೆ ಬಿದ್ದಿದ್ದಾನೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಮುಂಬೈ ಅಗ್ನಿಶಾಮಕ ದಳವು ಸ್ಥಳಕ್ಕೆ ದಾವಿಸಿದ್ದು, ಸ್ಥಳದಲ್ಲಿದ್ದ ಜೀವರಕ್ಷಕರು ನಂತರ ಯುವಕನನ್ನು ನೀರಿನಿಂದ ಹೊರತೆಗೆಯುವಲ್ಲಿ ಯಶಸ್ವಿಯಾದರು. ನಂತರ ಹತ್ತಿರದ ಕೂಪರ್ ಆಸ್ಪತ್ರೆಗೆ ಸಾಗಿಸಿರೂ ಅಲ್ಲಿ ವೈದ್ಯರು ಆತ ಮೃತಪಟ್ಟಿದ್ದಾನೆ ಎಂದು ಘೋಷಿಸಿದರು ಎಂದು ಅಧಿಕಾರಿ ಹೇಳಿದರು. ಅನಿಲ್, ಅರ್ಜುನ್ ರಜಪೂತ್ ತನ್ನಸೇಹಿತನ ಜೊತೆ ನಿನ್ನೆ ಸಂಜೆ ಸಮುದ್ರ ತೀರಕ್ಕೆ ಬಂದು ವಿಹರಿಸುತ್ತಿದ್ದರು ಈ ವೇಳೆ ಸಮುದ್ರದ ತಡೆಗೋಡೆ ಮೇಲೆ ನಿಂತಿದ್ದಗ ಆಯ ತಪ್ಪಿ ನೀರಿಗೆ ಬಿದ್ದಿದ್ದಾರೆ.

